12 December 2025 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916

ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು

ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 51 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

**ಭಾವನಾಂತರಂಗ**

ಒಳ್ಳೆಯ ನಿರ್ಧಾರ ನಮ್ಮನ್ನು ಅರ್ಧ ಗೆಲ್ಲಿಸಿದರೆ, ಇನ್ನರ್ಧ ನಮ್ಮ ಪ್ರಯತ್ನ, ಪರಿಶ್ರಮ ಗೆಲ್ಲಿಸುತ್ತದೆ !

ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಯಾರಿದ್ದರು,
ಯಾರಿಲ್ಲದಿದ್ದರೂ ಬದುಕು
"ಸಾಗುತ್ತದೆ.., ಒಮ್ಮೆ
ನಾವಂದುಕೊಂಡ ಕಡೆಗೆ,,,,
ಇನ್ನೊಮ್ಮೆ ನಾವಂದುಕೊಳ್ಳದ
ಕಡೆಗೆ.., ಮತ್ತೊಮ್ಮೆ ನಾವೆಂದು
ಊಹಿಸದ ಕಡೆಗೆ....,

ಮೈಲಾರ ಸಾವಿತ್ರಿಬಾಯಿ

# ಸಾಮಾಜಿಕ ಬಹಿಷ್ಕಾರಕ್ಕೆ ಶಿಕ್ಷೆ

**ಮಸೂದೆ ಮಂಡನೆ: 3 ವರ್ಷ ಜೈಲು, 1 ಲಕ್ಷ ದಂಡಕ್ಕೆ ಅವಕಾಶ**

**ಬೆಳಗಾವಿ:** ಗ್ರಾಮಗಳಲ್ಲಿ ಪಂಚಾಯಿತಿ ಮೂಲಕ ಯಾವುದೇ ವ್ಯಕ್ತಿ, ಕುಟುಂಬ ಅಥವಾ ಕುಟುಂಬದ ಸದಸ್ಯರಿಗೆ ಸಾಮಾಜಿಕ ಬಹಿಷ್ಕಾರ ಹಾಕುವುದನ್ನು ನಿಷೇಧಿಸುವ ಮತ್ತು ಅಪರಾಧೀಕರಿಸುವ ಮಸೂದೆಯನ್ನು ರಾಜ್ಯ ಸರ್ಕಾರ ಗುರುವಾರ ವಿಧಾನಸಭೆಯಲ್ಲಿ ಮಂಡಿಸಿದೆ.

ನಿಯಮ ಉಲ್ಲಂಘಿಸಿ ಸಾಮಾಜಿಕ ಬಹಿಷ್ಕಾರ ಹಾಕುವವರಿಗೆ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು 1 ಲಕ್ಷ ರೂ. ದಂಡ ವಿಧಿಸಲು ಮಸೂದೆಯಲ್ಲಿ ಅವಕಾಶ ಕಲ್ಪಿಸಿದೆ.

ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಗುರುವಾರ ವಿಧಾನಸಭೆಯಲ್ಲಿ ಕರ್ನಾಟಕ ಸಾಮಾಜಿಕ ಬಹಿಷ್ಕಾರ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ) ಮಸೂದೆ, 2025ಅನ್ನು ಮಂಡಿಸಿದರು. ಅದರಲ್ಲಿ 20 ರೀತಿಯ ಸಾಮಾಜಿಕ ಬಹಿಷ್ಕಾರಗಳನ್ನು ಪಟ್ಟಿ ಮಾಡಿದ್ದಾರೆ. ಯಾವುದೇ ವ್ಯಕ್ತಿ, ಕುಟುಂಬದೊಂದಿಗೆ ವ್ಯವಹರಿಸಲು ನಿರಾಕರಿಸುವುದು, ಅವರ ಕೆಲಸ ಮಾಡಲು ಅಥವಾ ವ್ಯಾಪಾರ ಮಾಡಲು

ಪುಟ 2ಕ್ಕೆ

## ಗ್ರೇಟರ್ ಬೆಂಗಳೂರಿಗೆ ತಿದ್ದುಪಡಿ



ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪರವಾಗಿ ಸಚಿವ ಮಹದೇವಪ್ಪ ಅವರು, ಗ್ರೇಟರ್ ಬೆಂಗಳೂರು ಆಡಳಿತ (ಎರಡನೇ ತಿದ್ದುಪಡಿ) ಮಸೂದೆ 2025 ಅನ್ನು ಗುರುವಾರ ಮಂಡಿಸಿದರು. ಈ ಮಸೂದೆಯಲ್ಲಿ ಲೋಕಸಭೆ, ರಾಜ್ಯಸಭೆ, ರಾಜ್ಯ ವಿಧಾನಸಭೆ ಮತ್ತು ರಾಜ್ಯ ವಿಧಾನ ಪರಿಷತ್ತಿನ ಸದಸ್ಯರನ್ನು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸದಸ್ಯರನ್ನಾಗಿ ಸೇರಿಸಲು ತಿದ್ದುಪಡಿ ಮಾಡಲಾಗಿದೆ. ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮತ್ತು ಹಣಕಾಸು ಇಲಾಖೆಯ ಪ್ರಧಾನ

ಪುಟ 2ಕ್ಕೆ

## ಬಸ್‌ಗೆ ಕಾರು ಡಿಕ್ಕಿ: ಮೂವರು ಸಾವು

**ದೇವನಹಳ್ಳಿ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಹೊರವಲಯದ ಲಾಲಗೊಂಡನಹಳ್ಳಿ ಗೇಟ್ ಬಳಿ ಕಳೆದ ತಡರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತಪಟ್ಟವರನ್ನು ಮೋಹನ್ ಕುಮಾರ್ (33), ಸುಮನ್ (28), ಸಾಗರ್ (23) ಎಂದು ಗುರುತಿಸಲಾಗಿದೆ. ಇವರೆಲ್ಲ ದೇವನಹಳ್ಳಿ ತಾಲೂಕಿನ ಸಾದಹಳ್ಳಿ ನಿವಾಸಿಗಳು.

ಚಿಕ್ಕಬಳ್ಳಾಪುರ ಕಡೆಯಿಂದ ದೇವನಹಳ್ಳಿ ಕಡೆಗೆ ಬರುತ್ತಿದ್ದ ಕಾರು ಅತಿವೇಗದಲ್ಲಿ ಬಂದು ಚಾಲಕನ ನಿಯಂತ್ರಣ ತಪ್ಪಿದ ಡಿವೈಡರ್ ಗೆ ಹಾರಿ ಎದುರುಗಡೆಯಿಂದ ಬರುತ್ತಿದ್ದ ಕೆಎಸ್ಆರ್‌ಟಿಸಿ ಬಸ್‌ಗೆ ಡಿಕ್ಕಿಯಾಗಿದೆ. ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದೆ. ಕಾರಿನಲ್ಲಿದ್ದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ ಕೆಲವರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅತಿವೇಗದ ಚಾಲನೆ ದುರಂತಕ್ಕೆ ಕಾರಣ ಎನ್ನಲಾಗಿದೆ.

# 2.88 ಲಕ್ಷ ಹುದ್ದೆ ಭರ್ತಿಗೆ ಕ್ರಮ

**ಹಂತ ಹಂತವಾಗಿ ನೇಮಕಾತಿ: ಸಿಎಂ ಸಿದ್ದರಾಮಯ್ಯ ಭರವಸೆ**

**ಬೆಳಗಾವಿ:** ರಾಜ್ಯದ ವಿವಿಧ ಇಲಾಖೆಗಳಲ್ಲಿ 2.88 ಲಕ್ಷ ಹುದ್ದೆಗಳು ಖಾಲಿ ಇವೆ. ಖಾಲಿ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಹನುಮಂತ ನಿರಾಣಿ ಗುರುವಾರ ಪ್ರಶ್ನೆ ಕೇಳಿದರು. ಆದಷ್ಟೂ ಬೇಗ ಖಾಲಿ ಹುದ್ದೆ ತುಂಬಬೇಕು. ನಿಗಮಗಳು, ವಿಶ್ವವಿದ್ಯಾಲಯಗಳಲ್ಲಿ ಹುದ್ದೆ ಖಾಲಿ ಇವೆ. ಧಾರವಾಡ, ವಿಜಯಪುರದಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ಮಾಡಿದ್ದಾರೆ. ಕಾಲ ಮಿತಿಯೊಳಗೆ ಹುದ್ದೆಗಳನ್ನ ಭರ್ತಿ ಮಾಡಿ ಎಂದು ಆಗ್ರಹಿಸಿದರು. ಇದಕ್ಕೆ ಸಿಎಂ ಸಿದ್ದರಾಮಯ್ಯ ಉತ್ತರ ನೀಡಿ, 2.84,881 ಹುದ್ದೆಗಳು ಖಾಲಿ ಇವೆ.

ಪುಟ 2ಕ್ಕೆ

## ಕ್ರೀಡಾಪಟುಗಳಿಗೆ ಶೇ.2 ಮೀಸಲಾತಿ

**ಬೆಂಗಳೂರು:** ರಾಜ್ಯದ ಎಲ್ಲಾ ಇಲಾಖೆಗಳಲ್ಲಿ ಕ್ರೀಡಾಪಟುಗಳಿಗೆ ಶೇ.2ರಷ್ಟು ಉದ್ಯೋಗ ಮೀಸಲಾತಿ ನೀಡಲಾಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ಐವಾನ್ ಡಿಸೋಜ ಪ್ರಶ್ನೆ ಕೇಳಿದರು. ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗ ಕೊಡಬೇಕು. ಈವರೆಗೂ 13 ಜನಕ್ಕೆ ಮಾತ್ರ ಹುದ್ದೆ ನೀಡಲಾಗಿದೆ. ನೇರ ನೇಮಕಾತಿಯಲ್ಲಿ ಶೇ.3 ಹುದ್ದೆ ಕ್ರೀಡಾಪಟುಗಳಿಗೆ ಮೀಸಲು ಇಡಬೇಕು. ವಿದ್ಯಾರ್ಥಿಗಳಿಗೆ ಕ್ರೀಡೆಯಲ್ಲಿ ಪ್ರೋತ್ಸಾಹ ಕೊಡಲು ಒಂದು ಪಾಲಿಸಿ ತರಬೇಕು. ಕಬಡ್ಡಿಗೂ ಪ್ರೋತ್ಸಾಹ ಕೊಡಬೇಕು ಮನವಿ ಮಾಡಿದರು. ಇದಕ್ಕೆ ಸಿಎಂ ಸಿದ್ದರಾಮಯ್ಯ ಉತ್ತರ ನೀಡಿ, ಈವರೆಗೂ 13 ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗ ಕೊಡಲಾಗಿದೆ. ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್,

ಪುಟ 2ಕ್ಕೆ

# ಕಾಣದ ಕುರ್ಚಿಗೆ ಹಂಬಲಿಸಿದೇ ಮನ!

## ಸದನದಲ್ಲಿ ಡಿಸಿಎಂ ಡಿಕೆಶಿ ಕಾಲೆಳೆದ ಶಾಸಕ ಸುನೀಲ್ ಕುಮಾರ್

**ಬೆಳಗಾವಿ:** ಕಾಣದ ಕುರ್ಚಿಗೆ ಹಂಬಲಿಸಿದೇ ಮನ!... ಅಲ್ಲಿ ಕೂಡಬಲ್ಲೆನೆ ಒಂದು ದಿನ.... ಎಂದು ಹಾಡು ಹಾಡುವ ಮೂಲಕ ಬಿಜೆಪಿ ಸದಸ್ಯ ಸುನೀಲ್ ಕುಮಾರ್ ಅವರು ಡಿಸಿಎಂ ಡಿ.ಕೆ.ಶಿವಕುಮಾರ್ ಕಾಲೆಳೆದು ಲೇವಡಿ ಮಾಡಿದರು.



ಸದನದಲ್ಲಿ ಗುರುವಾರ ಉತ್ತರ ಕರ್ನಾಟಕ ಕುರಿತ ಚರ್ಚೆ ಸಂದರ್ಭದಲ್ಲಿ ಮೇಕೆದಾಟು ಯೋಜನೆ ಬಗ್ಗೆ ಸರ್ಕಾರದ ಮೌನದ ಬಗ್ಗೆ ಬೆಲ್ಲದ್ ಪ್ರಸ್ತಾಪ ಮಾಡಿ ತಮಿಳುನಾಡಿನಲ್ಲಿ ಡಿಎಂಕೆ ಮೈತ್ರಿ ಕಾರಣಕ್ಕಾಗಿ ಮೇಕೆದಾಟು ಕೆಲಸ ಆರಂಭವಾಗಿಲ್ಲವೇ ಎಂದು ಪ್ರಶ್ನಿಸಿದರು.

ಈ ವೇಳೆ ಡಿ.ಕೆ ಶಿವಕುಮಾರ್ ಮಧ್ಯ ಪ್ರವೇಶ ಮಾಡಿ, ನೀವು ಸಿಎಂ ಆಗಬೇಕು ಎಂದುಕೊಂಡವರು. ವಿಪಕ್ಷದ ನಾಯಕರು ಆಗಬೇಕು ಎಂದ್ದಿದ್ದೀರಿ. ನಿಮಗೆ ಅನುಭವ ಇದೆ. ಮೊನ್ನೆ ತಾನೆ ನ್ಯಾಯಾಲಯದ ಆದೇಶ ಆಗಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯೂಸಿ) ಆರು ತಿಂಗಳ ಸಮಯಾವಕಾಶ ನೀಡಿ ಸರ್ಕಾರ ತೀರ್ಮಾನ ಮಾಡಬೇಕು ಎಂದು ಸೂಚಿಸಿದೆ. ಹೀಗಾಗಿ ನಾನು ನಮ್ರತೆಯಿಂದ ಕೈಮುಗಿದು ಕೇಳುತ್ತೇನೆ. ನೀವೆಲ್ಲಾ ಸಹಕಾರ ಕೊಟ್ಟರೆ ಆದಷ್ಟು ಬೇಗ ನಿಮ್ಮ ಜೊತೆ ಭೂಮಿ ಪೂಜೆ ಮಾಡುತ್ತೇನೆ ಎಂದು ಉತ್ತರಿಸಿದರು. ಈ ವೇಳೆ ಸುನೀಲ್ ಕುಮಾರ್ ಮಧ್ಯ ಪ್ರವೇಶ ಮಾಡಿ,

ಪುಟ 2ಕ್ಕೆ



### ನಾವು ಮಾತನಾಡಿದರೆ ಬಲಾತ್ಕಾರ: ಅವರದ್ದು ಚಮತ್ಕಾರವೇ–ಇಕ್ಬಾಲ್

**ಬೆಳಗಾವಿ:** ನಾವು ಮಾತನಾಡಿದರೆ ಬಲಾತ್ಕಾರ. ಅವರು ಮಾತನಾಡಿದರೆ ಚಮತ್ಕಾರವೇ ಎಂದು ಕಾಂಗ್ರೆಸ್ ಶಾಸಕ ಇಕ್ಬಾಲ್ ಹುಸೇನ್ ಖಾರವಾಗಿ ಪ್ರಶ್ನಿಸಿದ್ದಾರೆ.

ಯತೀಂದ್ರ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ನಾವು ಏನಾದರೂ ಮಾತನಾಡಿದರೆ ನೋಟಿಸ್ ಕೊಡುತ್ತಾರೆ. ನಮ್ಮ ವರಿಷ್ಠರು ಅಷ್ಟು ವೀಕ್ ಅಲ್ಲ. ಬಲಿಷ್ಠವಾಗಿದೆ. ಹೈಕಮಾಂಡ್ ಎಲ್ಲವನ್ನೂ ತೀರ್ಮಾನ ಮಾಡುತ್ತದೆ. ಯತೀಂದ್ರ ಹೇಳಿಕೆ ಹಿಂದೆ ಯಾರಿದ್ದಾರೆ ಗೊತ್ತಿಲ್ಲ. ಪದೇ ಪದೇ ಅವರು ನೀಡುವ ಹೇಳಿಕೆಯ ಬಗ್ಗೆ ಅವರನ್ನೇ ಕೇಳಬೇಕು. ನಮಗೆ ಹೇಳಿಕೆ ಕೊಡಬೇಡಿ ಎಂದಿದ್ದಾರೆ. ಹೀಗಾಗಿ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಹೇಳಿದರು. ಈ

ಪುಟ 2ಕ್ಕೆ

### ಸಿಎಂ ಉತ್ತರಿಸಲಿ: ಡಿಕೆಶಿ ಅಸಮಾಧಾನ

**ಬೆಳಗಾವಿ:** ಸಿದ್ದರಾಮಯ್ಯ ಪುತ್ರ ಯತೀಂದ್ರ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಡಿಸಿಎಂ ಡಿ.ಕೆ ಶಿವಕುಮಾರ್ ಅವರು, ಇದಕ್ಕೆ ಸಿಎಂ ಸಿದ್ದರಾಮಯ್ಯ ಅವರೇ ಉತ್ತರ ನೀಡುತ್ತಾರೆ. ಅವರನ್ನೇ ಕೇಳಿ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬೆಳಗಾವಿಯಲ್ಲಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಸಿಎಂ ಅವರೇ ಇದಕ್ಕೆ ಉತ್ತರ ನೀಡಬೇಕು ಎಂದು ಮಾರ್ಮಿಕವಾಗಿ ಹೇಳಿದರು.

ಕುರ್ಚಿ ಕಿತ್ತಾಟದ ಬಗ್ಗೆ ಯಾರೂ ಬಹಿರಂಗ ಹೇಳಿಕೆ ನೀಡದಂತೆ ಸಿಎಂ ಸೂಚಿಸಿದ್ದರೂ ಪುತ್ರ ಮತ್ತೆ ಈ ಹೇಳಿಕೆಯನ್ನು ಮಾಧ್ಯಮಗಳ ಮುಂದೆ ನೀಡಿದ್ದು ರಾಜ್ಯ ರಾಜಕಾರಣ ಬಗ್ಗೆ ಚರ್ಚೆ ಹುಟ್ಟುಹಾಕಿದೆ.

### ನಾಯಕತ್ವದ ಬೆಂಕಿಗೆ ಮತ್ತೆ ತುಪ್ಪ ಸುರಿದ ಯತೀಂದ್ರ

**ಬೆಳಗಾವಿ:** ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ ಎಂದು ಹೈಕಮಾಂಡ್ ಸ್ಪಷ್ಟವಾಗಿ ಹೇಳಿದೆ ಎಂದು ಹೇಳುವ ಮೂಲಕ ಸಿಎಂ ಪುತ್ರ ಯತೀಂದ್ರ ಸಿದ್ದರಾಮಯ್ಯ ಮತ್ತೆ ಸಿಎಂ ಕುರ್ಚಿ ವಿವಾದದ ಬೆಂಕಿಗೆ ತುಪ್ಪ ಸುರಿದಿದ್ದಾರೆ.



ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯಿಸಿದ ಅವರು, ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಇಲ್ಲ ಎಂದು ಹೈಕಮಾಂಡ್ ಸ್ಪಷ್ಟವಾಗಿ ಹೇಳಿದೆ. ನನ್ನ ತಂದೆಯೇ 5 ವರ್ಷ ಮುಖ್ಯಮಂತ್ರಿ ಆಗಿರುತ್ತಾರೆ ಎಂದು ವಿರೋಧಿ ಬಣಕ್ಕೆ ಸ್ಪಷ್ಟ ಸಂದೇಶ ನೀಡಿದರು. ಕುರ್ಚಿ ಕಿತ್ತಾಟದ ಬಗ್ಗೆ ಯಾರೂ ಬಹಿರಂಗ ಹೇಳಿಕೆ ನೀಡದಂತೆ ಸಿಎಂ ಸೂಚಿಸಿದ್ದರೂ ಪುತ್ರ ಮತ್ತೆ ಈ ವಿಚಾರವನ್ನು ಕೆದಕಿ ಉರಿಯುವ ಬೆಂಕಿಗೆ ತುಪ್ಪ ಸುರಿದಿದ್ದಾರೆ.

ಸಿಎಂ ಸಿದ್ದರಾಮಯ್ಯ ಮತ್ತು ಡಿ.ಕೆ ಶಿವಕುಮಾರ್ ಮಧ್ಯೆ ಎರಡು ಬ್ರೇಕ್‌ಫಾಸ್ಟ್ ಮೀಟಿಂಗ್ ನಡೆದಿತ್ತು. ಡಿಕೆಶಿ ಮನೆಗೆ ಆಗಮಿಸಿ ಪ್ರತಿಕ್ರಿಯಿಸಿದ್ದ ಸಿಎಂ ಹೈಕಮಾಂಡ್ ಹೇಳುವವರೆಗೆ ನಾನೇ ಸಿಎಂ

ಪುಟ 2ಕ್ಕೆ

# ಪ್ರಜ್ವಲ್‌ಗೆ 'ಸುಪ್ರೀಂ ಶಾಕ್'


**ಪ್ರಕರಣಗಳ ವರ್ಗಾವಣೆಗೆ ಸುಪ್ರೀಂ ಕೋರ್ಟ್ ತಿರಸ್ಕಾರ**

**ನವದೆಹಲಿ:** ಎರಡು ಅತ್ಯಾಚಾರ ಪ್ರಕರಣಗಳ ವಿಚಾರಣೆಯನ್ನು ಬೇರೊಂದು ಪೀಠಕ್ಕೆ ವರ್ಗಾಯಿಸುವಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾ ಮಾಡಿದೆ. ಈ ಮೂಲಕ ಪ್ರಜ್ವಲ್ ರೇವಣ್ಣ ಅವರಿಗೆ ಸುಪ್ರೀಂ ಕೋರ್ಟ್ ನಲ್ಲಿಯೂ ಹಿನ್ನಡೆ ಆಗಿದೆ.

ಈ ಹಿಂದೆ ವಿಚಾರಣಾ ನ್ಯಾಯಾಲಯದ ನ್ಯಾಯಾಧೀಶರು ಮತ್ತೊಂದು ಅತ್ಯಾಚಾರ ಪ್ರಕರಣದಲ್ಲಿ ತಮ್ಮನ್ನು ಅಪರಾಧಿ ಎಂದು ಘೋಷಿಸಿದ್ದಾರೆ. ಈಗ ಅದೇ ಕೋರ್ಟ್‌ನಲ್ಲಿ ಮತ್ತೆರಡು ಪ್ರಕರಣಗಳು ಬಾಕಿ ಇವೆ. ಮುಂದಿನ ಪ್ರಕರಣದಲ್ಲೂ ತಮ್ಮ ವಿರುದ್ಧ ಪಕ್ಷಪಾತ ತೋರುವ ಸಾಧ್ಯತೆಯಿದೆ ಎಂಬ ಆತಂಕವನ್ನು ಪ್ರಜ್ವಲ್ ರೇವಣ್ಣ ವ್ಯಕ್ತಪಡಿಸಿದ್ದರು.

ಪ್ರಜ್ವಲ್ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠ ಅರ್ಜಿಯನ್ನು ತಿರಸ್ಕರಿಸಿದೆ. ವಿಚಾರಣಾ ನ್ಯಾಯಾಧೀಶರ ಈ ಅವಲೋಕನಗಳು ಪಕ್ಷಪಾತವನ್ನು ಪ್ರತಿಪಾದಿಸಲು ಅಥವಾ ಸಮಸ್ಯೆಯನ್ನು ಪೂರ್ವನಿರ್ಧರಿಸಲು ಅಡಿಪಾಯವಾಗುವುದಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಅರ್ಜಿದಾರರು ಹಿಂದಿನ ಪ್ರಕರಣದಲ್ಲಿ ತಪ್ಪಿತಸ್ಥರೆಂದು ಸಾಬೀತಾಗಿದೆ ಎಂಬ ಅಂಶದಿಂದ ನ್ಯಾಯಾಧೀಶರು ಪ್ರಭಾವಿತರಾಗಬಾರದು. ಪ್ರಸ್ತುತ ವಿಚಾರಣೆಯಲ್ಲಿ ಒದಗಿಸಲಾದ ಸಾಕ್ಷ್ಯಗಳ ಆಧಾರದ ಮೇಲೆ ವಿಚಾರಣೆಯನ್ನು ಮುಕ್ತಾಯಗೊಳಿಸಬೇಕು. ಹಿಂದಿನ ಅಪರಾಧ ನಿರ್ಣಯದ ಆಧಾರದ ಮೇಲೆ ಮತ್ತು ಮೇಲ್ಮನವಿ ಹೈಕೋರ್ಟ್‌ನಲ್ಲಿ ಬಾಕಿ ಇರುವಾಗ ಅಂತಹ ಅಪರಾಧ ನಿರ್ಣಯಕ್ಕೆ ಕಾರಣವಾದ ವಿಚಾರಣೆ ಆಧಾರದ ಮೇಲೆ ಯಾವುದೇ ತೀರ್ಮಾನವನ್ನು ತೆಗೆದುಕೊಳ್ಳಬಾರದು. ಪ್ರಕರಣದಲ್ಲಿ ನಮಗೆ ಅಂತಹ ಯಾವುದೇ ಸಂದೇಹವಿಲ್ಲ ಎಂದು ಸಿಜೆಐ ಸೂರ್ಯಕಾಂತ್ ಆದೇಶದಲ್ಲಿ ತಿಳಿಸಿದ್ದಾರೆ.



# ಹೊಸ ನ್ಯಾಯಬೆಲೆ ಅಂಗಡಿ ಮಂಜೂರು

**ಪರಿಶಿಷ್ಟ ಜಾತಿ, ಪಂಗಡಗಳಿಗೆ ಮೀಸಲಾತಿ ಜಾರಿ: ಕೆ.ಎಚ್.ಮುನಿಯಪ್ಪ**

**ಬೆಳಗಾವಿ:** ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರಾತಿ ಮಾಡಲು ಸರ್ಕಾರ ಮುಂದಾಗಿದೆ. ಅಗತ್ಯ ಗ್ರಾಮಗಳಲ್ಲಿ ಉಪಕೇಂದ್ರ ತೆರೆದು ಆಹಾರ ಧಾನ್ಯ ಹಂಚಿಕೆಗೆ ಕ್ರಮವಹಿಸುವುಲಾಗುವುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

ವಿಧಾನಸಭೆಯಲ್ಲಿ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಶರಣಗೌಡ ಕಂದಕೂರ ಪ್ರಶ್ನೆಗೆ ಉತ್ತರಿಸಿದ ಅವರು, ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ ನಿಯಂತ್ರಣ 2016 ಕಲಂ(6)ರಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಅಗತ್ಯಾನುಸಾರ ಹೊಸ ನ್ಯಾಯಬೆಲೆ ಅಂಗಡಿ ಮಂಜೂರಾತಿಗೆ ಕ್ರಮವಹಿಸಲಾಗುತ್ತಿದೆ ಎಂದು ಹೇಳಿದರು.



ಸಣ್ಣ ಸಣ್ಣ ಗ್ರಾಮದ ಪಡಿತರ ಚೀಟಿದಾರರಿಗೆ ತೊಂದರೆಯಾಗದಂತೆ ನ್ಯಾಯಬೆಲೆ ಅಂಗಡಿ ವರ್ತಕರಿಗೆ ಗ್ರಾಮಗಳಲ್ಲಿ ಉಪಕೇಂದ್ರಗಳನ್ನು ತೆರೆದು ಆಹಾರ ಧಾನ್ಯ ಹಂಚಿಕೆ ಮಾಡಲು ಕ್ರಮವಹಿಸಲಾಗುವುದು. ಪಡಿತರ ಚೀಟಿಗಳ ಸಂಖ್ಯಾನುಸಾರ ಅಗತ್ಯವಿದ್ದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಗಳ ಸಮುದಾಯಗಳ ಜನಸಂಖ್ಯೆಯು ಶೇ.40ಕ್ಕಿಂತ ಹೆಚ್ಚಿರುವ ಪ್ರದೇಶದಲ್ಲಿ ಆದ್ಯತೆಯ ಮೇಲೆ ಹೊಸ ನ್ಯಾಯಬೆಲೆ ಅಂಗಡಿಗಳು ಮತ್ತು ನವೀಕರಿಸಿದ ನ್ಯಾಯಬೆಲೆ ಅಂಗಡಿಗಳನ್ನು ಆ ಸಮುದಾಯದವರಿಗೆ ನೀಡಲು ಅಧಿಸೂಚನೆಯನ್ನು ಹೊರಡಿಸಲಾಗಿದೆ ಎಂದರು.

ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಸಂದರ್ಭದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಸಮುದಾಯದ ಸಂಘ ಸಂಸ್ಥೆಗಳಿಗೆ, ಸಮುದಾಯದ ಖಾಸಗಿ ವ್ಯಕ್ತಿಗಳಿಗೆ ಮೀಸಲಾತಿಯನ್ನು ಅನುಸರಿಸಿ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಆದ್ಯತೆ ನೀಡಲಾಗುವುದು. ಈ ಬಗ್ಗೆ ಜಿಲ್ಲಾ ಮಟ್ಟದ ಸಮಿತಿಯನ್ನು ರಚಿಸಿ ಮಾರ್ಗಸೂಚಿಗಳನ್ನು ಸಹ ಹೊರಡಿಸಲಾಗಿದೆ. ಸರ್ಕಾರದ ಆದೇಶದಂತೆ 75 ವಯಸ್ಸಿನ ಮೇಲ್ಪಟ್ಟ ಒಂಟಿ ಹಿರಿಯ ನಾಗರೀಕರು ಮಾತ್ರ ಇರುವ ಮನೆಗಳಿಗೆ ಅನ್ನಸುವಿಧಾ ಯೋಜನೆ ಮೂಲಕ ಫಲಾನುಭವಿಗಳ ಮನೆ ಬಾಗಿಲಿಗೆ ಪಡಿತರ ವಿತರಣೆ ಕಾರ್ಯವನ್ನು ಅನುಷ್ಠಾನಗೊಳಿಸಲಾಗಿರುತ್ತದೆ ಎಂದು ವಿವರಿಸಿದರು.

# ಗಣೇಶ್ ಹತ್ಯೆ: 6 ಮಂದಿ ಬಂಧನ

**ಚಿಕ್ಕಮಗಳೂರು:** ಕಾಂಗ್ರೆಸ್ ಮುಖಂಡ, ಗ್ರಾಮ ಪಂಚಾಯಿತಿ ಸದಸ್ಯ ಗಣೇಶ್ ಹತ್ಯೆ ಪ್ರಕರಣದ 6 ಮಂದಿಆರೋಪಿಗಳನ್ನು ತಮಿಳುನಾಡಿನ ಮಧುರೈನಲ್ಲಿ ಪೊಲೀಸರು ಬಂಧಿಸಿದ್ದಾರೆ. ಬಂಧಿತರನ್ನು ನಿತಿನ್, ದರ್ಶನ್, ಅಜಯ್, ದರ್ಶನ್ ನಾಯ್ಕ್, ಯೋಗೇಶ್, ಫೈಸಲ್ ಎಂದು ಗುರುತಿಸಲಾಗಿದೆ.

ಸಖರಾಯಪಟ್ಟಣದಲ್ಲಿ ಡಿ.5ರಂದು ರಾತ್ರಿ ಗಣೇಶ್ ಹತ್ಯೆ ನಡೆದಿತ್ತು. ಆರೋಪಿಗಳ ಬಂಧನಕ್ಕೆ ನಾಲ್ಕು ವಿಶೇಷ ತಂಡ ರಚನೆ ಮಾಡಲಾಗಿತ್ತು. ಗಣೇಶ್ ಕೊಲೆ ಪ್ರಕರಣದಲ್ಲಿ ಈವರೆಗೂ 12 ಜನರನ್ನು ಪೊಲೀಸರು ಬಂಧಿಸಿದ್ದಾರೆ. ಪೊಲೀಸ್ ಕಸ್ಟಡಿಯಲ್ಲಿರುವ ಸಂಜಯ್, ನಾಗಭೂಷಣ್, ಮಿಥುನ್ ಸೇರಿದಂತೆ 6 ಆರೋಪಿಗಳನ್ನು ಪೊಲೀಸರು ನ್ಯಾಯಾಲಯಕ್ಕೆ ಹಾಜರುಪಡಿಸಲಿದ್ದಾರೆ.

## ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಕೇಂದ್ರ ಅಸ್ತು

**ಬೆಂಗಳೂರು:** ಬೆಂಬಲ ಬೆಲೆ ಯೋಜನೆಯಡಿ ಕರ್ನಾಟಕದಲ್ಲಿ 9.67 ಲಕ್ಷ ಟನ್ ತೊಗರಿ ಖರೀದಿಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ರಾಜ್ಯದ ರೈತರ ನೆರವಿಗೆ ಕೇಂದ್ರ ಸರ್ಕಾರ ತಕ್ಷಣ ಸ್ಪಂದಿಸಿದೆ.



ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆಯಲ್ಲಿ ನಫೆಡ್ (ರಾಷ್ಟ್ರೀಯ ಕೃಷಿ ಸಹಕಾರ ಮಾರುಕಟ್ಟೆ ಒಕ್ಕೂಟ) ಮತ್ತು ಎನ್‌ಸಿಸಿಎಫ್ ಮೂಲಕ 90 ದಿನದೊಳಗೆ ತೊಗರಿ ಖರೀದಿಸಲು ಅನುಮತಿ ನೀಡಲಾಗಿದೆ.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಕೇಂದ್ರದ ಸಂಸ್ಥೆಗಳ ಮೂಲಕ ತೊಗರಿ ಖರೀದಿಗೆ ತಕ್ಷಣವೇ ಅನುಮೋದನೆ ನೀಡಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಪ್ರಧಾನಿ ಮೋದಿಗೆ ಪತ್ರ ಬರೆದು ಮನವಿ ಮಾಡಿದ್ದರು. ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿರುವ ಕೇಂದ್ರ ಕೃಷಿ ಸಚಿವರು, ಕನಿಷ್ಠ ಬೆಂಬಲ ಬೆಲೆಯಲ್ಲಿ

ಪುಟ 2ಕ್ಕೆ

## ಅರಮನೆ ವರಾಹ ಗೇಟ್ ಮೇಲ್ಛಾವಣಿ ಕುಸಿತ



**ಮೈಸೂರು:** ವಿಶ್ವ ವಿಖ್ಯಾತ ಮೈಸೂರು ಅರಮನೆಯ ವರಾಹ ಗೇಟ್‌ನ ಮುಖ್ಯದ್ವಾರದ ಮೇಲ್ಛಾವಣಿ ಕುಸಿದು ಬಿದ್ದಿದ್ದು ಭಾರೀ ಅನಾಹುತವೊಂದು ತಪ್ಪಿದಂತಾಗಿದೆ. ಸಾರ್ವಜನಿಕರು ಆಗಮಿಸುವ ವೇಳೆಯೇ ವರಾಹ ಗೇಟ್‌ನ ಮುಖ್ಯದ್ವಾರದ ಮೇಲ್ಛಾವಣಿ ಕುಸಿದು ಬಿದ್ದಿದ್ದು, ಭಾರೀ ಅನಾಹುತ ತಪ್ಪಿದಂತಾಗಿದೆ. ಕೆಳಗೆ ನಿಲ್ಲಿಸಿದ್ದ ಬೈಕ್ ಮೇಲೆಯೇ ಮೇಲ್ಛಾವಣಿ ಕುಸಿದು ಬಿದ್ದಿದೆ. ಘಟನೆ ಬಳಿಕ ಸ್ಥಳದಲ್ಲಿ ಬ್ಯಾರಿಕೇಡ್ ಅಳವಡಿಕೆ ಮಾಡಲಾಗಿದೆ. ಸದ್ಯ ಸ್ವಚ್ಛತಾ ಸಿಬ್ಬಂದಿ ಕುಸಿದು ಬಿದ್ದಿರುವ ಮೇಲ್ಛಾವಣಿಯ ಮಣ್ಣನ್ನು ತೆರವುಗೊಳಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಅರಮನೆಯ ಹೊರಭಾಗದ ಗೋಡೆಗಳಲ್ಲಿ ಕೆಲವು ಕಡೆ ಬಿರುಕು ಕಾಣಿಸಿಕೊಂಡಿದೆ. ಚಾರಿತ್ರಿಕ ನಗರಿ ಮೈಸೂರಿಗೆ ಅರಮನೆಗಳ ನಗರಿ

ಪುಟ 2ಕ್ಕೆ

# ಕಡಿಮೆ ಬೆಲೆಗೆ ಔಷಧಿ ಕೊಟ್ಟರೆ ಏನು ನಷ್ಟ?

## ಜನೌಷಧಿ ಕೇಂದ್ರ ಮುಚ್ಚುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಹೈಕೋರ್ಟ್ ಕಿಡಿ

ಬೆಂಗಳೂರು: ಸರ್ಕಾರಿ ಆಸ್ಪತ್ರೆಯಲ್ಲಿ ಜನೌಷಧಿ ಕೇಂದ್ರ ಮುಚ್ಚುವ ರಾಜ್ಯ ಸರ್ಕಾರದ ಆದೇಶಕ್ಕೆ ಧಾರವಾಡ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಈ ಮೂಲಕ ರಾಜ್ಯ ಸರ್ಕಾರಕ್ಕೆ ಮುಖಭಂಗ ಆದಂತಾಗಿದೆ.

ಸರ್ಕಾರಿ ಆಸ್ಪತ್ರೆಗಳ ಆವರಣದಲ್ಲಿರುವ ಜನೌಷಧ ಕೇಂದ್ರಗಳನ್ನು ಬಂದ್ ಮಾಡುವ ರಾಜ್ಯ ಸರ್ಕಾರದ ಆದೇಶವನ್ನು ಪ್ರಶ್ನಿಸಿ ರಾಕೇಶ್, ಮಹಾಲಿಂಗಪ್ಪ ಮತ್ತಿತರರು ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ ಧಾರವಾಡ ಹೈಕೋರ್ಟ್ ಪೀಠ ರಾಜ್ಯ ಸರ್ಕಾರ ಆದೇಶವನ್ನ ರದ್ದುಗೊಳಿಸಿದೆ.

ಜನೌಷಧಿ ಅಂಗಡಿಯವರ ಲೀಸ್ ತಿಂಗಳು ಮುಗಿದ ಹಿನ್ನೆಲೆ ಅವರಿಗೆ ಸರ್ಕಾರಿ ಆಸ್ಪತ್ರೆ ಆವರಣದಿಂದ ಹೊರಗೆ ಔಷಧಿ ಅಂಗಡಿ ಇಡಲು ಸೂಚಿಸಲಾಗಿದೆ ಎಂದು ಸರ್ಕಾರಿ ವಕೀಲರು ವಾದಿಸಿದ್ದರು. ಜನೌಷಧಿ ಅಂಗಡಿಯಲ್ಲಿ ಕಡಿಮೆ ಬೆಲೆಗೆ ಹಣ ಪಾವತಿಸಿ ಔಷಧಿ ತೆಗೆದುಕೊಳ್ಳುತ್ತಾರೆ. ಹೀಗಾಗಿ ಈ ಆದೇಶವನ್ನು ರದ್ದುಗೊಳಿಸಬೇಕು ಎಂದು ಅರ್ಜಿದಾರರ ಪರ ವಕೀಲರು ವಾದ ಮಂಡಿಸಿದ್ದರು.

ಎರಡು ಕಡೆಯ ವಾದ ಆಲಿಸಿದ ನ್ಯಾಯಾಲಯ,









### ದ್ವೇಷದ ರಾಜಕಾರಣ ಬಿಡಿ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಇನ್ನಾದರೂ ದ್ವೇಷದ ರಾಜಕಾರಣ ಬಿಟ್ಟು ಕೇಂದ್ರ ಸರ್ಕಾರದ ಜೊತೆ ಸೌಹಾರ್ದಯುತವಾಗಿ ನಡೆದುಕೊಳ್ಳಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿರುಗೇಟು ನೀಡಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಜೊತೆ ಸೌಹಾರ್ದಯುತವಾಗಿ ನಡೆದುಕೊಂಡರೆ ರಾಜ್ಯದ ಬಡವರಿಗೆ ಒಳ್ಳೆಯದಾಗುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನೌಷಧಿ ಕೇಂದ್ರಗಳನ್ನು ಸ್ಥಗಿತಗೊಳಿಸಿ ನೀಡಿದ ಆದೇಶವನ್ನು ರಾಜ್ಯದ ಹೈಕೋರ್ಟ್ ರದ್ದು ಮಾಡಿದೆ. ಜನೌಷಧಿ ಕೇಂದ್ರಗಳನ್ನು ಮತ್ತೆ ತೆರೆಯಲು ಸೂಚಿಸಿರುವುದನ್ನು ಸ್ವಾಗತಿಸುತ್ತೇವೆ.

ಮೊದಲ ಪುಟದಿಂದ

## ಸಾಮಾಜಿಕ ಬಹಿಷ್ಕಾರಕ್ಕೆ ಶಿಕ್ಷೆ

ನಿರಾಕರಿಸುವುದು, ಸೇವೆಗಳನ್ನು ನಿರಾಕರಿಸಿದರೆ ಜೈಲು ಶಿಕ್ಷ ಗ್ಯಾರಂಟಿ ಎಂದು ಹೇಳಲಾಗಿದೆ.

ರಾಜ್ಯದ ವಿವಿಧ ಸಮುದಾಯಗಳಲ್ಲಿ ಸಾಮಾಜಿಕ ಬಹಿಷ್ಕಾರ ಹಾಕುವುದು, ಜಾತಿ ಸಭೆ ಅಥವಾ ಸಮುದಾಯ ಪಂಚಾಯತ್‌ಗಳ ಮೂಲಕ ವಿವಿಧ ಶಿಕ್ಷೆಗಳನ್ನು ವಿಧಿಸುವ ಅಸಂವಿಧಾನಿಕ ಪದ್ಧತಿಗಳು ಇನ್ನೂ ಆಚರಣೆಯಲ್ಲಿವೆ. ಇದರ ಪರಿಣಾಮವಾಗಿ ವ್ಯಕ್ತಿಗಳು ಅಥವಾ ಕುಟುಂಬ ತಮ್ಮ ಜೀವನವನ್ನು ಘನತೆಯಿಂದ ನಡೆಸುವಲ್ಲಿ ಹೆಚ್ಚಿನ ಕಿರುಕುಳ ಅನುಭವಿಸುತ್ತಾರೆ ಎಂದು ಮಸೂದೆಯಲ್ಲಿ ತಿಳಿಸಲಾಗಿದೆ.

## ಕ್ರೀಡಾಪಟುಗಳಿಗೆ ಶೇ.2 ಮೀಸಲಾತಿ

ಏಷ್ಯನ್ ಗೇಮ್ಸ್ ಗೆದ್ದವರಿಗೆ ಹುದ್ದೆ ಕೊಡ್ತೀವಿ. ಪೊಲೀಸ್ ಇಲಾಖೆಯಲ್ಲಿ, ಅರಣ್ಯ ಇಲಾಖೆಯಲ್ಲಿ ಶೇ.3 ಮೀಸಲಾತಿ ಮಾಡಿದ್ದೇವೆ. ಉಳಿದ ಇಲಾಖೆಯಲ್ಲಿ ಶೇ.2 ಮೀಸಲಾತಿ ನೀಡಲು ನಿರ್ಧಾರ ಮಾಡಿದ್ದೇವೆ. ಕಬಡ್ಡಿಗೂ ಪ್ರೋತ್ಸಾಹ ಕೊಡಲು ಪರಿಶೀಲನೆ ಮಾಡ್ತೀನಿ ಎಂದು ಭರವಸೆ ನೀಡಿದರು.

## 2.88 ಲಕ್ಷ ಹುದ್ದೆ ಭರ್ತಿಗೆ ಕ್ರಮ

24,300 ಹುದ್ದೆ ತುಂಬಲು ಆರ್ಥಿಕ ಇಲಾಖೆ ಒಪ್ಪಿಗೆ ಸಿಕ್ಕಿದೆ. ಹೈದರಾಬಾದ್ ಕರ್ನಾಟಕ 371ರ ಹುದ್ದೆಗಳು 32,132 ಭರ್ತಿ ಮಾಡ್ತೀವಿ. ಒಟ್ಟಾಗಿ 56,432 ಹುದ್ದೆ ಭರ್ತಿ ಮಾಡ್ತಾ ಇದ್ದೇವೆ. ಒಳ ಮೀಸಲಾತಿ ಇದಿದ್ದಕ್ಕೆ ವಿಳಂಬ ಆಯ್ತು. ಈಗ ಒಳ ಮೀಸಲಾತಿ ಇತ್ಯರ್ಥ ಆಗಿದೆ. ಹುದ್ದೆ ಭರ್ತಿ ಮಾಡ್ತೀವಿ ಎಂದರು.

ಎಲ್ಲವೂ ಒಟ್ಟಿಗೆ ಮಾಡೋಕೆ ಆಗಲ್ಲ. ಹಂತ ಹಂತವಾಗಿ ಹುದ್ದೆ ಭರ್ತಿ ಮಾಡ್ತೀವಿ ಆರ್ಥಿಕ ಇಲಾಖೆ ಒಪ್ಪಿಗೆ ಕೊಡದೇ ಮಾಡೋಕೆ ಆಗೊಲ್ಲ. ನಾನೇ ಹಣಕಾಸು ಸಚಿವ ಆಗಿರುವುದರಿಂದ ಹಂತ ಹಂತವಾಗಿ ಖಾಲಿ ಹುದ್ದೆ ತುಂಬಿತ್ತೇವೆ ಎಂದು ಹೇಳಿದರು.

ಛಲವಾದಿ ನಾರಾಯಣಸ್ವಾಮಿ ಮಾತನಾಡಿ, ಅಧಿಕಾರಕ್ಕೆ ಬಂದ ಒಂದು ವರ್ಷದಲ್ಲಿ 2.7 ಲಕ್ಷ ಹುದ್ದೆ ತುಂಬೋದಾಗಿ ಸರ್ಕಾರ ಹೇಳಿತ್ತು. ಈಗ 2.5 ವರ್ಷ ಆಯ್ತು ಹುದ್ದೆ ತುಂಬಿಲ್ಲ ಎಂದರು.

ಇದಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಉತ್ತರಿಸಿ, 2 ಲಕ್ಷ ಹುದ್ದೆ ತುಂಬೋಕೆ ನಾವು ಟೈಂ ಇಟ್ಟುಕೊಂಡಿದ್ದೇವೆ. ಅದು ನಮ್ಮ ಡ್ಯೂಟಿ ನಾವು ಮಾಡ್ತೀವಿ. ಶಿಕ್ಷಣ ಇಲಾಖೆಯಲ್ಲಿ ಹುದ್ದೆ ಭರ್ತಿ ಮಾಡ್ತಿದ್ದೇವೆ ಎಂದರು.

ಬಳಿಕ ಸಿಎಂ ಮಾತನಾಡಿ, ವಿಪಕ್ಷ ನಾಯಕರು ಶಿಕ್ಷಣ, ಆರೋಗ್ಯ, ಜಾಸ್ತಿ ಖಾಲಿ ಇದೆ ಅಂತ ಹೇಳಿದ್ದಾರೆ. ಬಿಜೆಪಿ ಕಾಲದಲ್ಲಿ ಎಲ್ಲಾ ಭರ್ತಿ ಮಾಡಿದ್ದಾರೆಯೇ? ಬಿಜೆಪಿ ಕಾಲದಲ್ಲಿಯೂ ಖಾಲಿ ಇತ್ತು. ಎಲ್ಲರ ಕಾಲದಲ್ಲಿ ಹುದ್ದೆ ಖಾಲಿ ಇದೆ. ಹಂತ ಹಂತವಾಗಿ ನಾವು ಹುದ್ದೆ ಭರ್ತಿ ಮಾಡ್ತೀವಿ ಎಂದು ತಿಳಿಸಿದರು.

## ನಾಯಕತ್ವದ ಬೆಂಕಿಗೆ ಮತ್ತೆ ತುಪ್ಪ ಸುರಿದ ಯತೀಂದ್ರ

ಆಗಿರುತ್ತೇನೆ ಎಂದು ತಿಳಿಸಿದ ನಂತರ ಈ ವಿಚಾರ ಸ್ವಲ್ಪ ತಣ್ಣಗಾಗಿತ್ತು. ಆದರೆ ಪುತ್ರ ಮತ್ತೆ ತಂದೆಯ ಪರ ಬ್ಯಾಟ್ ಬೀಸಿ ಚರ್ಚೆಗೆ ಗ್ರಾಸವಾಗಿದ್ದಾರೆ.

ಮುಖ್ಯಮಂತ್ರಿ ಹುದ್ದೆಯಲ್ಲಿ ಯಾವುದೇ ಗೊಂದಲವಾಗಲಿ, ಭಿನ್ನಾಭಿಪ್ರಾಯವಾಗಲಿ ಇಲ್ಲ. ಎಲ್ಲವೂ ಸ್ಪಷ್ಟವಾಗಿದೆ. ನಾಯಕತ್ವದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಹೈಕಮಾಂಡ್ ಸ್ಪಷ್ಟವಾಗಿ ತಿಳಿಸಿದೆ. ನನ್ನ ತಂದೆಯೇ 5 ವರ್ಷ ಸಿಎಂ ಆಗಿ ಇರುತ್ತಾರೆ ಎಂದು ಮತ್ತೊಮ್ಮೆ ಹೇಳಿದರು.

# ಪೂರ್ಣ ಒಳಮೀಸಲಾತಿಗೆ ಆಗ್ರಹಿಸಿ ಪ್ರತಿಭಟನೆ

ಮೈಸೂರು: ಒಳ ಮೀಸಲಾತಿ ಜಾರಿ ಮಾಡುವಲ್ಲಿ ಸರ್ಕಾರದ ವಿಳಂಬ ನೀತಿ ಖಂಡಿಸಿ, ಶೀಘ್ರವಾಗಿ ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿ ಸಾಮಾಜಿಕ ನ್ಯಾಯಕ್ಕಾಗಿ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಹೋರಾಟ ಸಮಿತಿ ವತಿಯಿಂದ ನಗರದ ಪುರಭವನ ಆವರಣದಲ್ಲಿ ಪ್ರತಿಭಟನಾ ಸಮಾವೇಶ ನಡೆಸಲಾಯಿತು.

ಒಳ ಮೀಸಲಾತಿ ಜಾರಿ ಮಾಡುವಂತೆ ನ್ಯಾಯಾಲಯ ತೀರ್ಪು ನೀಡಿ 14 ತಿಂಗಳು ಕಳೆದರೂ ಇನ್ನೂ ಜಾರಿಯಾಗಿಲ್ಲ. ಸರ್ಕಾರ ಮೀಸಲಾತಿ ಜಾರಿ ಮಾಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದೆ. ಇದರಿಂದ ಅರ್ಹರಿಗೆ ಅನ್ಯಾಯವಾಗುತ್ತಿದೆ. ಕೂಡಲೇ ಸರ್ಕಾರ ಪೂರ್ಣ ಪ್ರಮಾಣದ ಒಳ ಮೀಸಲಾತಿ ಜಾರಿ ಮಾಡಬೇಕು ಎಂದು ಆಗ್ರಹಿಸಿದರು. ಉನ್ನತ ಶಿಕ್ಷಣ ಸೇರಿದಂತೆ ಎಲ್ಲಾ ಶೈಕ್ಷಣಿಕ ರಂಗಗಳಲ್ಲಿ ಒಳಮೀಸಲಾತಿ ಅನ್ವಯಿಸಬೇಕು. ಕಂದಾಯ ಇಲಾಖೆ ಪರಿಶಿಷ್ಟ ಜಾತಿಗಳ ಪ್ರವರ್ಗವಾರು ಜಾತಿ ಪ್ರಮಾಣ ಪತ್ರ ನೀಡಲು ಆದೇಶಿಸಬೇಕು. ಪರಿಶಿಷ್ಟ ಜಾತಿಗಳ ಒಳಮೀಸಲಾತಿಯನ್ನು ಅನುದಾನಿತ ಶಾಲೆಗಳು ಸೇರಿದಂತೆ



ಸರಕಾರಿ, ಅರೆ ಸರಕಾರಿ ಹುದ್ದೆಗಳ ನೇರ ನೇಮಕಾತಿ, ಬಡ್ತಿ, ಬ್ಲಾಕ್‌ಲಾಗ್ ಹುದ್ದೆಗಳ ನೇಮಕಾತಿಗೂ ಅನ್ವಯಿಸಿ ಆದೇಶಿಸಬೇಕು. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಒಳಮೀಸಲಾತಿ ಜಾರಿಗೊಳಿಸಬೇಕು. ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ಪರಿಶೀಲಿಸಿಲು ಪ್ರವರ್ಗ-ಎಗೆ ಜಿಲ್ಲಾ, ತಾಲೂಕು ಮಟ್ಟದಲ್ಲಿ ಮೇಲ್ವಿಚಾರಣಾ ಸಮಿತಿ ರಚಿಸಬೇಕು ಎಂದರು.

ಪರಿಶಿಷ್ಟ ಜಾತಿಯ ಪಟ್ಟಿಯಿಂದ ಆದಿ ಕರ್ನಾಟಕ, ಆದಿ ದ್ರಾವಿಡ ಮತ್ತು ಆದಿ ಆಂಧ್ರ ಜಾತಿಗಳನ್ನು ಪರಿಶಿಷ್ಟ ಜಾತಿಯ 101 ಜಾತಿಗಳ ಪಟ್ಟಿಯಿಂದ ತೆಗೆಯಲು ರಾಜ್ಯ ಸರ್ಕಾರ ಕೂಡಲೇ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು. ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಸಮಾಜ ಕಲ್ಯಾಣ ಇಲಾಖೆಯನ್ನೇ ತಪ್ಪು ದಾರಿಗೆ ಎಳೆದು, ಒಳಮೀಸಲಾತಿ ಬಗ್ಗೆ ಸರಕಾರಕ್ಕೆ ಸುಳ್ಳು ಮಾಹಿತಿ ನೀಡಿ ಇಲಾಖೆಯನ್ನು ನಿಷ್ಕ್ರಿಯಗೊಳಿಸುತ್ತಿರುವ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಇಲಾಖೆ ಆಯುಕ್ತ ರಾಕೇಶ್ ಕುಮಾರ, ಸಲಹೆಗಾರ ವೆಂಕಟಯ್ಯನವರನ್ನು ಕೂಡಲೇ ವರ್ಗಾಯಿಸಬೇಕು. ಕೇಂದ್ರ ಸರಕಾರ ಹುದ್ದೆಗಳನ್ನು ಹೊರತುಪಡಿಸಿ, ರಾಜ್ಯ ಸರಕಾರದ ವ್ಯಾಪ್ತಿಗೊಳಪಡುವ ಗುತ್ತಿಗೆ ಕಾಮಗಾರಿ, ಗುತ್ತಿಗೆ ಕಾರ್ಮಿಕರ ನೇಮಕಾತಿ, ತಾತ್ಕಾಲಿಕ ನೇಮಕಾತಿ ಸೇರಿದಂತೆ ಅತಿಥಿ ಉಪನ್ಯಾಸಕರು ಮತ್ತು ಶಿಕ್ಷಕರು ನೇಮಕಾತಿಯಲ್ಲೂ ಅನ್ವಯಿಸಿ ಆದೇಶಿಸಬೇಕು. ಪ.ಜಾತಿ ಅಲೆಮಾರಿ ಸಮುದಾಯಿಗಳಿಗೆ ಶೇ.1 ಒಳ ಮೀಸಲಾತಿ ಜಾರಿಗೊಳಿಸಬೇಕು. ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹೊರತುಪಡಿಸಿ, ರಾಜ್ಯದ ವಿವಿಧ ಪಾಲಿಕೆ, ವಿವಿಧ ನಗರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರು, ಯುಜಿಡಿ ಕಾರ್ಮಿಕರು, ವಾಹನ ಚಾಲಕರು, ಲೋಡರ್ಸ್, ಕ್ಲೀನರ್ಸ್‌ಗಳನ್ನು ಕೂಡಲೇ ಕಾಯಂಗೊಳಿಸಬೇಕು ಎಂದು ಒತ್ತಾಯಿಸಿದರು. ರಾಜ್ಯಾಧ್ಯಕ್ಷ ಶಿವರಾಯ ಅಕ್ಕರಕಿ, ವಕೀಲ ಎಸ್.ಮಾರಪ್ಪ, ಕರ್ನಾಟಕ ಬಹುಜನ ಚಳವಳಿ ರಾಜ್ಯಾಧ್ಯಕ್ಷ ಕೃಷ್ಣಪ್ಪ, ಶಿವಾನಂದ ಬಿಸ್ನಾಳ್, ಭಾನುಪ್ರಸಾದ್, ಸಿದ್ದುಮಾಧು, ಮೂಗೂರು ಸಿದ್ದರಾಜು, ನರಸಿಂಹಮೂರ್ತಿ, ಸ್ವಾಮಿ, ಗಂಗಯ್ಯ, ಮೇಟಗಳ್ಳಿ ಕರಿಯಪ್ಪ, ರಾಜಣ್ಣ ಭಾಗವಹಿಸಿದ್ದರು.

ಮೊದಲ ಪುಟದಿಂದ

## ನಾವು ಮಾತನಾಡಿದರೆ ಬಲಾತ್ಕಾರ: ಅವರದ್ದು ಚಮತ್ಕಾರವೇ-ಇಕ್ಬಾಲ್

ಹಿಂದೆ ಡಿಕೆ ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂದು ಹೇಳಿದ್ದಕ್ಕೆ ಇಕ್ಬಾಲ್ ಹುಸೇನ್ ಅವರಿಗೆ ಶಿಸ್ತು ಸಮಿತಿ ನೋಟಿಸ್ ಜಾರಿ ಮಾಡಿತ್ತು.\

## ಕಾಣದ ಕುರ್ಚಿಗೆ ಹಂಬಲಿಸಿದೇ ಮನ!

ಇಷ್ಟು ನಯ ವಿನಯ ಎಲ್ಲಿಂದ ಬಂತು ಸರ್ ನಿಮಗೆ? ನೀವು ನಿಜಕ್ಕೂ ಡಿಕೆ ಶಿವಕುಮಾರ್ ಅವರೇ? ಹೊಸ ಶಿವಕುಮಾರಾ? ಡಿಕೆ ಶಿವಕುಮಾರ್ ಎಂಬುವುದಕ್ಕೆ ಒಂದು ಕಲ್ಪನೆ ಇದೆ. ಇಷ್ಟು ನಯ ವಿನಯ ಹೇಗೆ? ದಿಢೀರ್ ಆಗಿ ಹೇಗೆ ಬಂತು ಎಂದು ಪ್ರಶ್ನಿಸಿದರು.

ಅಲ್ಲದೆ, ಕಾಣದ ಕಡಲಿಗೆ ಹಂಬಲಿಸಿದೆ ಮನ.. ಕಾಣಬಲ್ಲೆನೆ ಒಂದು ದಿನ.... ಸೇರಬಲ್ಲನೇ ಒಂದು ದಿನ ಗೀತೆಯನ್ನು ಸಿ.ಅಶ್ವಥ್ ಹಾಡಿದ್ದಾರೆ. ಈಗ ಡಿಕೆ ಶಿವಕುಮಾರ್ ಅವರು ಕಾಣದ ಕುರ್ಚಿಗೆ ಹಂಬಲಿಸಿದೇ ಮನ.. ಕೂಡಬಲ್ಲನೇ ಒಂದು ದಿನ ಎಂದು ಹಾಡುತ್ತಿದ್ದಾರೆ. ಹೀಗಾಗಿ ನಯ ವಿನಯ ಶುರುವಾಯ್ತೋ? ನಿಜವಾಗಿ ವಿರೋಧ ಪಕ್ಷದ ಬಗ್ಗೆ ನಯ ವಿನಯ ಶುರುವಾಯ್ತೋ? ನಿಮ್ಮ ನಾಯಕತ್ವವನ್ನು ನಾವು ಒಪ್ಪುತ್ತೇವೆ ಎಂದು ಹೇಳುವ ಮೂಲಕ ಡಿಕೆಶಿ ಕಾಲೆಳೆದರು.

## ಗ್ರೇಟರ್ ಬೆಂಗಳೂರಿಗೆ ತಿದ್ದುಪಡಿ

ಕಾರ್ಯದರ್ಶಿಯನ್ನು ಪ್ರಾಧಿಕಾರದ ಎಕ್ಸ್-ಆಫಿಸಿಯೊ ಸದಸ್ಯರನ್ನಾಗಿ ಸೇರಿಸಲು ಸಹ ಅವಕಾಶ ನೀಡುತ್ತದೆ. ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯನ್ನು ಕಾರ್ಯಕಾರಿ ಸಮಿತಿ ಸದಸ್ಯರನ್ನಾಗಿ ನೇಮಿಸಲು ಸಹ ಇದು ಅವಕಾಶ ಕಲ್ಪಿಸುತ್ತದೆ.

## ಅರಮನೆ ವರಾಹ ಗೇಟ್ ಮೇಲ್ಛಾವಣಿ ಕುಸಿತ

ಎಂಬ ಬಿರುದು ತಂದುಕೊಟ್ಟ ಅಂಬಾವಿಲಾಸ ಅರಮನೆಯ ಅಂದಕ್ಕೆ ಮತ್ತೊಂದು ಅರಮನೆ ಇಲ್ಲ. ಪ್ರತಿ ವರ್ಷ ಲಕ್ಷಾಂತರ ಪ್ರವಾಸಿಗರನ್ನು ತನ್ನೆಡೆಗೆ ಸೆಳೆಯುವ ಈ ಅಂದದ ಅರಮನೆ ಕಟ್ಟಡಗಳ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಬಲರಾಮ ದ್ವಾರದ ಬಳಿ ಅರಮನೆ ಕಟ್ಟದ ಭಾಗಗಳು ಕುಸಿದು ಬಿದ್ದಿದೆ. ಅರಮನೆಯ ಅಂದಕ್ಕೆ ಅಡ್ಡಿಯುಂಟು ಮಾಡಿದೆ.

## ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿಗೆ ಕೇಂದ್ರ ಅಸ್ತು

ರೈತರಿಂದ ತೊಗರಿಬೆಳೆ ಖರೀದಿಸಲು ರಾಜ್ಯ ಸರ್ಕಾರಕ್ಕೆ ಅನುಮತಿ ನೀಡಿದ್ದಾರೆ.

ಖರೀದಿ ಪ್ರಾರಂಭದ ದಿನಾಂಕದಿಂದ 90 ದಿನಗಳವರೆಗೆ

ರಾಜ್ಯದಲ್ಲಿ ಪಿಎಸ್‌ಎಸ್ (ಕನಿಷ್ಠ ಬೆಂಬಲ ಬೆಲೆ) ಅಡಿ ಒಟ್ಟು 9.67 ಲಕ್ಷ ಮೆಟ್ರಿಕ್ ಟನ್ ತೊಗರಿಬೇಳೆ ಖರೀದಿಸಲಾಗುವುದು. 2025-26ಕ್ಕೆ ತೊಗರಿ ಬೆಳೆಗೆ ಘೋಷಿಸಲಾದ ಎಂಎಸ್‌ಪಿ ಕ್ವಿಂಟಾಲ್‌ಗೆ 8,000 ರೂ. ನಿಗದಿ ಮಾಡಿದೆ.

ಈ ಸಂಬಂಧ ಪ್ರಧಾನಿ ಮೋದಿ ಹಾಗೂ ಕೇಂದ್ರ ಸಚಿವರಿಗೆ ಧನ್ಯವಾದ ಹೇಳಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ರಾಜ್ಯದ ತೊಗರಿ ಬೆಳೆಗಾರರ ನೆರವಿಗೆ ಧಾವಿಸಿದ ಕೇಂದ್ರ ಸರ್ಕಾರ, ಪ್ರಸಕ್ತ ಹಂಗಾಮಿನ 9,67,000 ಮೆ.ಟನ್ ತೊಗರಿಯನ್ನು ಬೆಂಬಲ ಬೆಲೆ ಅಡಿಯಲ್ಲಿ ಖರೀದಿಸಲು ಒಪ್ಪಿಗೆ ನೀಡಿದೆ ಎಂದು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

## ದ್ವೇಷದ ರಾಜಕಾರಣ ಬಿಡಿ

**ರಾಜ್ಯದ, ದೇಶದ ಬಡಜನರಿಗೆ ಕೈಗೆಟಕುವ ದರದಲ್ಲಿ ಔಷಧಿಗಳು ಸಿಗಬೇಕು. ಇದರಿಂದ ಬಡವರಿಗೆ ಅನುಕೂಲ ಆಗಬೇಕೆಂಬ ಸದುದ್ದೇಶದಿಂದ ಆ ಕಾರ್ಯಕ್ರಮ ಜಾರಿಗೊಳಿಸಿದ್ದರು ಎಂದು ಹೇಳಿದರು.**

## ಮೈಬಿಲ್ಡ್-25 ಬೃಹತ್ ವಸ್ತುಪ್ರದರ್ಶನಕ್ಕೆ ಚಾಲನೆ



ಮೈಸೂರು: ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮೈಸೂರು ಶಾಖೆಯಿಂದ ಆಯೋಜಿಸಿರುವ ಮೈಬಿಲ್ಡ್-25 ಬೃಹತ್ ವಸ್ತುಪ್ರದರ್ಶನಕ್ಕೆ ಗುರುವಾರ ಚಾಲನೆ ದೊರೆಯಿತು.

ನಗರದ ಮಹಾರಾಜ ಕಾಲೇಜು ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ಎಚ್.ಆರ್. ರಂಗನಾಥ್, ಬಿಎಐ ರಾಷ್ಟ್ರೀಯ ಅಧ್ಯಕ್ಷ ರಾಜೇಂದ್ರ ಸಿಂಗ್ ಕಾಂಭೋ, ರಾಷ್ಟ್ರೀಯ ಉಪಾಧ್ಯಕ್ಷ ಡಿ.ವಿ.ಎನ್. ರೆಡ್ಡಿ ಸೇರಿದಂತೆ ಇನ್ನಿತರ ಗಣ್ಯರು ವಸ್ತುಪ್ರದರ್ಶನವನ್ನು ಉದ್ಘಾಟಿಸಿದರು.

ಡಿ.11ರಿಂದ 15ರವರೆಗೆ ನಡೆಯುವ ವಸ್ತುಪ್ರದರ್ಶನದಲ್ಲಿ ಪ್ರತಿಬಾರಿಯಂತೆ ಈ ಬಾರಿಯ ಕೂಡ ಕಟ್ಟಡ ನಿರ್ಮಾಣ ಕ್ಷೇತ್ರದಲ್ಲಿನ ಇತ್ತೀಚಿನ ಆವಿಷ್ಕಾರಗಳು, ಆಧುನಿಕ ತಂತ್ರಜ್ಞಾನದ ಸಾಮಗ್ರಿಗಳು, ಕಟ್ಟಡ ನಿರ್ಮಾಣ ಕ್ಷೇತ್ರದಲ್ಲಿ ತೊಡಗಿರುವ ಹಲವು ಸಂಸ್ಥೆಗಳ ಕುರಿತ ಸಮಗ್ರ ಮಾಹಿತಿಗಳು ಗ್ರಾಹಕರಿಗೆ ಲಭಿಸಲಿದೆ. ಮೈಬಿಲ್ಡ್ ವಸ್ತುಪ್ರದರ್ಶನ ಪ್ರತಿದಿನ ಬೆಳಗ್ಗೆ 10ರಿಂದ ರಾತ್ರಿ 9 ರವರೆಗೆ ನಡೆಯಲಿದೆ.

ಮೈಬಿಲ್ಡ್ ವಸ್ತುಪ್ರದರ್ಶನದ ಉದ್ಘಾಟನಾ ಸಮಾರಂಭದಲ್ಲಿ ಬಿಎಐ ರಾಷ್ಟ್ರೀಯ ಅಧ್ಯಕ್ಷರಾದ ರಾಜೇಂದ್ರ ಸಿಂಗ್ ಕಾಂಭೋ, ಬಿ.ವಿ.ಎನ್. ರೆಡ್ಡಿ, ಬಿಎಐ ಮೈಸೂರು ಸೆಂಟರ್ ಅಧ್ಯಕ್ಷ ವಿ.ಶ್ರೀನಾಥ್, ಬಿಲ್ಡರ್ ಅಸೋಸಿಯೇಷನ್ ಆಫ್ ಇಂಡಿಯಾ ಮೈಸೂರು ಸೆಂಟರ್‌ನ ಪದಾ ಕಾರಿಗಳಾದ ಸಿ.ಡಿ. ಕೃಷ್ಣ, ಆರ್. ರಮೇಶ್ ರಾವ್, ಎನ್.ಲೋಕೇಶ್ ಗೌಡ ಸೇರಿದಂತೆ ಇನ್ನಿತರರು ಇದ್ದರು.



ಪುರಸಭಾ ಮಾಜಿ ಸದಸ್ಯ ನೀಲಕಂಠ ಹೇಳಿಕೆ

# ಎಂಬ್ರಾಯಿಡರಿ ಟೈಲರಿಂಗ್ ವೃತ್ತಿಗೆ ಅತ್ಯಂತ ಬೇಡಿಕೆ

ಕೆ.ಆರ್.ಪೇಟೆ,ಜಾಗತಿಕ ಜಗತ್ತಿನ ಸ್ಪರ್ಧಾ ಪ್ರಪಂಚದಲ್ಲಿ ಎಂಬ್ರಾಯಿಡರಿ ಟೈಲರಿಂಗ್ ವೃತ್ತಿಯು ಬಹಳ ಬೇಡಿಕೆಯನ್ನು ಹೊಂದಿರುವ ವೃತ್ತಿ ಕೌಶಲ್ಯವಾಗಿದೆ. ಎಂಬ್ರಾಯಿಡರಿ ಕೆಲಸ ಮಾಡುವ ಕುಶಲ ಕರ್ಮಿಗಳು ತಮ್ಮಲ್ಲಿನ ವೃತ್ತಿ ಕೌಶಲ್ಯವನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲೀಕರಣ ಸಾಧಿಸಿ ಮುನ್ನಡೆಯಬೇಕು ಎಂದು ಪುರಸಭೆ ಮಾಜಿ ಸದಸ್ಯ ಕೆ.ಆರ್.ನೀಲಕಂಠ ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದಲ್ಲಿ ನೂತನವಾಗಿ ನೊಂದಾಯಿತ ಎಂಬ್ರಾಯಡರಿ ಅಂಗಡಿಗಳ ಮಾಲೀಕರ ಸಂಘದ ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರ ಸಮಾರಂಭದಲ್ಲಿ ಸಂಘದ ಗುರುತಿನ ಚೀಟಿಗಳನ್ನು ವಿತರಿಸಿ ಮಾತನಾಡಿದರು. ಎಂಬ್ರಾಯಡರಿ ವೃತ್ತಿ ಕೌಶಲ್ಯವು ಆಧುನಿಕ ಸಮಾಜದಲ್ಲಿ ಅತ್ಯಂತ ಬೇಡಿಕೆ ಹೊಂದಿರುವ ವೃತ್ತಿಯಾಗಿದೆ. ಆದ್ದರಿಂದ ಎಂಬ್ರಾಯಿಡರಿ ಕೆಲಸವನ್ನು ಮಾಡುವ ಕುಶಲಕರ್ಮಿಗಳು ತಮ್ಮಲ್ಲಿನ ವೃತ್ತಿ ಕೌಶಲ್ಯವನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಸಬಲೀಕರಣ



ಸಾಧಿಸಿ ಮುನ್ನಡೆಯಬೇಕು ಸಂಘದ ಶಕ್ತಿಯು ಧೀಶಕ್ತಿ ಆಗಿರುವುದರಿಂದ ಎಂಬ್ರಾಯಡರಿ ಕೆಲಸ ಮಾಡುವ ಕುಶಲಕರ್ಮಿಗಳು ಒಗ್ಗಟ್ಟಾಗಿ ಸಂಘದ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ಸಮಾಜದ ಮುಖ್ಯ ವಾಹಿನಿಗೆ ಬಂದು ಸರ್ಕಾರವು ನೀಡುವ ಸೌಲಭ್ಯಗಳನ್ನು ಪಡೆದುಕೊಂಡು ಸಾಧನೆ ಮಾಡಬೇಕು ಎಂದು ನೀಲಕಂಠ ಮನವಿ ಮಾಡಿದರು. ಸಂಘದ ಗೌರವ ಸಲಹೆಗಾರರಾದ ಡಾ.ಕಾಡುಮೆಣಸ ಚಂದ್ರು ಮಾತನಾಡಿ ಕೃಷ್ಣರಾಜಪೇಟೆ ತಾಲೂಕಿನಲ್ಲಿ ಎಂಬ್ರಾಯಡರಿ ವೃತ್ತಿ ಕೌಶಲ್ಯವನ್ನು ಮಾಡುವ ಅಂಗಡಿಗಳ ಮಾಲೀಕರು ನೂತನವಾಗಿ ಸಂಘವನ್ನು ರಚನೆ ಮಾಡಿಕೊಂಡು ಸಂಘಟಿತರಾಗಿ ಒಂದಾಗಿ ಹೆಜ್ಜೆ ಹಾಕಲು ಮುಂದಾಗಿರುವುದು ನಾಗರೀಕ ಸಮಾಜವೇ ಮೆಚ್ಚುವ ವಿಚಾರವಾಗಿದೆ ಸಂಘದ ಶಕ್ತಿಯ ಮೂಲಕ, ಎಂಬ್ರಾಯಡರಿ ಕೆಲಸಗಾರರು ಸಂವಿಧಾನ ಬದ್ಧವಾಗಿ ಸರ್ಕಾರವು ನೀಡುವ ವಿವಿಧ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ತಮ್ಮ ಅಂಗಡಿಯ ಕೆಲಸದ ವ್ಯಾಪ್ತಿಯನ್ನು ವಿಸ್ತರಿಸಿಕೊಂಡು ಆರ್ಥಿಕವಾಗಿ ಪ್ರಗತಿ ಸಾಧಿಸಿ ಅಭಿವೃದ್ಧಿಯ ದಿಕ್ಕಿನಲ್ಲಿ ಸಾಗಬೇಕು ಎಂದು ಕರೆ ನೀಡಿದರು. ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಗೌರವಾಧ್ಯಕ್ಷ ಎ.ಜೆ.ಸುಬ್ಬೆಗೌಡ ಅಧ್ಯಕ್ಷತೆ ವಹಿಸಿದ್ದರು. ಸಂಘದ ನೂತನ ಅಧ್ಯಕ್ಷ ಮಹಾದೇವ್, ಪ್ರಧಾನ ಕಾರ್ಯದರ್ಶಿ, ಕೆ.ಪಿ.ಮಂಜುನಾಥ್ ಸಂಘದ ಧ್ಯೇಯೋದ್ದೇಶಗಳನ್ನು ಕುರಿತು ಮಾತನಾಡಿದರು. ಸಂಘದ ನೂತನ ಉಪಾಧ್ಯಕ್ಷೆಯಾದ ಗೌಡ ಪೂಜಾ ಬಸವರಾಜು, ಖಜಾಂಚಿ ಮುರುಕನಹಳ್ಳಿ ಕಿರಣ್, ಸಹಕಾರ್ಯದರ್ಶಿ ಅನ್ಸರ್ ಅಹಮದ್, ಸಂಘಟನಾ ಕಾರ್ಯದರ್ಶಿ ಕೆ.ಪಿ.ಮಂಜುನಾಥ್, ಕಾರ್ಯಕಾರಿ ಮಂಡಳಿಯ ಸದಸ್ಯರಾದ ಸಾದಿಯಾ ತಮೀನ್, ಎಂ.ಪಿ.ನಾಗೇಶ್, ಕೆ.ವಿ.ಮಂಜುಳಾ, ಜಿ.ಎನ್.ರಾಜೇಶ್ವರಿ, ಲೀಲಾವತಿ, ಹರ್ಷ, ಲವಣ್ಣ ಡಿ.ಎಸ್. ಮತ್ತಿತರರು ಸಮಾರಂಭದಲ್ಲಿ ಭಾಗವಹಿಸಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಆನೆಗಳ ಹಾವಳಿ ತಪ್ಪಿಸಲಿ

## ಕಣಗುಪ್ಪೆ, ಅನುಗಟ್ಟ ಗ್ರಾಮಸ್ಥರಿಂದ ರಸ್ತೆ ಸಂಚಾರ ತಡೆದು ಆಕ್ರೋಶ

**ಬೇಲೂರು:** ಆನೆಗಳ ಹಾವಳಿ ಖಂಡಿಸಿ ಕಣಗುಪ್ಪೆ, ಅನುಗಟ್ಟ ಸೇರಿದಂತೆ ಸುತ್ತಮುತ್ತಲ ಗ್ರಾಮಸ್ಥರು ರಸ್ತೆ ಸಂಚಾರ ತಡೆ ನಡೆಸಿ ಪ್ರತಿಭಟಿಸಿದರು.

ಮಲೆನಾಡು ಭಾಗವಾದ ಅರೇಹಳ್ಳಿ ಹೋಬಳಿಯಲ್ಲಿ ಸುಮಾರು 30ಕ್ಕೂ ಹೆಚ್ಚು ಕಾಡಾನೆಗಳ ಹಿಂಡು ಅನುಘಟ್ಟ ಗ್ರಾಪಂ ವ್ಯಾಪ್ತಿಯಲ್ಲಿ ಬೀಡು ಬಿಟ್ಟಿದ್ದು, ಕಾಡಾನೆಗಳನ್ನು ಓಡಿಸುವುದಾಗಲಿ ಅವುಗಳಿಂದ ನಮಗೆ ರಕ್ಷಣೆ ನೀಡುವುದಕ್ಕೆ ಅರಣ್ಯ ಇಲಾಖೆ ಒಬ್ಬ ಅಧಿಕಾರಿಯೂ ಈ ಭಾಗದ ಸಮಸ್ಯೆ ಆಲಿಸಲು ಬರುತ್ತಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸ್ಥಳೀಯರಾದ ಕೆ.ಜಿ.ಕುಮಾರ್, ಅನುಘಟ್ಟ ಭಾಗದಲ್ಲಿ ಸುಮಾರು 20 ದಿನಗಳಿಂದ 30ಕ್ಕೂ ಹೆಚ್ಚು ಕಾಡಾನೆಗಳು ಈ ಭಾಗದಲ್ಲಿ ದಾಳಿ ಮಾಡಿ ನೂರಕ್ಕೂ ಹೆಚ್ಚು ಎಕರೆ ಭತ್ತ, ಕಾಫಿ, ಶುಂಠಿ, ತೆಂಗು ಸೇರಿದಂತೆ ಇನ್ನಿತರ ಬೆಳೆಗಳು ಸಂಪೂರ್ಣ ನಾಶ ಮಾಡಿವೆ. ಇಷ್ಟೆಲ್ಲ ಸಮಸ್ಯೆ ಇದ್ದರೂ ಈ ಭಾಗದಲ್ಲಿ ಅರಣ್ಯ ಇಲಾಖೆಯ ಒಬ್ಬ ಅಧಿಕಾರಿಯೂ ಇತ್ತ ಸುಳಿದಿಲ್ಲ. ಸಾವು ನೋವಾದಾಗ ಮಾತ್ರ ಬರುವ ಅರಣ್ಯ ಇಲಾಖೆ ಅಧಿಕಾರಿಗಳು ಬೆಳೆಗಾರರ ಸಂಕಷ್ಟ ಅರಿಯಲು ಕನಿಷ್ಠ ಸೌಜನ್ಯಕ್ಕೂ ಈ ಭಾಗದಲ್ಲಿ ಪರಿಶೀಲನೆ ಮಾಡಿಲ್ಲ. ಇನ್ನು ಅರಣ್ಯ ಸಚಿವರು ಹಾಗೂ ಅವರ ಇಲಾಖೆ ಸಿಬ್ಬಂದಿ ನಿದ್ರೆಗೆ ಮಾತ್ರ ಸೀಮಿತರಾಗಿದ್ದಾರೆ ಎಂದು ಕಿಡಿಕಾರಿದರು. ಈ ಭಾಗದಲ್ಲಿ ಯಾವುದೇ ಸಾವು ನೋವಾದರೂ ನಮ್ಮ ಸಮಸ್ಯೆಗಳನ್ನು ಆಲಿಸುವುದಿಲ್ಲ. ಇಂತಹ ಲಜ್ಜೆಗೆಟ್ಟ ಸಚಿವರು ಆ ಸ್ಥಾನದಲ್ಲಿ ಕೂರುವ ಯೋಗ್ಯತೆ ಇಲ್ಲ. ಕೂಡಲೆ ನಮಗೆ ಆನೆಗಳನ್ನು



ಸ್ಥಳಾಂತರ ಮಾಡಬೇಕು. ಮತ್ತು ನಿಮ್ಮ ಬಿಕ್ಷೆಯ ಪರಿಹಾರ ನಮಗೆ ಬೇಕಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಫಿ ಬೆಳೆಗಾರರ ಸಂಘದ ಅಧ್ಯಕ್ಷ ಅದ್ದೂರಿ ಚೇತನ್ ಮಾತನಾಡಿ, ಅನುಘಟ್ಟ ಗ್ರಾಪಂ ವ್ಯಾಪ್ತೀಯ ಕಣಗುಪ್ಪೆ ಬೆಳ್ಳಾವರ, ಹಿರೆ ಹಸಡೆ ಚಿಕ್ಕ ಹಸಡೆ ಡೋಲನಮನೆ, ನೇರಳಕಟ್ಟೆ ಸೇರಿದಂತೆ ಈ ಭಾಗದಲ್ಲಿ ಕಾಡಾನೆಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಆದರೆ ಈ ಭಾಗದ ಯಾವುದೇ ಸಮಸ್ಯೆಗಳನ್ನು ಆಲಿಸದ ಅರಣ್ಯ ಇಲಾಖೆ ಅಧಿಕಾರಿಗಳು ಸಂಪೂರ್ಣ ವಿಫಲರಾಗಿದ್ದು, ಕೇವಲ ಳೆಗಾರರ ಕಣ್ಣೊರೆಸುವ ನಾಟಕದ ಸಭೆಗಳನ್ನು ಮಾಡುತ್ತಾರೆ ಎಂದು ಕಿಡಿಕಾರಿದರು.

ರೈತ ಸಂಘದ ಅಧ್ಯಕ್ಷ ಭೋಗಮಲ್ಲೇಶ್ ಮಾತನಾಡಿ, ಜಿಲ್ಲಾಧಿಕಾರಿಗಳು ಈ ಸಮಸ್ಯೆಗೆ ಪರಿಹಾರ ನೀಡಲು ಸಭೆ ಕರೆದು ಮೂರು ತಿಂಗಳಾದರು ಕೇವಲ ಅದು ಭಾಷಣಕ್ಕೆ ಮಾತ್ರ ಸೀಮಿತವಾಗಿದೆ. ಅದು ಇಲ್ಲಿವರೆಗೂ ಕಾರ್ಯರೂಪಕ್ಕೆ ಬರಲಿಲ್ಲ. ನಾವು ಎಷ್ಟೇ ಬಾರಿ ಪ್ರತಿಭಟನೆ ಮಾಡಿ ಮಾಹಿತಿಯನ್ನು ಜನಪ್ರತಿನಿಧಿಗಳಿಗೆ ತಿಳಿಸಿದರೂ ಇದರ ಬಗ್ಗೆ ಕಿವಿ ಕೇಳದಂತಾಗಿದ್ದಾರೆ. ಈಗಾಗಲೇ ಹೆತ್ತೂರು ಹಾಗೂ ಚಿಕ್ಕಮಗಳೂರು ಭಾಗದಲ್ಲಿ ಸುಮಾರು ಮೂರು ಸಾವಿರ ಎಕರೆಯಷ್ಟು ಅರಣ್ಯ ಜಾಗವನ್ನು ನಾವೇ ಗುರುತಿಸಿದ್ದರೂ ಅಲ್ಲಿಗೆ ಆನೆಗಳನ್ನು ಅಟ್ಟಲು ಸಂಪೂರ್ಣ ವಿಫಲರಾಗಿದ್ದಾರೆ ಎಂದು ಆರೋಪಿಸಿದರು. ಅರೇಹಳ್ಳಿ ಹೋಬಳಿ ಕಾಫಿ ಬೆಳೆಗಾರ ಸಂಘದ ಅಧ್ಯಕ್ಷ ಶಾರೀಬ್ ಫರ್ಹಾನ್ ಮಾತನಾಡಿದರು. ಈ ಸಂದರ್ಭದಲ್ಲಿ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೀರಭದ್ರಶೆಟ್ಟಿ,ಮಾಜಿ ಅಧ್ಯಕ್ಷ ಬಸವರಾಜ್, ಸತೀಶ್, ಚಂದನ್, ವೆಂಕಟೇಶ್ ದೇವರಾಜು, ಮಂಜುನಾಥ್, ಶಿವಶಂಕರಪ್ಪ, ಗ್ರಾಪಂ ಅಧ್ಯಕ್ಷೆ ಲಲಿತಾ, ಇಂದಿರಾ, ಲೊಹಿತ್,ವಿನಯ್ ರಾಮಶೆಟ್ಟಿ ತೇಜಸ್, ವೆಂಕಟೇಶ್, ರವಿ ಹಾಜರಿದ್ದರು.

E-Mail ID: apmckrnagar@gmail.com ಕಛೇರಿ:08223-262352

**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೃಷ್ಣರಾಜನಗರ**
**ಮೈಸೂರು - ಹಾಸನ ರಸ್ತೆ, ಕೆ.ಆರ್.ನಗರ ತಾ, ಮೈಸೂರು ಜಿಲ್ಲೆ.**

ಸಂ:ಕೃಉಮಾಸ(ಕೃರಾನ)/737/2025-26 ದಿನಾಂಕ: 09.12.2025

**ಪ್ರಕಟಣೆ**

ಕೆ.ಆರ್.ನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ತರಕಾರಿ ಮಾರುಕಟ್ಟೆ ಪ್ರಾಂಗಣ ಹಾಗೂ ಸಾಲಿಗ್ರಾಮ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ನಿರ್ಮಿಸಿರುವ ಈ ಕೆಳಕಂಡ ಸಣ್ಣ ಅಂಗಡಿ ಮಳಿಗೆಗಳನ್ನು ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿ ಸ್ವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು 2004 ರ ರನ್ವಯ ಲೀವ್ ಅಂಡ್ ಲೈಸನ್ಸ್ ಶುಲ್ಕದ ಆಧಾರದ ಮೇಲೆ ಜೇಷ್ಠತೆಯ ಮೇಲೆ ಗರಿಷ್ಠ 55 ತಿಂಗಳ ಅವಧಿಗೆ ಪ್ರತಿ 11 ತಿಂಗಳಿಗೊಮ್ಮೆ ನವೀಕರಿಸುವ ಷರತ್ತಿಗೊಳಪಟ್ಟು ಹಾಗೂ 33 ತಿಂಗಳುಗಳ ನಂತರ ಶೇ 5 ರಷ್ಟನ್ನು ಹೆಚ್ಚಿಸುವ ಷರತ್ತಿಗೊಳಪಟ್ಟು ಹಂಚಿಕೆ ಮಾಡಲು ಅರ್ಹ ಪೇಟೆ ಕಾರ್ಯಕರ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ಕಟ್ಟಡಗಳ ವಿವರಗಳು | ಖಾಲಿ ಇರುವ ಮಳಿಗೆಗಳ ಸಂಖ್ಯೆ | ಮಾಸಿಕ ಲೀವ್ ಅಂಡ್ ಲೈಸೆನ್ಸ್ ಶುಲ್ಕ ರೂ. | ಮುಂಗಡ ಹಣ ರೂ. |
|---|---|---|---|---|
| 01 | ಕೆ.ಆರ್.ನಗರ ಸಮಿತಿಯ ತರಕಾರಿ ಮಾರುಕಟ್ಟೆ ಪ್ರಾಂಗಣದಲ್ಲಿರುವ ಹೊಸ ಸಣ್ಣ ಅಂಗಡಿ ಮಳಿಗೆಗಳು | 03, 05, 06, 07, 10 | 3,655-00 (ಪ್ರತಿ ಮಳಿಗೆಗೆ) | 7310-00 (ಪ್ರತಿ ಮಳಿಗೆಗೆ) |
| 02 | ಸಾಲಿಗ್ರಾಮ ಉಪ ಮಾರುಕಟ್ಟೆ ಪ್ರಾಂಗಣದಲ್ಲಿರುವ ಸಣ್ಣ ಅಂಗಡಿ ಮಳಿಗೆಗಳು | 02,03,04,05, 06,07 | 4,260-00 (ಪ್ರತಿ ಮಳಿಗೆಗೆ) | 8,520-00 (ಪ್ರತಿ ಮಳಿಗೆಗೆ) |

**ಷರತ್ತು ಮತ್ತು ನಿಬಂಧನೆಗಳು: 1)** ನೊಂದಣಿ ಶುಲ್ಕ ರೂ.500/-ಗಳನ್ನು ಕಛೇರಿಯಲ್ಲಿ ಪಾವತಿಸಿ ಅರ್ಜಿ ಸಲ್ಲಿಸಿ ನಿಗದಿತ ನಮೂನೆ - 1 ಸಲ್ಲಿಸಿ ನೊಂದಾಯಿಸಿಕೊಳ್ಳಲು ಕೊನೆಯ ದಿ: 26.12.2025ರ ಸಂಜೆ 4.00 ಗಂಟೆ ವರೆಗೆ. 2. ನೊಂದಾವಣೆ ಪಡೆದ ಅರ್ಜಿದಾರರು ನಿಗಧಿತ ನಮೂನೆಯೊಂದಿಗೆ ಮುಂಗಡ ಹಣ ಪಾವತಿಸಿ, ಅರ್ಜಿ ಸಲ್ಲಿಸಲು ಕೊನೆಯ ದಿ: 31.12.2025ರ ಸಂಜೆ 4.00 ಗಂಟೆಯವರೆಗೆ. **3)** ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್.ನಗರ ಇವರ ಹೆಸರಿನಲ್ಲಿ ಮುಂಗಡ ಹಣ ಠೇವಣಿಯ ಡಿ.ಡಿ ಖರೀದಿಸಿ ಕೆ.ಆರ್.ನಗರದಲ್ಲಿ ನಗದಾಗುವಂತೆ ಕಛೇರಿಯಲ್ಲಿ ಸಲ್ಲಿಸುವುದು. **4)** ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿ ಸ್ವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು 2004 ಕ್ರ.ಸಂಖ್ಯೆ (1) ರಲ್ಲಿ ಮಳಿಗೆ ಸಂಖ್ಯೆ 03 ಅನ್ನು ರಂತೆ ಪರಿಶಿಷ್ಟ ಜಾತಿಗೆ, ಮಳಿಗೆ ಸಂಖ್ಯೆ 06 ಅನ್ನು ರೈತ ಉತ್ಪಾದಕ ಸಂಸ್ಥೆಯವರಿಗೆ ಮೀಸಲಿರಿಸಲಾಗಿದೆ. ಕ್ರಮ ಸಂಖ್ಯೆ (2) ರಲ್ಲಿ, ಮಳಿಗೆ ಸಂಖ್ಯೆ 03 ಅನ್ನು ಪರಿಶಿಷ್ಠ ಜಾತಿಯವರಿಗೆ, ಮಳಿಗೆ ಸಂಖ್ಯೆ 04 ಅನ್ನು ರೈತ ಉತ್ಪಾದಕ ಸಂಸ್ಥೆಯವರಿಗೆ ಮೀಸಲಿರಿಸಲಾಗಿದೆ. **5)** ಹೆಚ್ಚಿನ ಷರತ್ತು ಹಾಗು ನಿಬಂಧನೆಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯದರ್ಶಿ**
**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್.ನಗರ**

**ಸಹಿ/- ಆಡಳಿತಾಧಿಕಾರಿ**
**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್.ನಗರ**

DIPR/DDMYS/1344/KSMCA/764/2025-26

# ಅರಣ್ಯಾಧಾರಿತ ಬುಡಕಟ್ಟು ವರ್ಗಗಳಿಗೆ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆ

## ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಸೂಚನೆ

ಚಾಮರಾಜನಗರ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಅತಿ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗಗಳಿಗೆ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಈ ತಿಂಗಳ ಕೊನೆಯ ವಾರದಲ್ಲಿ ವಿಭಿನ್ನವಾಗಿ ಆಯೋಜಿಸಲಾಗಿದ್ದು, ಇದಕ್ಕಾಗಿ ಸಕಲ ಸಿದ್ದತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಬುಡಕಟ್ಟು ಜನಾಂಗದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಆಯೋಜನೆ ಸಂಬಂಧ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬುಡಕಟ್ಟು, ಅರಣ್ಯವಾಸಿಗಳಿಗಾಗಿ ಚಾಮರಾಜನಗರ ಜಿಲ್ಲಾ ಕೇಂದ್ರದಲ್ಲಿ ಎರಡು ದಿನಗಳ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಬೆಟ್ಟ ಹತ್ತುವ, ಮರ ಹತ್ತುವ ಸ್ಪರ್ಧೆ, ಮ್ಯಾರಾಥಾನ್, 100 ಮೀ ಓಟ, ಹಗ್ಗ ಜಗ್ಗಾಟ, ಕಬ್ಬಡ್ಡಿ, ಲೆಮನ್ ಅಂಡ್ ಸ್ಪೂನ್, ವಾಲಿಬಾಲ್, ಇನ್ನಿತರ ಕ್ರೀಡಾ ಸ್ಪರ್ಧೆಗಳು ಇರಲಿವೆ. ಅಲ್ಲದೇ ಸಾಂಸ್ಕೃತಿಕ ಸ್ಪರ್ಧೆಗಳೂ ಇದ್ದು ಜಾನಪದ ನೃತ್ಯ, ಜಾನಪದ ಗೀತೆ, ಗೊರುಕನ, ಪಿನಾಸಿ ನೃತ್ಯ, ಗುಬ್ಬಿ ಅಲೆ, ಮಾರಿಕುಣಿತ ಇನ್ನಿತರ ಸ್ಪರ್ಧೆಗಳನ್ನು ಏರ್ಪಾಡು ಮಾಡಲಾಗಿದೆ ಎಂದು ಹೇಳಿದರು.



ಗುಂಪು ಹಾಗೂ ವೈಯಕ್ತಿಕ ವಿಭಾಗದಲ್ಲಿ ಪುರುಷರಿಗೆ ಹಾಗೂ ಮಹಿಳೆಯರಿಗೆ ಪ್ರತ್ಯೇಕವಾಗಿ ಸ್ಪರ್ಧೆಗಳು ಇರಲಿವೆ. ಎರಡು ದಿನಗಳ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವವರಿಗೆ ಉಚಿತವಾಗಿ ಬಸ್ ವ್ಯವಸ್ಥೆ ಮಾಡಬೇಕು. ಜಿಲ್ಲಾ ಕೇಂದ್ರದಲ್ಲಿ ಸ್ಪರ್ಧಿಗಳು ವಾಸ್ತವ್ಯ ಹೂಡಲು ಅಗತ್ಯ ವ್ಯವಸ್ಥೆಗಳನ್ನು ಕೈಗೊಳ್ಳಬೇಕು, ಊಟ ಉಪಹಾರ, ಕುಡಿಯುವ ನೀರು, ಇನ್ನಿತರ ಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು ಎಂದು ತಿಳಿಸಿದರು.

ಕ್ರೀಡಾ ಸ್ಪರ್ಧೆಗಳು ನಡೆಯಲಿರುವ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಅವಶ್ಯವಿರುವ ಸಿದ್ಧತೆಗಳನ್ನು ಕೈಗೊಳ್ಳಬೇಕು. ಉದ್ಘಾಟನಾ ಕಾರ್ಯಕ್ರಮಕ್ಕೆ ಶಿಷ್ಠಾಚಾರ ಅನುಸಾರ ಎಲ್ಲ ಪ್ರಕ್ರಿಯೆ ಕೈಗೊಳ್ಳಬೇಕು. ಸ್ಪರ್ಧೆಗಳಿಗೆ ತೀರ್ಪುಗಾರರನ್ನು ನಿಯೋಜಿಸಬೇಕು. ನಗದು ಬಹುಮಾನ ವಿತರಣೆಗೆ ಇಲಾಖೆಯ ಸುತ್ತೋಲೆಯಂತೆ ಕ್ರಮವಹಿಸಬೇಕು. ಕ್ರೀಡಾಕೂಟದಲ್ಲಿ ವೈದ್ಯಕೀಯ ವ್ಯವಸ್ಥೆ, ಪೊಲೀಸ್ ಭದ್ರತೆ ಇರಬೇಕು. ಒಟ್ಟಾರೆ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗಾಗಿ ವಿಶೇಷವಾಗಿ ಹಮ್ಮಿಕೊಳ್ಳುತ್ತಿರುವ ಎರಡು ದಿನಗಳ ಕ್ರೀಡೆ ಹಾಗೂ ಸಾಂಸಸ್ಪರ್ಧೆಗಳು ಯಶಸ್ವಿಯಾಗಿ ನಡೆಯಲು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಕಾರ್ಯೋನ್ಮುಖರಾಗಬೇಕೆಂದು ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಸುರೇಶ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್. ಎಸ್. ಬಿಂದ್ಯಾ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ ಹಾಗೂ ಇತರರು ಹಾಜರಿದ್ದರು. ಚಂದ್ರಪಾಟೀಲ್, ನಗರಸಭೆ ಪ್ರಭಾರ ಆಯುಕ್ತರಾದ ಪ್ರಕಾಶ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ, ಮುಖಂಡರಾದ ಡಾ. ಸಿ. ಮಾದೇಗೌಡ, ಎಂ. ಜಡೇಸ್ವಾಮಿ, ಮಾದೇವಯ್ಯ, ಪುಟ್ಟಮ್ಮ, ಸಿ. ಮಹದೇವ, ಬಸವರಾಜು, ಜೆ. ಮಹದೇವಸ್ವಾಮಿ, ಹುಚ್ಚಯ್ಯ, ಮಹದೇವಮ್ಮ, ಸಿದ್ದಮ್ಮ, ಜಡೆಯಪ್ಪ, ಮಹದೇವಮ್ಮ, ಪುಷ್ಪಲತಾ, ಇನ್ನಿತರ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ಮಾಲಿನ್ಯ ನಿಯಂತ್ರಣ ಮಂಡಳಿ ಆದೇಶ ರದ್ದು

# ಪುನಾರಂಭವಾಗಲಿರುವ ಜಾಲಿವುಡ್ ಅಮ್ಯುಸ್ಮೆಂಟ್ ಪಾರ್ಕ್

### ಬಿಗ್‌ಬಾಸ್ ಚಿತ್ರೀಕರಣ ನಡೆಯುತ್ತಿರುವ ಸ್ಥಳ ಮಾಲಿನ್ಯ ನಿಯಂತ್ರಣ ನಿಯಮಗಳ ಪಾಲನೆ ಹಿನ್ನೆಲೆಯಲ್ಲಿ ಆದೇಶ ರದ್ದು




ರಾಮನಗರ: ರಿಯಾಲಿಟಿ ಶೋ ಬಿಗ್‌ಬಾಸ್ ಚಿತ್ರೀಕರಣಗೊಳ್ಳುತ್ತಿರುವ ಬಿಡದಿ ಕೈಗಾರಿಕಾ ಪ್ರದೇಶದಲ್ಲಿರುವ ಜಾಲಿವುಡ್ ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಎಂದಿನಂತೆ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಟ್ಟಿದೆ. ಮಾಲಿನ್ಯ ನಿಯಂತ್ರಣದ ನಿಯಮಾವಳಿಗಳ ಪಾಲನೆಯ ಹಿನ್ನೆಲೆಯಲ್ಲಿ ಅಮ್ಯೂಸ್‌ಮೆಂಟ್ ಪಾರ್ಕ್ ಮುಚ್ಚುವ ಆದೇಶವನ್ನು ಮಂಡಳಿ ರದ್ದುಗೊಳಿಸಿದೆ.

ಮಾಲಿನ್ಯ ನಿಯಂತ್ರಣ ನಿಯಮಾವಳಿಗಳನ್ನು ಅನುಸರಿಸುತ್ತಿಲ್ಲ ಎಂದು ಆರೋಪದಡಿಯಲ್ಲಿ 2025ರ ಅಕ್ಟೋಬರ್ 6ರಂದು ಜಾಲಿವುಡ್ ಅಮ್ಯುಸ್‌ಮೆಂಟ್ ಪಾರ್ಕ ಅನ್ನು ಮುಚ್ಚಲು ಆದೇಶ ನೀಡಲಾಗಿತ್ತು. ಇದರನ್ವಯ ಜಿಲ್ಲಾಡಳಿತ ಪಾರ್ಕ್‌ನ ಪ್ರವೇಶ ದ್ವಾರಗಳಿಗೆ ಬೀಗ ಮುದ್ರೆ ಜಡಿದಿತ್ತು. ಬಿಗ್‌ಬಾಸ್ ರಿಯಾಲಿಟಿ ಶೋಗೂ ಇದು ಸಮಸ್ಯೆಯಾಗಿತ್ತು. ಕೆಲ ದಿನಗಳ ನಂತರ ಬಿಗ್‌ವಾಸ್ ರಿಯಾಲಿಟಿ ಶೋ ನಡೆಸಲು ಮಾತ್ರ ಅವಕಾಶ ನೀಡಲಾಗಿದ್ದರಿಂದ ನಾಲ್ಕು ದ್ವಾರಗಳ ಪೈಕಿ ಒಂದು ದ್ವಾರವನ್ನು ಮಾತ್ರ ಉಪಯೋಗಿಸಲು ಅವಕಾಶ ನೀಡಲಾಗಿತ್ತು. ಅಮ್ಯೂಸ್‌ಮೆಂಟ್ ಪಾರ್ಕ್‌ಗೆ ಸಾರ್ವಜನಿಕರ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿತ್ತು.

ಇದೀಗ ಜಾಲಿವುಡ್ ಅಮ್ಯೂಸ್‌ಮೆಂಟ್ ಪಾರ್ಕ್ ಮಾಲೀಕ ಸಂಸ್ಥೆ ವೆಲ್ಸ್ ಸ್ಟುಡಿಯೋ ಮತ್ತು ಎಂಟರ್‌ಟೈನ್ಮೆಂಟ್ ಪ್ರೈ ಲಿ ಮಾಲಿನ್ಯ ನಿಯಂತ್ರಣ ನಿಯಮಾವಳಿಗಳ ಪಾಲನೆಗೆ ಅವಶ್ಯಕ ವ್ಯವಸ್ಥೆಗಳನ್ನು ಮಾಡಿಕೊಂಡಿರುವುದರಿಂದ ಮಂಡಳಿ ತನ್ನ ಆದೇಶವನ್ನು ಹಿಂದಕ್ಕೆ ಪಡೆದುಕೊಂಡಿದೆ.

### ಆರೋಪ ಏನಿತ್ತು?

ಅಮ್ಯೂಸ್‌ಮೆಂಟ್ ಪಾರ್ಕ್ ಹಸಿರು ವಲಯದಲ್ಲಿದ್ದು ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಯಾವುದೇ ಅನುಮತಿಯನ್ನು ಪಡೆದುಕೊಂಡಿಲ್ಲ ಎಂದು ಹೇಳಲಾಗಿತ್ತು. ಮಂಡಳಿಯ ರಾಮನಗರ ಕಚೇರಿಯ ಅಧಿಕಾರಿಗಳು ನಡೆಸಿದ ತಪಾಸಣೆ ವೇಳೆ ಪರಿಸರ ಹಲವಾರು ನಿಯಮಗಳು ಉಲ್ಲಂಘನೆಯಾಗಿದ್ದನ್ನು ಪತ್ತೆಹಚ್ಚಿತ್ತು. ಈ ಹಿನ್ನೆಲೆಯಲ್ಲಿ ಮಂಡಳಿ ಪಾರ್ಕ್ ಅನ್ನು ಮುಚ್ಚಲು ಆದೇಶಿಸಿತ್ತು.

### ಆದೇಶ ಹಿಂಪಡೆದ ಕಾರಣ ಏನು?

ಜಾಲಿವುಡ್ ಅಮ್ಯೂಸ್‌ಮೆಂಟ್ ಪಾರ್ಕ್‌ನಲ್ಲಿ ಕಲ್ಮಶ ನೀರು ಸಂಸ್ಕರಣಾ ಘಟಕ ಕಾರ್ಯ ನಿರ್ವಹಿಸುತ್ತಿದ್ದು, ಸಂಸ್ಕರಿಸಿದ ನೀರನ್ನು ಪಾರ್ಕ್‌ನಲ್ಲಿರುವ ಗಿಡ–ಮರಗಳಿಗಾಗಿ ಉಪಯೋಗಿಸಲಾಗುತ್ತಿದೆ. ಸಂಸ್ಕರಣಾ ಘಟಕದ ಸ್ಥಳ ಉತ್ತಮ ನಿರ್ವಹಣೆಯಲ್ಲಿದೆ. ಈ ಹಿಂದೆ ಸಂಸ್ಕರಣಾ ಘಟಕದ ಬಳಿಯಲ್ಲಿ ಶೇಖರಣೆಯಾಗಿದ್ದ ವಿಂಗಡಿಸದ ಘನತ್ಯಾಜ್ಯವನ್ನು ತೆರವುಗೊಳಿಸಿ ಸ್ಥಳವನ್ನು ಸ್ವಚ್ಛಗೊಳಿಸಲಾಗಿದೆ. ಘನತ್ಯಾಜ್ಯ ಶೇಖರಣೆಗಾಗಿ ಮಾಲೀಕ ಸಂಸ್ಥೆ ನಿಗಧಿತ ಸ್ಥಳವನ್ನು ಗುರುತಿಸಿದೆ. ತ್ಯಾಜ್ಯವನ್ನು ವಿಂಗಡಿಸಲು ಸಹ ವ್ಯವಸ್ಥೆ ಮಾಡಲಾಗಿದೆ ಎಂಬಿತ್ಯಾದಿ ವಿಚಾರಗಳನ್ನು ಮಾಲಿನ್ಯ ನಿಯಂತ್ರಣ ಮಂಡಳಿಯ ಅಧಿಕಾರಿಗಳು ಪುನಃ ತಪಾಸಣೆ ನಡೆಸಿ ದೃಢಪಡಿಸಿಕೊಂಡಿದ್ದಾರೆ.

ಅಮ್ಯೂಸ್‌ಮೆಂಟ್ ಪಾರ್ಕ್ ಮುಚ್ಚಲು ನೀಡಲಾಗಿದ್ದ ಆದೇಶವನ್ನು ವಾಯು ಮಾಲಿನ್ಯ (ತಡೆಗಟ್ಟುವಿಕೆ ಮತ್ತು ನಿಯಂತ್ರಣ) ಕಾಯ್ದೆ 1981ರ ಸೆಕ್ಷನ್ 31(ಎ)ಅಡಿಯಲ್ಲಿ ಪ್ರಸ್ತುಪಡಿಸಲಾಗಿರುವ ನಿಯಮಾವಳಿಗಳ ಅನ್ವಯ ಹಿಂಪಡೆಯಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಬೀಗಮುದ್ರೆಗಳನ್ನು ತೆರವುಗೊಳಿಸಲು ಸಹ ತಿಳಸಲಾಗಿದೆ. ವಿದ್ಯುತ್ ಪ್ರಸರಣವನ್ನು ಸಹ ಪುನಾರಂಭಿಸಲು ಸಹ ಬೆಸ್ಕಾಂ ಇಲಾಖೆಗೆ ತಿಳಸಲಾಗಿದೆ ಎಂದು ರಾಜ್ಯ ಮಾಲಿನ್ಯ ನಿಯಂತ್ರ ಮಂಡಳಿಯ ಚೇರ್ಮನ್ ಪಿ.ಎಂ.ನರೇಂದ್ರಸ್ವಾಮಿ ಡಿ.6ರಂದು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಆದೇಶದನ್ವಯ ಜಿಲ್ಲಾಡಳಿತ ಜಾಲಿವುಡ್ ಅಮ್ಯೂಸ್ಮೆಂಟ್ ಪಾರ್ಕ್‌ನ ದ್ವಾರಗಳನ್ನು ತೆರವುಗೊಳಿಸಿದ ನಂತರ ಸಾರ್ವಜನಿಕರ ಪ್ರವೇಶಕ್ಕೆ ಅನುವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ರಾಜ್ಯಮಟ್ಟದ ನೆಟ್ ಬಾಲ್ ಪಂದ್ಯಾವಳಿ ಆಯೋಜನೆ: ಡಿಸಿಯಿಂದ ಸಿದ್ದತೆ ಪರಿಶೀಲನೆ



ಚಾಮರಾಜನಗರ: ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಇದೇ ಡಿಸೆಂಬರ್ 12 ರಿಂದ 14ರವರೆಗೆ 3 ದಿನಗಳ ಕಾಲ ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿರುವ ರಾಜ್ಯ ಮಟ್ಟದ ನೆಟ್ ಬಾಲ್ ಪಂದ್ಯಾವಳಿಗೆ ಕೈಗೊಳ್ಳಲಾಗಿರುವ ಸಿದ್ದತೆಗಳನ್ನು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪರಿಶೀಲಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ನೆಟ್ ಬಾಲ್ ಪಂದ್ಯಾವಳಿಯ ಸಿದ್ದತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಪಂದ್ಯಾವಳಿಗಾಗಿ ಕೈಗೊಂಡಿರುವ ಸಿದ್ದತೆಗಳ ಬಗ್ಗೆ ಜಿಲ್ಲಾಧಿಕಾರಿಯವರು ಪೂರ್ಣ ಮಾಹಿತಿ ಪಡೆದರು. ರಾಜ್ಯಾದ್ಯಂತ ಅಂದಾಜು 1 ಸಾವಿರ ವಿದ್ಯಾರ್ಥಿಗಳು ನೆಟ್ ಬಾಲ್ ಪಂದ್ಯಾವಳಿಗೆ ಭಾಗವಹಿಸುವ ನಿರೀಕ್ಷೆ ಇರುವ ಹಿನ್ನೆಲೆಯಲ್ಲಿ ಸಮರ್ಪಕವಾಗಿ ನೊಂದಣಿ ಕಾರ್ಯ ಕೈಗೊಳ್ಳಬೇಕು. ಉದ್ಘಾಟನೆ, ವಸತಿ, ಕ್ರೀಡಾಂಗಣಕ್ಕೆ ಅಗತ್ಯವಿರುವ ವ್ಯವಸ್ಥೆಗಳಿಗೆ ಯಾವುದೇ ಲೋಪವಾಗಬಾರದು. ಸ್ಪರ್ಧಿಗಳು ವಾಸ್ತವ್ಯ ಹೂಡುವ ವಸತಿ ಮತ್ತು ಕ್ರೀಡಾಂಗಣದಲ್ಲಿಯೂ ಸೂಕ್ತ ಊಟ ಉಪಾಹಾರ ವ್ಯವಸ್ಥೆ ಇರಬೇಕು. ಕ್ರೀಡಾಂಗಣಕ್ಕೆ ನೀರಿನ ಸಿಂಪಡಣೆ, ಸ್ವಚ್ಚತೆ, ತಾತ್ಕಾಲಿಕ ಶೌಚಾಲಯಕ್ಕಾಗಿ ನಗರಸಭೆ ಅಧಿಕಾರಿಗಳು ಮತ್ತೊಮ್ಮೆ ಭೇಟಿ ನೀಡಿ ಸೂಕ್ತ ಕ್ರಮ ವಹಿಸಬೇಕು. ಪಂದ್ಯಾವಳಿಗೆ ಅಗತ್ಯವಿರುವ ಕ್ರೀಡಾ ಉಪಕರಣಗಳಿಗೆ ಎಲ್ಲ ಸಿದ್ದತೆ ಇರಬೇಕು. ಕ್ರೀಡಾಂಗಣದಲ್ಲಿ ಕುಡಿಯುವ ನೀರು, ಊಟ ಉಪಹಾರ ವಿತರಣೆಗೆ ಆಹಾರ ಸಮಿತಿ ನಿಗಾ ವಹಿಸಬೇಕು. ಮಕ್ಕಳು ವಾಸ್ತವ್ಯ ಹೂಡವ ಸ್ಥಳಗಳಲ್ಲಿಯೂ ಮೂಲ ಸೌಕರ್ಯಗಳಿಗೆ ಕೊರತೆಯಾಗಬಾರದು. ಮಕ್ಕಳ ಸುರಕ್ಷತೆ, ಸಾರಿಗೆ ವ್ಯವಸ್ಥೆ ಸೇರಿದಂತೆ ಎಲ್ಲ ಸೌಲಭ್ಯಗಳನ್ನು ಸಮರ್ಪಕವಾಗಿ ಇರುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ, ಉಪವಿಭಾಗಾಧಿಕಾರಿ ದಿನೇಶ್ ಕುಮಾರ್ ಮೀನಾ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಚಂದ್ರಪಾಟೀಲ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಸುರೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಚಿದಂಬರ, ನಗರಸಭೆ ಪ್ರಭಾರ ಆಯುಕ್ತರಾದ ಪ್ರಕಾಶ್, ಹಿರಿಯ ಕ್ರೀಡಾಪಟು ಶ್ರೀನಿವಾಸ ಪ್ರಸಾದ್, ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ಸಫಾರಿ ಪುನಾರಂಭಿಸಿದರೆ ಹೋರಾಟ : ಹೊನ್ನೂರು ಪ್ರಕಾಶ್

# ಸಫಾರಿ ಬಂದ್‌ನಿಂದ ಶೇ.80 ರಷ್ಟು ಮಾನವ–ವನ್ಯಪ್ರಾಣಿಗಳ ಸಂಘರ್ಷ ತಪ್ಪಿದೆ



ಚಾಮರಾಜನಗರ: ಬಂಡೀಪುರ, ಕೆ,ಗುಡಿ ಹಾಗೂ ನಾಗಹೊಳೆ ಫಾರೆಸ್ಟ್‌ಗಳಲ್ಲಿ ವನ್ಯಪ್ರಾಣಿಗಳ ಹಾವಳಿ ಹೆಚ್ಚಿದ್ದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಸಫಾರಿ ಬಂದ್ ಮಾಡಿ, ಅರಣ್ಯದೊಳಗೆ ಯಾವುದೇ ವಾಹನಗಳು ಹಾಗು ಜನರು ಹೋಗದಂತೆ ತಡೆದ ಪರಿಣಾಮ ಶೇಕಡ 80 ರಷ್ಟು ವನ್ಯ ಪ್ರಾಣಿಗಳು ರೈತರ ಜಮೀನುಗಳಿಗೆ ಬರುವುದು ತಪ್ಪಿದೆ ಎಂದು ಸಾಮೂಹಿಕ ನಾಯಕತ್ವದ ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ ಘಟಕ ರಾಜ್ಯಾಧ್ಯಕ್ಷರಾದ ಹೊನ್ನೂರು ಪ್ರಕಾಶ್ ತಿಳಿಸಿದರು.

ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಮಾದಾಪಟ್ಟಣದಲ್ಲಿ ರೈತಸಂಘದ ಗ್ರಾಮ ಘಟಕವನ್ನು ಉದ್ಘಾಟಿಸಿ ಅವರು ಮಾತನಾಡಿದರು. ರೈತ ಸಂಘಟನೆಗಳು ಹಾಗೂ ಪರಿಸರ ವಾದಿಗಳ ಒತ್ತಾಯದ ಮೇರೆಗೆ ರಾಜ್ಯ ಸರ್ಕಾರ ಸಫಾರಿಯನ್ನು ಸಂಪೂರ್ಣವಾಗಿ ಬಂದ್ ಮಾಡಿದೆ. ಇದರ ಫಲಿತಾಂಶ ಈಗಲೇ ಅರಣ್ಯ ಇಲಾಖೆಗೆ ದೊರೆತಿದೆ. ಅರಣ್ಯ ಇಲಾಖೆಯ ಅಧಿಕಾರಿಗಳು ಅರಣ್ಯ ಹಾಗು ವನ್ಯ ಪ್ರಾಣಿಗಳ ರಕ್ಷಣೆಯನ್ನು ಬಿಟ್ಟು ಸಫಾರಿ ಮಾಡುವ ಮೂಲಕ ಕಾಡು ಹಾಳು ಮಾಡಿದ್ದರು. ಅಲ್ಲದೇ ವನ್ಯ ಪ್ರಾಣಿಗಳು ಹೆಚ್ಚಾಗಿ ವಾಸಿಸುವಂತ ಇಕೋ ಜೋನ್‌ಗಳಿಗೆ ಪ್ರವಾಸಿಗಳನ್ನು ಕರೆದೊಯ್ಯದು ದರ್ಶನ ಮಾಡಿಸುವ ಕಲಸವನ್ನು ನಿರಂತರವಾಗಿ ಮಾಡಿದ್ದರು. ಅದರಲ್ಲಿಯೂ ವಿವಿಐಪಿ, ವಿಐಪಿ ಎಂಬ ವಿಭಾಗಗಳಿದ್ದು, ರಾಜಕಾರಣಿಗಳು, ಉದ್ಯಮಿಗಳು ಹಾಗು ಅವರ ಚೇಲಾಗಳು ಸಫಾರಿಗೆ ಬಂದು ಹೋಟೆಲ್‌ನಲ್ಲಿ ಉಳಿದುಕೊಂಡರೆ ಅಂಥವರಿಗೆ ಅತಿಥ್ಯ ನೀಡುವುದು ಅರಣ್ಯ ಇಲಾಖೆಯ ಸಿಬ್ಬಂದಿಗಳ ಕೆಲಸವಾಗಿತ್ತು. ರೈತರ ಜಮೀನುಗಳಿಗೆ ಆನೆ, ಚಿರತೆ, ಹುಲಿಯಂತಹ ಪ್ರಾಣಿಗಳು ಬರದಂತೆ ತಡೆಯಿರಿ ಎಂದರೆ, ವಾಹನ ಇಲ್ಲ, ಸಿಬ್ಬಂದಿ ಕೊರತೆ ಎಂಬ ನೆಪ ಹೇಳುತ್ತಿದ್ದರು. ಇರುವಷ್ಟು ಸಿಬ್ಬಂದಿಯನ್ನು ಹಣದಾಸೆಗೆ ಸಫಾರಿಗೆ ಹಾಕಿಕೊಂಡರೆ ಇನ್ನು ಅರಣ್ಯ ರಕ್ಷಣೆ ಅಗುತ್ತದೆಯೇ ಎಂದು ಪ್ರಶ್ನೆ ಮಾಡಿದರು.

ಈ ಕೂಡಲೇ ರಾಜ್ಯ ಸರ್ಕಾರ ಸಫಾರಿಯನ್ನು ಖಾಯಂ ಆಗಿ ಬಂದ್ ಮಾಡಿ, ಅರಣ್ಯದ ಪ್ರದೇಶ ವ್ಯಾಪ್ತಿಯಲ್ಲಿರುವ ವನ್ಯ ಪ್ರಾಣಿಗಳ ರಕ್ಷಣೆ ಮತ್ತು ಅವುಗಳಿಗೆ ಪೂರಕವಾದ ಆಹಾರ ಕಾಡಿನಲ್ಲೇ ದೊರೆಯುವಂತೆ ವ್ಯವಸ್ಥೆ ಮಾಡಬೇಕು. ಅರಣ್ಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮೊದಲು ನಗರ ಪ್ರದೇಶದಲ್ಲಿ ವಾಸ್ತವ್ಯ ಹೂಡುವುದು ಬಿಟ್ಟು ಕಾಡಿನತ್ತ ಹೋಗಲಿ. ಆಗ ಎಲ್ಲವು ಸರಿ ಹೋಗುತ್ತದೆ. ರೈತರ ಜಮೀನುಗಳಿಗೆ ಆ ಪ್ರಾಣಿಗಳು ಬರುವುದಿಲ್ಲ. ಇದನ್ನು ಅರಣ್ಯ ಸಚಿವರು ಮನಗಂಡು ಕಾರ್ಯಪ್ರವೃತ್ತರಾಗಬೇಕು ಎಂದರು. ಇತ್ತೀಚಿನ ದಿನಗಳಲ್ಲಿ ವಿವಿಧ ಇಲಾಖೆಗಳಲ್ಲಿ ರೈತರ ಕೆಲಸ ಎಂದರೆ ಅಸಡ್ಡೆ ಆಗಿದೆ. ಗ್ರಾಮ ಪಂಚಾಯಿತಿ, ತಾಲೂಕು ಹಾಗೂ ಜಿಲ್ಲಾ ಮಟ್ಟದ ಕಚೇರಿಗಳಲ್ಲಿ ರೈತರು ಕೊಡುವ ಅರ್ಜಿಗಳು ವಿಲೇವಾರಿ ಆಗುತ್ತಿಲ್ಲ. ಈ ಬಗ್ಗೆ ಸರ್ಕಾರ ಎಚ್ಚೆತ್ತು ಕೊಂಡು ಸಮಸ್ಯೆ ಬಗೆಹರಿಸಲು ಮುಂದಾಗಬೇಕು. ಇಲ್ಲವೇ ಕಚೇರಿಗೆ ನುಗ್ಗುವ ಚಳವಳಿಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಕಾರ್ಯಕ್ರಮದಲ್ಲಿ ಸಂಘದ ರಾಜ್ಯಅಧ್ಯಕ್ಷ ಮಂಡಳಿ ಸದಸ್ಯರಾದ ಮೈಸೂರು ಮಂಜು, ಕಿರಣ್ ಮಾಡ್ರಹಳ್ಳಿ, ಪಾಪಣ್ಣ ಭೀಮನಬೀಡು, ರಾಜು ಹಳ್ಳದ ಮಾದಹಳ್ಳೀ, ಮಾದಪ್ಪ ಕೆಕೆ ಹುಂಡಿ, ಮಹದೇವಪ್ರಸಾದ್ ಬರಗಿ, ಮಹೇಶ್ ಬೆಟ್ಟದಪುರ, ಸಣ್ಮುಖ ಸ್ವಾಮಿ ಹಾಲಹಳ್ಳಿ, ಮಹೇಶ್ ಗ್ರಾಮಸ್ಥರು ಉಪಸ್ಥಿತರಿದ್ದರು.

# ಮ.ಬೆಟ್ಟದಲ್ಲಿ ಹುಂಡಿ ಹಣ ಎಣಿಕೆ

ಚಾಮರಾಜನಗರ: ಹನೂರು ತಾಲೂಕಿನ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಹುಂಡಿ ಹಣ ಎಣಿಕೆಯಲ್ಲಿ ಈ ಬಾರಿ 28 ದಿನಗಳ ಅವಧಿಯಲ್ಲಿ 2.53 ಕೋಟಿ ಸಂಗ್ರಹವಾಗಿದೆ.

ಮಲೆ ಮಹದೇಶ್ವರ ಬೆಟ್ಟದ ಬಸ್ ನಿಲ್ದಾಣದ ಬಳಿಯ ವಾಣಿಜ್ಯ ಸಂಕೀರ್ಣದಲ್ಲಿ ಪ್ರಾಧಿಕಾರದ ಕಾರ್ಯದರ್ಶಿ ಎಇ ರಘು ಹಾಗೂ ಸಾಲೂರು ಬೃಹನ್ ಮಠದ ಅಧ್ಯಕ್ಷರಾದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮಿ ರವರ ಸಮ್ಮುಖದಲ್ಲಿ ಇಂದು ಹುಂಡಿಗಳನ್ನು ತೆರೆಯಲಾಯಿತು. ಬಳಿಕ ಸಿಸಿ ಕ್ಯಾಮರಾ ಕಣ್ಗಾವಲಿನಲ್ಲಿ ಎಣಿಕೆ ಕಾರ್ಯ ಪ್ರಾರಂಭಗೊಂಡು ಸಂಜೆ 6 ಗಂಟೆಗೆ ಮುಕ್ತಾಯವಾಯಿತು.

ಸರ್ಕಾರಿ ರಜಾ ದಿನ, ಅಮಾವಾಸ್ಯೆ , ಕಾರ್ತಿಕ ಮಾಸ, ಜಾತ್ರಾ ಮಹೋತ್ಸವ ಸೇರಿದಂತೆ ರಾಜ್ಯ ಸರ್ಕಾರದಣ ಮಹತ್ವಾಕಾಂಕ್ಷಿ ಶಕ್ತಿ ಯೋಜನೆಯ ಉಚಿತ ಪ್ರಯಾಣದ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ದೇವಸ್ಥಾನಕ್ಕೆ ಭೇಟಿ ನೀಡುತ್ತಿದ್ದಾರೆ. ಈ ಬಾರಿ 28 ದಿನಗಳ ಅವಧಿಯಲ್ಲಿ 2,53,98,859 ನಗದು ಹಣ, 25 ಗ್ರಾಂ ಚಿನ್ನ ಹಾಗೂ 1 ಕೆಜಿ 253 ಗ್ರಾಂ ಬೆಳ್ಳಿಯ ವಸ್ತುಗಳನ್ನು ಹುಂಡಿಗೆ ಕಾಣಿಕೆ ಸಲ್ಲಿಸಿದ್ದಾರೆ ಜೊತೆಗೆ ಚಲಾವ ಣೆಯಲ್ಲಿ ಇಲ್ಲದ 2000 ಮುಖಬೆಲೆಯ 3 ನೋಟುಗಳು 16 ವಿದೇಶಿ ನೋಟುಗಳು ಕಂಡು ಬಂದಿವೆ. ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಹಣಕಾಸು ಮತ್ತು ಲೆಕ್ಕ ಪತ್ರ ಸಲಹೆಗಾರರಾದ ಮಹದೇವು.ಸಿ, ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ್, ಲೆಕ್ಕ ಧೀಕ್ಷಕರಾದ ಗುರುಮಲ್ಲಯ್ಯ ಹಾಗೂ ಚಾಮರಾಜನಗರ ಜಿಲ್ಲಾಡಳಿತ ಕಛೇ ರಿಯ, ಭಾರತಿ ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಮುಖ್ಯ ವ್ಯವಸ್ಥಾಪಕರು, ಸಿಬ್ಬಂದಿಗಳು ಹಾಜರಿದ್ದರು.



# ವಾಸ್ತಲ್ಯ ಮನೆಗೆ ಭೂಮಿಪೂಜೆ



ಗುಂಡ್ಲುಪೇಟೆ: ಧರ್ಮಸ್ಥಳ ಸಂಸ್ಥೆ ವತಿಯಿಂದ ಕೆಲಸೂರು ವಲಯದ ಬನ್ನಿತಳಾಪುರ ಕಾರ್ಯಕ್ಷೇತ್ರದಲ್ಲಿ ಮಾದಮ್ಮ ಎಂಬುವವರಿಗೆ ನಿರ್ಗತಿಕರಿಗೆ ವಾಸ್ತಲ್ಯ ಮನೆಯನ್ನು ಕಟ್ಟಿಕೊಡುವ ಕಾರ್ಯಕ್ಕೆ ಗ್ರಾಮದ ಮುಖಂಡ ಡಿ ಮಹೇಶ್ ಭೂಮಿ ಪೂಜೆ ನೆರವೇರಿಸಿದರು

ಈ ಸಂದರ್ಭದಲ್ಲಿ ಮಾತನಾಡಿದ ಅವರು ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯು. ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಸರ್ವಾಂಗೀಣ ಅಭಿವೃದ್ಧಿಗೆ ಸಹಾಯ ಮಾಡುತ್ತಿದೆ .ಅನೇಕ ಸಾಮಾಜಿಕ ಕಾರ್ಯಕ್ರಮ ಗಳು ಧರ್ಮಸ್ಥಳ ಸಂಸ್ಥೆ ಯಿಂದ ನಡೆಯುತ್ತಿದ್ದು ಸಮಾಜದ ಬಗ್ಗೆ ಸಂಸ್ಥೆ ಮಾಡುವ ಸೇವೆಗಳು ಮಾದರಿಯಾಗಿವೆ ಎಂದರು.

ಗುಂಡ್ಲುಪೇಟೆ ತಾಲೂಕಿನ ಯೋಜನಾಧಿಕಾರಿ ಮಾತನಾಡಿ ಚಂದ್ರ ಶೇಖರ್ ಮಾತನಾಡಿ ಸಮಾಜದಲ್ಲಿ ಇರುವ ಅತಿ ದುರ್ಬಲ ರನ್ನು ಮತ್ತು ಅಸಹಾಯಕತೆ ಸ್ಥಿತಿಯಲ್ಲಿರುವ ಕುಟುಂಬಗಳನ್ನು ಗುರುತಿಸಿ ಅವರ ಜೀವನ ನಿರ್ವಹಣೆಗೆ ಬೇಕಾದ ಮಾಸಾಸನ ಹಾಗೂ ಅಗತ್ಯಕ್ಕೆ ಅನುಕೂಲವಾಗುವಂತೆ ಕಿಟ್ಟುಗಳನ್ನು ಕೊಡುವುದರೊಂದಿಗೆ ಸೂರು ಇಲ್ಲದವರಿಗೆ ಸ್ವಂತ ಸೂರು ನಿರ್ಮಾಣ ಮಾಡುವ ಉದ್ದೇಶವಿದೆ ಹೂದಲಾಗಿದೆ ಎಂದು ಹೇಳಿದರು. ಈ ವೇಳೆ ಗ್ರಾಮ ಪಂಚಾಯಿತಿ ಸದಸ್ಯರಾದ ಅಭಿಷೇಕ್ ಜ್ಞಾನವಿಕಾಸ್ ಸಮನ್ವಯ ಅಧಿಕಾರಿ ಚೈತ್ರ ವಲಯ ಮೇಲ್ವಿಚಾರಕ ಆದರ್ಶ್ ಸೇವಾಪ್ರತಿನಿಧಿಯವರು ಹಾಗೂ ಸಂಘದ ಸದಸ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು

# ಹಾಡು ಹಗಲೇ ಕಳ್ಳರ ಕೈಚಳಕ ನಗದು ದೋಚಿ ಪರಾರಿ

ಚಾಮರಾಜನಗರ, ಹಾಡ ಹಗಲಲ್ಲೇ ಮನೆ ಬಾಗಿಲು ಮುರಿದು ಕಳ್ಳತನ ಮಾಡಿರುವ ಘಟನೆ ಬುಧವಾರ ಸಂಭವಿಸಿದೆ.


ಕರಿನಂಜನಪುರದ ನಿವಾಸಿ ನಾರಾಯಣಸ್ವಾಮಿ ಎಂಬುವವರ ಮನೆಯಲ್ಲಿ ಯಾರೂ ಇಲ್ಲದ ಸಮಯ ನೋಡಿ ಹಿಂದಿನ ಬಾಗಿಲನ್ನು ಮುರಿದು ಒಳನುಗ್ಗಿದ ಕಳ್ಳರು ಬೀರು ಹೊಡೆದು ಆಭರಣವನ್ನು ಅಲ್ಲೇ ಬಿಟ್ಟು 31,500 ರೂಗಳನ್ನು ಹಣವನ್ನು ಕಳ್ಳತನ ಮಾಡಿ ಪರಾರಿಯಾಗಿದ್ದಾರೆ. ವಿಷಯ ತಿಳಿದ ಕೂಡಲೇ ಪಟ್ಟಣ ಠಾಣೆಯ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಖದೀಮರನ್ನು ಪತ್ತೆ ಹಚ್ಚಲು ಬಲೆ ಬೀಸಿದ್ದಾರೆ. ಈ ಸಂಬಂಧ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಹಾಡು ಹಗಲೇ ಕಳ್ಳರ ಕೈ ಚಳಕ: ಮನೆ ಬೀಗ ಮುರಿದು ಕಳ್ಳತನ

ಚಾಮರಾಜನಗರ, ಹಾಡ ಹಗಲಲ್ಲೇ ಮನೆ ಬಾಗಿಲು ಮುರಿದು ಕಳ್ಳತನ ಮಾಡಿರುವ ಘಟನೆ ಬುಧವಾರ ಸಂಭವಿಸಿದೆ.

ಕರಿನಂಜನಪುರದ ನಿವಾಸಿ ನಾರಾಯಣಸ್ವಾಮಿ ಎಂಬುವವರ ಮನೆಯಲ್ಲಿ ಯಾರೂ ಇಲ್ಲದ ಸಮಯ ನೋಡಿ ಹಿಂದಿನ ಬಾಗಿಲನ್ನು ಮುರಿದು ಒಳನುಗ್ಗಿದ ಕಳ್ಳರು ಬೀರು ಹೊಡೆದು ಆಭರಣವನ್ನು ಅಲ್ಲೇ ಬಿಟ್ಟು 31,500 ರೂಗಳನ್ನು ಹಣವನ್ನು ಕಳ್ಳತನ ಮಾಡಿ ಪರಾರಿಯಾಗಿದ್ದಾರೆ. ವಿಷಯ ತಿಳಿದ ಕೂಡಲೇ ಪಟ್ಟಣ ಠಾಣೆಯ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಖದೀಮರನ್ನು ಪತ್ತೆ ಹಚ್ಚಲು ಬಲೆ ಬೀಸಿದ್ದಾರೆ. ಈ ಸಂಬಂಧ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



### ಮಡ್ಡಿಕೆರೆ ಗೋಪಾಲ್ ಬಣ್ಣನೆ

# ಡಾ.ವೈ.ಡಿ.ರಾಜಣ್ಣ ಕೇಂದ್ರ ಕಸಾಪ ಅಧ್ಯಕ್ಷತೆಗೆ ಅರ್ಹರು

ಮೈಸೂರು: ಕನ್ನಡದ ಅಪೂರ್ವ ನಿಷ್ಠೆಯ ಡಾ.ವೈ.ಡಿ. ರಾಜಣ್ಣ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸ್ಥಾನದ ಚುನಾವಣೆಗೆ ಅರ್ಹ ವ್ಯಕ್ತಿ ಎಂದು. ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅಭಿಪ್ರಾಯಪಟ್ಟರು.

ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾ ಸಂಘದಲ್ಲಿ ಅಲೆಯನ್ಸ್ ಕ್ಲಬ್ಸ್ ಆಫ್ ಮೈಸೂರು, ನಾಲ್ವಡಿ ಸಂಸ್ಥೆ ಸಹಯೋಗದಲ್ಲಿ ಶಿವರಾಂಪೇಟೆಯಲ್ಲಿರುವ ಸಂಘದ ಕಛೇರಿಯಲ್ಲಿ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಡಾ.ವೈ.ಡಿ.ರಾಜಣ್ಣ ಉಪ ನಿರ್ದೇಶಕರಾಗಿ ಪದೋನ್ನತಿ ಪಡೆದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಡಾ.ವೈ.ಡಿ.ರಾಜಣ್ಣ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದರು. ಕೃಷಿ, ನಾಡು, ನುಡಿ ಪರ ಕಾರ್ಯಗಳ ಮೂಲಕ ಜನಮನ್ನಣೆಗಳಿಸಿ, ಜನಸ್ನೇಹಿಅಧಿಕಾರಿಯಾಗಿ ಕನ್ನಡ ನಾಡು ನುಡಿಯ ಬಗ್ಗೆ ಅಪರಿಮಿತ ಅಭಿಮಾನ ಇರಿಸಿಕೊಂಡಿದ್ದಾರೆ. ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಕಳೆದ ಮೂರು ದಶಕಗಳಿಂದ ಗುರುತಿಸಿಕೊಂಡಿದ್ದಾರೆ. ಅವರನ್ನ ಮುಂದಿನ ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸ್ಥಾನ ಚುನಾವಣೆಗೆ ಸ್ಪರ್ಧಿಸುವಂತೆ ಒತ್ತಾಯ ಮಾಡಬೇಕಿದೆ ಎಂದರು.



ಮೈಸೂರು ಜಿಲ್ಲಾ ಸುಗಮ ಸಂಗೀತ ಪರಿಷತ್ತಿನ ಅಧ್ಯಕ್ಷ ಡಾ.ನಾಗರಾಜ.ವಿ.ಬೈರಿ ಮಾತನಾಡಿದರು. ಹಿರಿಯ ಸಮಾಜಸೇವಕ ಡಾ ರಘುರಾಮ ವಾಜಪೇಯಿ, ಅಲಯನ್ಸ್ ಕ್ಲಬ್ ಮೈಸೂರು ರಾಜ್ಯಪಾಲ ಡಾ.ಎಸ್.ವೆಂಕಟೇಶ್, ಕೈಗಾರಿಕೆ ಮತ್ತು ವಾಣಿಜ್ಯ ಸಂಸ್ಥೆಯ ಅಧ್ಯಕ್ಷ ಕೆ.ಬಿ.ಲಿಂಗರಾಜು, ಅಖಿಲ ಕರ್ನಾಟಕ ಒಕ್ಕಲಿಗರ ಮಹಾಸಭಾದ ಸಂಸ್ಥಾಪಕ ರಾಜ್ಯಾಧ್ಯಕ್ಷ ಎನ್.ಬೆಟ್ಟೇಗೌಡ, ಇಂದಿರಾ ವೆಂಕಟೇಶ್, ಮೈಸೂರು ಕೋ ಆಪರೇಟಿವ್ ಬ್ಯಾಂಕಿನ ನಿರ್ದೇಶಕ ಪಡುವಾರಹಳ್ಳಿ ಎಂ. ರಾಮಕೃಷ್ಣ, ಉದಯಗಿರಿ ಕನ್ನಡ ಸಂಘದ ಅಧ್ಯಕ್ಷ ಜಯಕುಮಾರ್, ಕೆಎಂಪಿಕೆ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಸತೀಶ್ ಮುಂತಾದವರು ಉಪಸ್ಥಿತರಿದ್ದರು.

# 23ರಂದು ರಾಜ್ಯ ಮಟ್ಟದ ರೈತ ಸಮಾವೇಶ



ಚಾಮರಾಜನಗರ, ವಿಶ್ವ ರೈತ ದಿನಾಚರಣೆ ಅಂಗವಾಗಿ ಡಿ.23 ರಂದು ಕಲಬುರಗಿಯಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ರಾಜ್ಯ ಮಟ್ಟದ ರೈತರ ಸಮಾವೇಶ ಆಯೋಜನೆ ಮಾಡಲಾಗಿದೆ ಎಂದು ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಮೂಕಳ್ಳಿ ಮಹದೇವಸ್ವಾಮಿ ತಿಳಿಸಿದರು.

ಕಲ್ಬುರ್ಗಿಯ ಡಾ. ಎಂ ಎಸ್ ಪಂಡಿತ್ ರಂಗಮಂದಿರಲ್ಲಿ ಬೆಳಗ್ಗೆ 11 ಗಂಟೆಗೆ ನಡೆಸಲಾಗುತ್ತಿದ್ದು, ರೈತರು ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಎಂದು ಸುದ್ದಿಗೋಷ್ಠಿಯಲ್ಲಿ ಮನವಿ ಮಾಡಿದರು. ಸಮಾವೇಶ ರೈತರ ಬಗ್ಗೆ ಕಾಳಜಿ ಉಳ್ಳ ಪ್ರಗತಿಪರ ಚಿಂತಕರು ರೈತ ಸಂಘಟನೆಯ ಮುಖಂಡರುಗಳು ಸೇರಿ ರೈತರ ಸಮಸ್ಯೆಗಳನ್ನು ಚರ್ಚಿಸಿ ಸರ್ಕಾರಗಳ ಗಮನ ಸೆಳೆದು ಸಮಸ್ಯೆಗಳ ಒತ್ತಾಯ ಪತ್ರ ಸಲ್ಲಿಸಲಾಗುವುದು. ರೈತರ ಸಮಸ್ಯೆಗಳಾದ ಉತ್ತರ ಕರ್ನಾಟಕ ಕಲ್ಯಾಣ ಕರ್ನಾಟಕ ಭಾಗದ ಅತಿವೃಷ್ಟಿ ಮಳೆ ಹಾನಿ ಬೆಳೆ ನಷ್ಟ ಪರಿಹಾರ ಎಕ್ಕರೆಗೆ 25000 ನೀರಾವರಿ ಬೆಳೆ ನಾಶ ಎಕರೆಗೆ 40,000 ತೋಟಗಾರಿಕೆ 60,000 ಪರಿಹಾರ ಕೂಡಲೇ ಬಿಡುಗಡೆ ಮಾಡಬೇಕು. ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ, ಕಾನೂನು ಜಾರಿಯಾಗಬೇಕು ಎಂದು ಒತ್ತಾಯ ಮಾಡುತ್ತೇವೆ ಎಂದು ಹೇಳಿದರು.

ರೈತರ ಕೃಷಿ ಸಾಲ ಸಂಪೂರ್ಣ ಮನ್ನಾ ಆಗಬೇಕು. ಕೃಷಿ ಸಾಲ ನೀತಿ ಬದಲಾಗಲಿ ಭೂಮಿ ಮೌಲಕ್ಕೆ ಅನುಗುಣವಾಗಿ ಸಾಲ ನೀಡುವಂಥಾಗಲಿ ಕೃಷಿ ಸಾಲಕ್ಕೆ ಸಿಬಿಲ್ ಸ್ಕೋರ್ ಕೃಷಿ ಭೂಮಿ ಮುಟ್ಟುಗೋಲು ಕಾಯ್ದೆ ರದ್ದಾಗಬೇಕು. ಮಹಿಳಾ ಸಂಘಗಳಿಗೆ ಸಾಲ ನೀಡುವ ಮೈಕ್ರೋ ಫೈನಾನ್ಸ್ ಕಿರುಕುಳ ನಿಲ್ಲಿಸಲು ಕಠಿಣ ಕಾನೂನು ಜಾರಿಯಾಗಬೇಕು.

ನಕಲಿ ಬಿತ್ತನೆ ಬೀಜ ನಕಲಿ ರಸಗೊಬ್ಬರ ಕೀಟನಾಶಕ ಮಾರಾಟ ಮಾಡುವ ಅಂಗಡಿಗಳ ಮಾಲೀಕರ ವಿರುದ್ಧ ಕಠಿಣ ಜೈಲು ಶಿಕ್ಷೆ ವಿಧಿಸುವ ಕಾನೂನು ಜಾರಿಗೆ ಬರಬೇಕು ಆಗ್ರಹಿಸಿದರು.

ರೈತರ ಹಬ್ಬದ ದಿನ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಗಮನ ಸೆಳೆಯಲು ನಿರ್ಣಯ ಕೈಗೊಳ್ಳಲಾಗುತ್ತದೆ ಈ ಒಂದು ಕಾರ್ಯಕ್ರಮಕ್ಕೆ ಚಾಮರಾಜನಗರ ಜಿಲ್ಲೆಯ ರೈತರು ರೈತ ಸಂಘಟನೆಯ ಮುಖಂಡರುಗಳು ಸ್ವಾಭಿಮಾನಿಗಳಾಗಿ ಸ್ವಯಂ ಪ್ರೇರಿತರಾಗಿ ರೈತರ ಹಬ್ಬ ಆಚರಿಸಲು ಕಲ್ಬುರ್ಗಿಗೆ ಬನ್ನಿ ರೈತರ ಕೂಗು ಸರ್ಕಾರಕ್ಕೆ ಮುಟ್ಟಬೇಕು ಎಂದು ಹೇಳಿದರು. ಗೋಷ್ಠಿಯಲ್ಲಿ ಜಿಲ್ಲಾ ಉಪಾಧ್ಯಕ್ಷ ಪಟೇಲ್ ಶಿವಮೂರ್ತಿ, ಜಿಲ್ಲಾ ಕಾರ್ಯಧ್ಯಕ್ಷ ರೇವಣ್ಣ, ತಾಲೂಕುಅಧ್ಯಕ್ಷ ಸತೀಶ್, ತಾಲೂಕು ಕಾರ್ಯದರ್ಶಿ ಉಡಿಗಾಲ ಸುಂದ್ರಪ್ಪ, ರೈತ ಮುಖಂಡ ಶಿವಕುಮಾರ ಹಾಜರಿದ್ದರು.

# ನೂಪುರಶ್ರೀ ಪ್ರಶಸ್ತಿ ಪ್ರದಾನ



ಮೈಸೂರು: ನಾಟ್ಯಾಚಾರ್ಯ ಪ್ರೊ.ಕೆ. ರಾಮಮೂರ್ತಿ ರಾವ್ ಅವರ ನೂಪುರ ಕಲಾವಿದರು ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಕುವೆಂಪುನಗರದ ಗಾನಭಾರತೀ ಸಭಾಗಂಣದಲ್ಲಿ ಏರ್ಪಡಿಸಿದ್ದ ಕೆ.ವನಜಾಕ್ಷಮ್ಮ ಸಂಸ್ಮರಣ 30ನೇ ನೃತ್ಯ ಆರಾಧನಾ ಕಾರ್ಯಕ್ರಮದಲ್ಲಿ ವಿದುಷಿ ಡಾ.ವಸುಂಧರಾ ದೊರೆಸ್ವಾಮಿರಿಗೆ ನೂಪುರಶ್ರೀ ಪ್ರಶಸ್ತಿ ಪ್ರದಾನ ಮಾಡಲಾಯಿತು.

ನಂತರ ವಸುಂಧರಾ ದೊರೆಸ್ವಾಮಿ ಮಾತನಾಡಿ, ಮೈಸೂರಿನ ಸಾಕಷ್ಟು ನೃತ್ಯ ಕಲಾವಿದರು ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಸದಾ ಸಂಗೀತ- ನೃತ್ಯ ಕಾರ್ಯಕ್ರಮಗಳಿಗೆ ಪ್ರೋತ್ಸಾಹ ಸಿಗುತ್ತಿದೆ. ಅಧ್ಯಕ್ಷತೆ ವಹಿಸಿದ್ದ ವಿಜಯವಿಠಲ ವಿದ್ಯಾಸಂಸ್ಥೆ ಕಾರ್ಯದರ್ಶಿ ಆರ್. ವಾಸುದೇವ ಭಟ್ ಮಾತನಾಡಿ, ಡಾ. ವಸುಂಧರಾ ದೊರೆಸ್ವಾಮಿ ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಭರತನಾಟ್ಯಕ್ಕೆ ಹೆಸರು ತಂದುಕೊಟ್ಟಿದ್ದಾರೆ ಎಂದು ಶ್ಲಾಘಿಸಿದರು.

ನೂಪುರ ಕಲಾವಿದರು ಟ್ರಸ್ಟ್ ವ್ಯವಸ್ಥಾಪಕ ಟ್ರಸ್ಟಿ ಕೆ.ರಾಮಮೂರ್ತಿ ರಾವ್ ಮಾತನಾಡಿ, ಕಳೆದ ಆರು ದಶಕಗಳಿಂದಲೂ ನೃತ್ಯ ಕ್ಷೇತ್ರದಲ್ಲಿ ತೊಡಗಿಸಿಕೊಂಡು ಸಾವಿರಾರು ಶಿಷ್ಯರನ್ನು ತಯಾರಿ ಮಾಡಿರುವ ಡಾ. ವಸುಂಧರಾ ದೊರೆಸ್ವಾಮಿ ಅವರಿಗೆ ಮುಂದಿನ ಗಣರಾಜ್ಯೋತ್ಸವ ದಿನಾಚರಣೆ ಸಂದರ್ಭದಲ್ಲಿ ಪದ್ಮಶ್ರೀ ಪ್ರಶಸ್ತಿ ದೊರೆಯಲಿ ಎಂದು ಆಶಿಸಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಪತ್ರಕರ್ತ ಅಂಶಿಪ್ರಸನ್ನ ಕುಮಾರ್ ರನ್ನು ಸನ್ಮಾನಿಸಲಾಯಿತು. ಟ್ರಸ್ಟಿನ ಲತಾ ರಾಮಮೂರ್ತಿ ರಾವ್, ಭುವನೇಶ್ವರಿ, ಕೆ.ಆರ್.ವಿಶ್ವದೀಪ್ ಇದ್ದರು.

## ಧರ್ಮ, ಸಂಸ್ಕೃತಿಯಲ್ಲಿನ ಏಕತೆಯೇ ನಮ್ಮ ಭಾಷಾ ಸೌಂದರ್ಯ: ಸುಂದರಂ



ಮೈಸೂರು: ನೂರಾರು ಭಾಷೆಗಳ ವೈವಿಧ್ಯತೆಯಿದ್ದರೂ ಧರ್ಮ ಹಾಗೂ ಸಂಸ್ಕೃತಿ ವಿಚಾರದಲ್ಲಿ ಏಕತೆಯನ್ನು ಹೊಂದಿರುವುದೇ ಭಾರತೀಯ ಭಾಷಾ ಸೌಂದರ್ಯವನ್ನು ತೋರ್ಪಡಿಸುತ್ತದೆ ಎಂದು ಮೈವಿವಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ವಿಶ್ರಾಂತ ನಿರ್ದೇಶಕ ಪ್ರೊ. ಆರ್.ವಿ.ಎಸ್.ಸುಂದರಂ ಅಭಿಪ್ರಾಯಪಟ್ಟರು.

ನಗರದ ಮಾನಸಗಂಗೋತ್ರಿ ಆವರಣದಲ್ಲಿರುವ ಭಾರತೀಯ ಭಾಷಾ ಸಂಸ್ಥಾನಲ್ಲಿ ಗುರುವಾರ ಏರ್ಪಡಿಸಿದ್ದ "ಭಾರತೀಯ ಭಾಷಾ ಉತ್ಸವ" ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು. ಪ್ರಪಂಚದ ಬೇರೆ-ಬೇರೆ ದೇಶಗಳನ್ನು ನೋಡಿದರೆ ಅಲ್ಲಿ ಒಂದೇ ರೀತಿಯ ಭಾಷೆ, ಆಚಾರ-ವಿಚಾರಗಳು ಇರುತ್ತವೆ. ಅಲ್ಪ-ಸ್ವಲ್ಪ ಬದಲಾವಣೆಗಳು ಇರುತ್ತವೆ. ಫ್ಲೋರಿಡಾದಲ್ಲಿ ನೂರಾರು ಕಿಲೋಮೀಟರ್ ಸುತ್ತಿದರೂ ಒಂದೇ ನಮೂನೆಯ ಭಾಷೆ ಮಾತನಾಡುವವರು ಸಿಗುತ್ತಾರೆ. ಜರ್ಮನಿಯಲ್ಲಿ ಅವರ ಭಾಷೆಯವರೇ ಹೆಚ್ಚು ಇರುತ್ತಾರೆ. ಆದರೆ ಭಾರತದಲ್ಲಿ ಅಂತಹ ವಾತಾವರಣ ಕಾಣುವುದಿಲ್ಲ. ಇಲ್ಲಿ ಕನ್ಯಾಕುಮಾರಿಯಲ್ಲಿ ರೈಲನ್ನು ಹತ್ತಿ ಕಾಶ್ಮೀರದ ಕಡೆಗೆ ಪ್ರಯಾಣ ಶುರು ಮಾಡಿದರೇ, ನಿಲ್ದಾಣಕ್ಕೊಂದು ಭಾಷೆ ಬದಲಾವಣೆಯಾಗುತ್ತದೆ. ಆಹಾರ ಪದ್ಧತಿಯೂ ಅದೇ ರೀತಿ ಬದಲಾವಣೆಯಾಗುತ್ತದೆ. ಒಂದು ನಿಲ್ದಾಣದಲ್ಲಿ ಇಡ್ಲಿ ಕೊಟ್ಟರೆ, ಮತ್ತೊಂದು ನಿಲ್ದಾಣದಲ್ಲಿ ಉಪ್ಪಿಟ್ಟು, ಚಪಾತಿ, ಪೊಂಗಲ್ ಹೀಗೆ ವಿವಿಧ ಖಾದ್ಯಗಳು ಸಿಗುತ್ತವೆ. ಅಲ್ಲದೇ ಸಿಹಿ ಪದಾರ್ಥಗಳಲ್ಲೂ ವೈವಿಧ್ಯತೆ, ಧರಿಸುವ ಬಟ್ಟೆಗಳಲ್ಲೂ ಭಿನ್ನತೆ, ಜೊತೆಗೆ ಮಾತನಾಡುವ ಭಾಷೆಗಳು ಬೇರೆ-ಬೇರೆಯಾಗಿರುತ್ತವೆ. ಇಷ್ಟೆಲ್ಲ ವೈವಿಧ್ಯತೆ ಇದ್ದರೂ ದೇಶ, ಸಂಸ್ಕೃತಿ, ಧರ್ಮದಲ್ಲಿ ಐಕ್ಯತೆಯನ್ನು ಕಾಣುತ್ತವೆ ಎಂದರು. ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಸಿಐಐಎಲ್‌ನ ಉಪ ನಿರ್ದೇಶಕ ಪ್ರೊ.ಪಿ.ಆರ್.ಧರ್ಮೇಶ್ ಫರ್ನಾಂಡಿಸ್, ಭಾರತದ ವಿಶಾಲ ಮತ್ತು ಸಮೃದ್ಧ ಭಾಷಾ ಪರಂಪರೆಯನ್ನು ಗೌರವಿಸುವ ಸಲುವಾಗಿ ಭಾರತೀಯ ಭಾಷಾ ಉತ್ಸವ ಆಯೋಜನೆ ಮಾಡಲಾಗಿದೆ. ಭಾರತದ ಸ್ಫೂರ್ತಿದಾಯಕ ರಾಷ್ಟ್ರೀಯವಾದಿ ಕವಿ ಮತ್ತು ಸಾಮಾಜಿಕ ದಾರ್ಶನಿಕರಲ್ಲಿ ಒಬ್ಬರಾದ ಸುಬ್ರಹ್ಮಣ್ಯ ಭಾರತೀ ಅವರ ಜನ್ಮ ದಿನದ ಸ್ಮರಣಾರ್ಥ ಆಚರಣೆ ಮಾಡುವ ಈ ಉತ್ಸವ ಏಕತೆ, ಸಾಂಸ್ಕೃತಿಕ ಸಾಮರಸ್ಯ ಮತ್ತು ಭಾಷಾ ಅಭಿಮಾನದ ದ್ಯೋತಕವಾಗಿದೆ ಎಂದರು. ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಸಿ.ನಾಗಣ್ಣ "ಭಾಷೆ, ರಾಷ್ಟ್ರೀಯತೆ ಮತ್ತು ಸಂಸ್ಕೃತಿ" ಕುರಿತು ವಿಶೇಷ ಉಪನ್ಯಾಸ ನೀಡಿದರು. ಸಿಐಐಎಲ್ ನಿರ್ದೇಶಕ ಪ್ರೊ.ಶೈಲೇಂದ್ರ ಮೋಹನ್ ಅಧ್ಯಕ್ಷತೆ ವಹಿಸಿದ್ದರು.ಡಾ.ಎಲ್.ಆರ್. ಪ್ರೇಮಕುಮಾರ್ ವೇದಿಕೆಯಲ್ಲಿ ಇದ್ದರು.

## ಜೂಜಾಟ ಆಡುತ್ತಿದ್ದವರ ಮೇಲೆ ದಾಳಿ: ಆರೋಪಿತರ ಬಂಧನ

ಚಾಮರಾಜನಗರ: ತಾಲ್ಲೂಕಿನ ಉಮ್ಮತ್ತೂರು ಗ್ರಾಮದ ಸಾರ್ವಜನಿಕರ ಸ್ಥಳದಲ್ಲಿ ಜೂಜಾಟ ಆಡುತ್ತಿದ್ದವರ ಮೇಲೆ ದಾಳಿ ನಡೆಸಿ ಆರೋಪಿ ಮತ್ತು ನಗದನ್ನು ವಶಪಡಿಸಿಕೊಳ್ಳಲಾಗಿದೆ.

ಗ್ರಾಮದ ಸಾರ್ವಜನಿಕರ ಸ್ಥಳದಲ್ಲಿ ಇಸ್ಪೀಟ್ ಜೂಜಾಟ ಆಡುತ್ತಿದ್ದ ಖಚಿತ ಮಾಹಿತಿಯ ಮೇರೆಗೆ ಕುದೇರು ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕಿ ಕುಮುದ ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಉಮ್ಮತ್ತೂರು ಗ್ರಾಮದ ಕುಮಾರ, ನಾಗೇಂದ್ರ, ಶಿವಣ್ಣ, ಸಿದ್ದರಾಜು, ಶಿವಣ್ಣ ಈ ಐವರು ಆರೋಪಿಗಳನ್ನು ಹಾಗೂ ಸ್ಥಳದಲ್ಲಿದ್ದ 5140 ರೂಗಳನ್ನು ವಶಕ್ಕೆ ಪಡೆಯಲಾಗಿದೆ. ಈ ಸಂಬಂಧ ಕುದೇರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಕ್ಕುಗಳಿಗೆ ಧಕ್ಕೆಯಾದಾಗ ಮಾನವ ಹಕ್ಕುಗಳು ನೆರವಿಗೆ

## ನ್ಯಾ.ಎಂ.ಎಚ್.ಅಣ್ಣಯ್ಯ | ಮಾನವ ಹಕ್ಕುಗಳ ದಿನಾಚರಣೆ-2025



ರಾಮನಗರ: ಜಾತಿ, ಲಿಂಗ ಬೇಧವಿಲ್ಲದೆ ಸಮಾಜದಲ್ಲಿ ಎಲ್ಲರೂ ಸಮಾನರಾಗಿ ಬದುಕಲು ಮಾನವ ಹಕ್ಕುಗಳು ಆಸರೆಯಾಗುತ್ತದೆ ಎಂದು ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ.ಅಣ್ಣಯ್ಯನವರ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ವಕೀಲರ ಸಂಘ, ಬಸವನಪುರದ ಸರ್ಕಾರಿ ಕಾನೂನು ಕಾಲೇಜು, ಎಂ.ಎಚ್. ಕಾನೂನು ಕಾಲೇಜು ಹಾಗೂ ಜಿಲ್ಲೆಯ ಎಲ್ಲಾ ಸ್ವಯಂ-ಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಮಾನವ ಹಕ್ಕುಗಳ ದಿನಾಚರಣೆ-2025 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬದುಕುವ ಹಕ್ಕು ಮತ್ತು ಸಮಾನತೆ ಹಕ್ಕಿಗೆ ಧಕ್ಕೆಯುಂಟಾದಾಗ ಮಾನವ ಹಕ್ಕುಗಳ ಮೂಲಕ ಸಮಾನತೆ ಸಾಧಿಸಬಹುದಾಗಿದೆ. ಬಡವ ಮತ್ತು ಶ್ರೀಮಂತರ ಮಧ್ಯ ಘರ್ಷಣೆಯಾಗಿ ಬಡವನು ತನ್ನ ಹಕ್ಕು, ಬಾಧ್ಯತೆಗಳಿಗೋಸ್ಕರ ಬದುಕುವುದಕ್ಕೆ ಮಾನವ ಹಕ್ಕುಗಳ ಕಾನೂನು ನೆರವಿಗೆ ಬರುತ್ತವೆ. ಒಬ್ಬರು ಇನ್ನೊಬ್ಬರ ಮನಸ್ಸಿಗೆ ನೋವಾಗುವಂತೆ ಮಾತನಾಡುವುದು ಮಾನವ ಹಕ್ಕು ಉಲ್ಲಂಘನೆ ಆಗುತ್ತದೆ. ಜೀವನದಲ್ಲಿ ತಪ್ಪು ಮಾಡುವುದು ಸಹಜ. ಆದರೆ ಆ ತಪ್ಪನ್ನು ತಿದ್ದಿಕೊಂಡು ನಡೆಯುವುದು ಮನುಷ್ಯನ ಧರ್ಮ. ಮಾನವನಲ್ಲಿ ನಾನು ಎಂಬ ಅಹಂ ಹೋದರೆ ಎವರೆಸ್ಟ್ ಶಿಖರ ಏರಿದಂತೆ, ಇದರಿಂದ ಉತ್ತಮ ಮಾನವ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಅಜ್ಞಾನ ಇಲ್ಲದಂತೆ ವರ್ತಿಸುವ ವ್ಯಕ್ತಿಯೇ ಮಾನವ. ಜಗತ್ತಿನಲ್ಲಿ ಎರಡು ಮಹಾ ಯುದ್ಧದಿಂದ ಬಡವ ಶ್ರೀಮಂತ ಎನ್ನದೆ ಲಕ್ಷಾಂತರ ಜನರು ಸಾವಿಗೀಡಾಗುತ್ತಾರೆ ಆ ಸಮಯದಲ್ಲಿ ಮಾನವರ ರಕ್ಷಣೆಗೆಂದು 1948 ಡಿಸೆಂಬರ್ 10 ರಂದು ಮಾನವ ಹಕ್ಕುಗಳು ಜಾರಿಗೆ ಬಂದವು. ಮಗುವು ತಾಯಿಯ ಒಡಲಿನಿಂದ ಹೊರ ಬಂದ ನಂತರ ಮಗುವಿಗೆ ಮಾನವ ಹಕ್ಕುಗಳು ಲಭಿಸ್ಮತ್ತದೆ, ವಸತಿ-ಉಡುಪು ಮತ್ತು ಆಹಾರ ಈ ಮೂರು ಮೂಲಭೂತ ಹಕ್ಕುಗಳನ್ನು ಪಡೆಯುವುದಕ್ಕೆ ಅಡಚಣೆಗಳು ಉಂಟಾದರೆ ಮಾನವ ಹಕ್ಕು ಉಲ್ಲಂಘನೆ ಆದಂತೆ, ಆ ಸಂದರ್ಭದಲ್ಲಿ ಆಸರೆಯಾಗಿ ನಿಲ್ಲುವುದು ಮಾನವ ಹಕ್ಕುಗಳ ಕಾನೂನು ಎಂದವರು ಹೇಳಿದರು.

ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿಗಳಾದ ತಿಮ್ಮೇಗೌಡ. ಟಿ ಅವರು ಮಾತನಾಡಿದರು, ಬಸವನಪುರ ಸರ್ಕಾರಿ ಕಾನೂನು ಕಾಲೇಜಿನ ಸಹ ಪ್ರಾಧ್ಯಾಪಕರಾದ ಸುಮಂತ್ ಎಚ್.ಎಂ ಅವರು ಉಪನ್ಯಾಸ ನೀಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ.ಆರ್. ಅವರು ಮಾನವ ಹಕ್ಕುಗಳ ದಿನಾಚರಣೆ-2025ರ ಪ್ರತಿಜ್ಞಾ ವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ದಿನೇಶ್ ಜೆ.ಆರ್ ಸ್ವಾಗತಿಸಿದರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಲಕ್ಷ್ಮೀದೇವಿ ಅವರು ವಂದಿಸಿದರು.

ಜಿಲ್ಲಾ ಪಂಚಾಯತ್‌ನ ಲೆಕ್ಕಾಧಿಕಾರಿಗಳಾದ ಮಂಜುಳ, ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ ಧನರಾಜ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಬಿ.ಎಂ. ಶ್ರೀವತ್ಸ, ಅಂಗನವಾಡಿ ಕಾರ್ಯಕರ್ತರು, ಸರ್ಕಾರಿ ಕಾನೂಜು ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹೆಚ್ಚುವರಿ ಭೋಜನ ಬಿಲ್ ನಿರಾಕರಣೆ ಸರಿಯಲ್ಲ: ಪರಮಾನಂದ

ಮೈಸೂರು: ಮೈಸೂರು ವಿವಿ ಅಧೀನದ ಕಾಲೇಜು ವಿದ್ಯಾರ್ಥಿ ನಿಲಯಗಳ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಹೆಚ್ಚುವರಿ ಭೋಜನ ವೆಚ್ಚದ ಬಿಲ್ ಗಳನ್ನು ಭರಿಸಲು ಅವಕಾಶವಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆ ಆಯುಕ್ತರು ಸುತ್ತೋಲೆ ಹೊರಡಿಸಿರುವುದು ಈ ಸಮುದಾಯಗಳ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ದೊಡ್ಡ ಹೊಡೆತ ನೀಡಲಿದೆ ಎಂದು ಭೀಮಬಲ ಬಳಗದ ಸಂಚಾಲಕ ಎಂ.ಎಸ್. ಪರಮಾನಂದ ಕಿಡಿಕಾರಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಅನ್ನ ಕಿತ್ತುಕೊಳ್ಳುವ ಕ್ರಮವಾಗಿದೆ. ಮಹತ್ವಾಕಾಂಕ್ಷೆಯಿಂದ ಓದಲು ಬರುವವರಿಗೆ ದೊಡ್ಡ ಸಮಸ್ಯೆಯುಂಟು ಮಾಡುತ್ತದೆ. ವಸತಿ ನಿಲಯಗಳು ಇರುವ ಕಾರಣಕ್ಕಾಗಿಯೇ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ತಮ್ಮ ಮನೆಯ ಬಡತನ ಮರೆತು ಇಲ್ಲಿ ಬಂದು ಓದಿ ವಿದ್ಯಾವಂತರಾಗುತ್ತಿದ್ದಾರೆ. ಈ ಮೂಲಕ ಉದ್ಯೋಗ ಪಡೆದು ಘನತೆಯ ಜೀವನ ನಡೆಸುತ್ತಿದ್ದಾರೆ. ಮೈಸೂರು ವಿವಿ ವ್ಯಾಪ್ತಿಗೆ ಇಂತಹ 14 ಹಾಸ್ಟೆಲ್ ಬರಲಿದ್ದು, ಈಗ ಇವರ ಅನ್ನ ಕಿತ್ತುಕೊಂಡು ಮೆಸ್ ಬಿಲ್ ಕಟ್ಟಬೇಕೆಂದು ತಾಕೀತು ಮಾಡಲಾಗುತ್ತಿದೆ ಎಂದು ಆರೋಪಿಸಿದರು. ಆದ್ದರಿಂದ ಸಮಾಜ ಕಲ್ಯಾಣ ಇಲಾಖೆ ಪ್ರಯೋಜನವಿಲ್ಲದ ತನ್ನ ಎಲ್ಲಾ ಕಲ್ಯಾಣ ಕಾರ್ಯಗಳನ್ನು ಬದಿಗಿಟ್ಟು, ತುರ್ತಾಗಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಅನ್ನ, ಆಹಾರ ಕೊಡುವ ಕೆಲಸಕ್ಕೆ ಮುಂದಾಗಬೇಕೆಂದು ಒತ್ತಾಯಿಸಿದರು. ಇಲ್ಲದಿದ್ದರೆ ವಿವಿ ಆವರಣದಲ್ಲಿ ದೊಡ್ಡ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಸಿದರು. ಗಣೇಶ್ಮೂರ್ತಿ, ಕಾರ್ತಿಕ್, ಮರಿಯಪ್ಪ, ಹೂವಿನ ಸಿದ್ದು ಇದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

## ಜ.3ಕ್ಕೆ ಯೋಗ ಕೋರ್ಸ್




ಮೈಸೂರು: ರಾಮಾನುಜ ರಸ್ತೆ ಅಕ್ಕಮ್ಮಣ್ಣಿ ಉದ್ಯಾನದಲ್ಲಿನ ಮೈಸುರು ಯೋಗೀಶ್ ಟ್ರಸ್ಟ್ ವತಿಯಿಂದ ಜ.3 ರಿಂದ ಸುಮಾರು 300 ಗಂಟೆ ಅವಧಿಯ ಯೋಗಾಭ್ಯಸ ನೂತನ ತರಗತಿ ಆಯೋಜಿಸಲಾಗಿದೆ ಎಂದು ಸಂಸ್ಥಾಪಕ ಯೋಗ ಪ್ರಕಾಶ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇದು ಬೆಂಗಳೂರಿನ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥಾನ ವಿವಿ ಪ್ರಮಾಣಪತ್ರ ಹೊಂದಿರುತ್ತದೆ. ನಿರುದ್ಯೋಗಿ ಯುವಕ, ಯುವತಿಯರು, ಕೆಲಸಕ್ಕೆ ಹೋಗುವ ಸಿಬ್ಬಂದಿಗೆ ಅನುಕೂಲಕಾರಿಯಾದುದಾಗಿದೆ. ಪ್ರತಿ ಶನಿವಾರ ಮತ್ತು ಭಾನುವಾರದಂದು ಈ ಕೋರ್ಸ್ ನಡೆಯಲಿದೆ. ಶುಲ್ಕ ಸುಮಾರು 20 ಸಾವಿರ ರೂ.ಗಳಾಗಿರಲಿದೆ. ಆಸಕ್ತರು ಹೆಚ್ಚಿನ ಮಾಹಿತಿಗೆ ದೂ.72590 27880 ಸಂಪರ್ಕಿಸಬಹುದೆಂದರು. ಸೀಮಾ, ಡಾ.ಮನು, ಬಿ.ವಿ.ಮಂಜುನಾಥ್, ಲಯನ್ ಸುರೇಶ್, ಡಾ.ಕಾವ್ಯ ಇದ್ದರು.

# ಕೆ.ಆರ್.ಬ್ಯಾಂಕಿನ ದಿನದರ್ಶಿಕೆ ಬಿಡುಗಡೆ



ಮೈಸೂರು: ನಗರದ ಅಗ್ರಹಾರದ ಕೃಷ್ಣ ರಾಜೇಂದ್ರ ಬ್ಯಾಂಕಿನ 2026ರ ದಿನದರ್ಶಿಕೆಯನ್ನು ಬಿಡುಗಡೆ ಬ್ಯಾಂಕಿನ ಅಧ್ಯಕ್ಷ ಬಸವರಾಜು ಬಸಪ್ಪ ಹಾಗೂ ಸಹಕಾರ ಇಲಾಖೆಯ ಉಪ ನಿಬಂಧಕ ವೀರೇಂದ್ರ ಬಿಡುಗಡೆಗೊಳಿಸಿದರು.

ಬಳಿಕ ಉಪ ನಿಬಂಧಕ ವೀರೇಂದ್ರ ಮಾತನಾಡಿ, ಗ್ರಾಹಕರಿಗೆ ಸೇವಾ ಸೌಲಭ್ಯ ಬ್ಯಾಂಕಿನ ಕಡೆಯಿಂದ ನಿರಂತರವಾಗಿ ತಲುಪಲಿ. 2026ನೇ ವರ್ಷ ಬ್ಯಾಂಕ್ ಯಶಸ್ವಿಯಾಗಿ ಮುಂದುವರಿಯಲಿ. ಇದಕ್ಕೆ ಬೇಕಾ ದಂತಹ ಸಹಕಾರವನ್ನು ಇಲಾಖೆ ಕೊಡಲಿದೆ ಎಂದರು.

ಬ್ಯಾಂಕಿನ ಅಧ್ಯಕ್ಷ ಬಸಪ್ಪ ಮಾತನಾಡಿ, ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನವೀಕೃತ ಕಟ್ಟಡವನ್ನು ಉದ್ಘಾಟಿಸಿದರು. ಮುಂದೆ ಬ್ಯಾಂಕಿನ ಅಭಿವೃದ್ಧಿಗೆ ನಮ್ಮ ಆಡಳಿತ ಮಂಡಳಿಯ ಎಲ್ಲರೂ ಸಹಕಾರವಿದೆ. ಮುಂದಿನ ದಿನಗಳಲ್ಲಿ ಹೊಸ ಹೊಸ ಶಾಖೆಗಳನ್ನು ತೆರೆಯುವ ಆಲೋಚನೆ ಇದೆ. ಬ್ಯಾಂಕಿನ ಸದಸ್ಯರು ಮುಂದಿನ ದಿನಗಳಲ್ಲಿ ಕ್ಯಾಲೆಂಡರ್ ವಿತರಣೆ ಮಾಡಲಾಗುವುದು ಎಂದು ತಿಳಿಸಿದರು. ನಿರ್ದೇಶಕರಾದ ನಂ.ಸಿದ್ದಪ್ಪ, ಹೆಚ್. ವಾಸು, ಪ್ರತಿಧ್ವನಿ ಪ್ರಸಾದ್, ನಾಗಜ್ಯೋತಿ, ಪಂಚಾಕ್ಷರಿ, ಗಣೇಶ ಮೂರ್ತಿ, ಶಿವಪ್ರಕಾಶ್, ಅಧಿಕಾರಿಗಳದ ಸಹಾಯಕ ನಿರೀಕ್ಷಕ ಕೆ.ರಾಜು ಕೆಆರ್ ಬ್ಯಾಂಕಿನ ಮ್ಯಾನೇಜರ್ ಅನಂತ ವೀರಪ್ಪ ಇತರರು ಇದ್ದರು.

## ಹವಾಮಾನ ಬದಲಾವಣೆಗೂ ನೀತಿ ರೂಪಿಸಲಿ: ಪೀಪಲ್ ಟ್ರೀ

ಮೈಸೂರು: ಹವಾಮಾನ ಬದಲಾವಣೆ ನಿಭಾಯಿಸುವ ನಿಟ್ಟಿನಲ್ಲಿ ಸರ್ಕಾರ ನೀತಿ ನಿಯಮ ರೂಪಿಸಬೇಕು. ಮಳೆ ಆಶ್ರಿತದಲ್ಲಿ ಸುಸ್ಥಿರ ಕೃಷಿ ಆಧಾರಿತ ಜೀವನೋಪಾಯ ಬಲಪಡಿಸಲು ಸಮುದಾಯ ಸಹಭಾಗಿತ್ವದಲ್ಲಿ ಹೊಂದಾಣಿಕೆ ಮತ್ತು ಕೃಷಿ ವಿಧಾನಗಳ ಕಾರ್ಯಕ್ರಮ ರೂಪಿಸಬೇಕೆಂದು ಎಚ್.ಡಿ.ಕೋಟೆ ಮೂಲದ ಪೀಪಲ್ ಟ್ರೀ ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಸಂಸ್ಥೆಯ ಸಂಶೋಧನಾ ಸಮನ್ವಯಕಾರ ಎಲ್.ಸಿ. ಚನ್ನರಾಜು ಮಾತನಾಡಿ, ಅರಣ್ಯದ ಹೊರಗೆ ವಾಸಿಸುತ್ತಿರುವ ಮತ್ತು ಪುನರ್ವಸತಿಗೊಂಡಿರುವ ಆದಿವಾಸಿ ಸಮುದಾಯದ ಕೃಷಿ ಭೂಮಿ ಅರಣ್ಯದ ಅಂಚಿನಲ್ಲಿದೆ. ಕೃಷಿ ಚಟುವಟಿಕೆ ಮಾಡಿದಲ್ಲಿ ವನ್ಯಜೀವಿಗಳ ಹಾವಳಿಯಿಂದ ಫಸಲು ಕೈಸೇರುತ್ತಿಲ್ಲ. ರೈಲ್ವೆ ಕಂಬಿ ಬೇಲಿ ಜೊತೆಗೆ ಮೆಸ್ ಅಳವಡಿಸಿ ಆದಿವಾಸಿ ಸಮುದಾಯದ ಬೆಳೆಗಳಿಗೆ ರಕ್ಷಣೆ ಕೊಡಬೇಕು. ವೈಜ್ಞಾನಿಕ ಮಾನದಂಡದ ಆಧಾರದ ಮೇಲೆ ಬೆಳೆ ಪರಿಹಾರ ನೀಡಬೇಕೆಂದು ಒತ್ತಾಯಿಸಿದರು. 2006 ರ ಅರಣ್ಯ ಹಕ್ಕು ಕಾಯ್ದೆ ಅಡಿಯಲ್ಲಿ ಅರಣ್ಯ ಅವಲಂಬಿತ ಆದಿವಾಸಿಗಳಿಗೆ ವೈಯಕ್ತಿಕ ಸಾಮುದಾಯಿಕ ಮತ್ತು ಕಿರು ಅರಣ್ಯ ಉತ್ಪನ್ನ ಸಂಗ್ರಹಣೆ ಮತ್ತು ಮಾರಾಟಕ್ಕೆ ಹಕ್ಕುಗಳಿವೆ. ಈ ಕಾಯ್ದೆ ಅನುಷ್ಠಾನಗೊಳ್ಳಬೇಕೆಂದರು. 2025ರ ಬೀಜ ಮಸೂದೆಯಲ್ಲಿ ಸಮುದಾಯ ಬೀಜ ವಲಯ ಮತ್ತು ಸಾರ್ವಜನಿಕ ಬೀಜ ವಲಯ ಭದ್ರಪಡಿಸಬೇಕೆಂದು ಸಹಾ ಕೋರಿದರು. ಭಾಗ್ಯಮ್ಮ, ಲಾವಣ್ಯ, ಡೇನಿಯಲ್, ವೆಂಕಟೇಶ್, ಪ್ರಕಾಶ್, ಟಿ.ಸಿ.ಸುರೇಶ್, ಜವರೇಗೌಡ ಇದ್ದರು.

## ಇಂದು ಪದ್ಮಗಂಧಿ ಚಿತ್ರ ಬಿಡುಗಡೆ

ಮೈಸೂರು: ನಟ ಸುಚೇಂದ್ರ ಪ್ರಸಾದ್ ನಿರ್ದೇಶನದ ಪದ್ಮಗಂಧಿ ಚಲನಚಿತ್ರವು ಡಿ.12ರಂದು ರಾಜ್ಯದಾದ್ಯಂತ ಬಿಡುಗಡೆಯಾಗಲಿದೆ ಎಂದು ಚಿತ್ರದ ನಟಿ ಪರಿಪೂರ್ಣ ಚಂದ್ರಶೇಖರ್ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಮಲದ ಹೂವಿನ ಬಗ್ಗೆ ಸಿನಿಮಾ ಕಥೆ ಇರುವುದು ವಿಶೇಷ. ಗುರು ಶಿಷ್ಯರ ಭಾಂದವ್ಯದ ಬಗ್ಗೆಯೂ ತಿಳಿಸುತ್ತದೆ. ನಾಲ್ಕು ಹಾಡುಗಳಿವೆ, ಬೆಂಗಳೂರು ಸುತ್ತ ಮುತ್ತ ಚಿತ್ರೀಕರಣ ನಡೆದಿದೆ. ಎಲ್ಲ ವಯೋಮಾನದವರು ನೋಡುವ ಉತ್ತಮ ಚಿತ್ರವಿದು ಎಂದರು. ಪ್ರೊ.ಎಸ್.ಆರ್.ಲೀಲಾ ಪರಿಕಲ್ಪನೆ ಹಾಗೂ ನಿರ್ಮಾಣದಲ್ಲಿ ಚಿತ್ರ ಮೂಡಿಬಂದಿದೆ. ಕನ್ನಡ, ಸಂಸ್ಕೃತ ಹಾಗೂ ಹಿಂದಿ ಭಾಷೆಯಲ್ಲಿ ತಯಾರಾಗಿದ್ದು, ಸಧ್ಯ ಕನ್ನಡದಲ್ಲಿ ಬಿಡುಗಡೆಯಾಗುತ್ತಿದೆ ಎಂದು ತಿಳಿಸಿದರು.

### ಹತ್ತಕ್ಕೂ ಹೆಚ್ಚು ಮಂದಿ ನೂತನ ಸದಸ್ಯರು ಸೇರ್ಪಡೆ

# ಜಯಕರ್ನಾಟಕ ಸಂಘಟನೆಗೆ ಸದಸ್ಯರ ಸೇರ್ಪಡೆ



ಕೊಳ್ಳೇಗಾಲ: ಜಯಕರ್ನಾಟಕ ಸಂಘಟನೆಯ ಕಾರ್ಯವೈಖರಿ ಮೆಚ್ಚಿ ಹತ್ತಕ್ಕೂ ಹೆಚ್ಚು ಮಂದಿ ನೂತನ ಸದಸ್ಯರು ಸೇರ್ಪಡೆಯಾಗಿದ್ದಾರೆ.

ಪಟ್ಟಣದ ಜಯಕರ್ನಾಟಕ ಸಂಘಟನೆಯ ಕಚೇರಿಯಲ್ಲಿ ಮಧುವನಹಳ್ಳಿ ಗ್ರಾಮದ ಮನು, ದಿಲೀಪ್, ತ್ರಿಲೋಕ, ವಿನೋದರಾಜು, ಸಚಿನ್, ಕುಮಾರ್, ಮಹದೇವಸ್ವಾಮಿ, ನವೀನ್, ವಸಂತ ಮತ್ತು ಪರಮೇಶ್ ರವರುಗಳಿಗೆ ಸಂಘಟನೆಯ ಜಿಲ್ಲಾಧ್ಯಕ್ಷರು ದೇವಿಕಾ ವರದರಾಜು ಶಲ್ಯ ಹಾಕುವ ಮೂಲಕ ಸ್ವಾಗತ ಮಾಡಿದರು.

ಜಿಲ್ಲಾಧ್ಯಕ್ಷರಾದ ದೇವಿಕಾ ವರದರಾಜು ಮಾತನಾಡಿ, ಯುವಕರ ಸೇರ್ಪಡೆ ಸಂಘಟನೆಯ ಬಲವರ್ಧನೆಗೆ ಸಹಾಯಕವಾಗಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳಿಂದ ಹೆಚ್ಚಿನ ಯುವಕರು ಜಯಕರ್ನಾಟಕ ಸಂಘಟನೆಯಲ್ಲಿ ಸೇರಿ, ಕನ್ನಡ ಭಾಷೆ, ನಾಡು-ನುಡಿ ಮತ್ತು ನೊಂದವರ ಸೇವೆಗೆ ಸದಾ ಕಂಕಣ ಬದ್ಧರಾಗಿರಬೇಕಾಗಿದೆ ಎಂದು ಹೇಳಿದರು.

ತಾಲ್ಲೂಕು ಅಧ್ಯಕ್ಷರಾದ ಪ್ರಭುಸ್ವಾಮಿ ಮಾತನಾಡಿ, ಸಂಘಟನೆಯ ಉದ್ದೇಶಗಳು ಸ್ಪಷ್ಟವಾಗಿದ್ದು, ಪ್ರತಿಯೊಬ್ಬ ಸದಸ್ಯರೂ ನಿರ್ದಿಷ್ಟ ಗುರಿಯೊಂದಿಗೆ ಒಗ್ಗಟ್ಟಿನಿಂದ ಕೆಲಸ ಮಾಡಿ, ಕನ್ನಡ ಭಾಷೆಯ ರಕ್ಷಣೆಗೆ ಸದಾ ತೊಡಗಿಸಿಕೊಳ್ಳಬೇಕ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಕೊಳ್ಳೇಗಾಲ ಟೌನ್ ಅಧ್ಯಕ್ಷರು ಸುರೇಶ್, ಟೌನ್ ಕಾರ್ಯದರ್ಶಿ ಕೃಷ್ಣರಾಜು, ಮಹಿಳಾ ಘಟಕ ಅಧ್ಯಕ್ಷರು ತುಳಸಿ, ಹನೂರು ತಾಲ್ಲೂಕು ಅಧ್ಯಕ್ಷರು ಪುಟ್ಟರಾಜು, ಯಳಂದೂರು ತಾಲ್ಲೂಕು ಅಧ್ಯಕ್ಷರು ಮಧುಸೂದನ್, ಮಧುವನಹಳ್ಳಿ ಗ್ರಾಮ ಘಟಕ ಅಧ್ಯಕ್ಷರು ಸತೀಶ್, ಕಾರ್ಯಧ್ಯಕ್ಷ ಮಣಿಕಂಠ, ಉಪಾಧ್ಯಕ್ಷರು ಗಣೇಶ್, ಖಜಾಂಚಿ ಮಹದೇವಸ್ವಾಮಿ, ಬಸವರಾಜು, ಚೇತನ್, ಮಹೇಂದ್ರ, ಸೈಯದ್ ನವೀದ್, ನಾಗೇಂದ್ರ ಇದ್ದರು.

# ಶಿವರಾತ್ರೀಶ್ವರ ಶಿವಯೋಗಿಗಳವರ 1066ನೇ ಜಯಂತಿ ಮಹೋತ್ಸವದ ಪೂರ್ವ ಸಿದ್ಧತೆಗಳನ್ನು ಪರಿಶೀಲಿಸಿದ ಡಿಸಿ





**ಮಳವಳ್ಳಿ:** 2025 ರ ಡಿಸೆಂಬರ್ 16ರಂದು ಮಳವಳ್ಳಿ ತಾಲ್ಲೂಕಿನಲ್ಲಿ ನಡೆಯಲಿರುವ ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ 1066ನೇ ಜಯಂತಿ ಮಹೋತ್ಸವ ಕಾರ್ಯಕ್ರಮಕ್ಕೆ ರಾಷ್ಟ್ರಪತಿಗಳು ಆಗಮಿಸಲಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಡಾ. ಕುಮಾರ ಗುರುವಾರ ಕಾರ್ಯಕ್ರಮದ ಪೂರ್ವಸಿದ್ಧತೆಗಳ ಕುರಿತು ಇಂದು ಮಳವಳ್ಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಾರೆಹಳ್ಳಿ ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಹೆಲಿಪ್ಯಾಡ್ ಪ್ರದೇಶವನ್ನು ಪರಿಶೀಲಿಸಿ ಮೂರು ಹೆಲಿಕಾಪ್ಟರ್ ಲ್ಯಾಂಡಿಂಗ್ ಗೆ ಸ್ಥಳಗಳನ್ನು ಸಿದ್ಧಪಡಿಸಲಾಗಿದ್ದು, ಕೂಡಲೇ ಲ್ಯಾಂಡಿಂಗ್ ಸ್ಥಳವನ್ನು ಗುರುತಿಸಲು ಸೂಚನೆ ನೀಡಿದರು. ಡಿಸೆಂಬರ್ 14, 2025 ರ ಭಾನುವಾರದಂದು ಕೇಂದ್ರದಿಂದ ಪರಿಶೀಲನಾ ತಂಡವು ಆಗಮಿಸಲಿರುವುದರಿಂದ ಗುರುತಿಸಿರುವ ಹೆಲಿಪ್ಯಾಡ್ ಅನ್ನು ಸಮತಟ್ಟಾಗಿಸಿ, ನಿಯಮಾನುಸಾರ ಅಂತರ ಕಾಯ್ದುಕೊಳ್ಳುವುದು ಮತ್ತು ಧೂಳು ರಹಿತ ವ್ಯವಸ್ಥೆ ಕಲ್ಪಿಸಿ, ಗ್ರೀನ್ ರೂಂ ನಿರ್ಮಾಣದ ಕುರಿತು ಪರಿಶೀಲನಾ ತಂಡದ ಅಭಿಪ್ರಾಯದ ಮೇರೆಗೆ ಅಂತಿಮವಾಗಿ ನಿರ್ಧಾರ ಕೈಗೊಳ್ಳಿ ಎಂದು ಹೇಳಿದರು.

ಮಾರ್ಗಸೂಚಿಯ ನಿಯಮಾವಳಿಗಳಂತೆ ಹೈಸ್ಪೀಡ್ ಇಂಟರ್ನೆಟ್ ಮತ್ತು ದೂರವಾಣಿ ಸಂಪರ್ಕ ಕಲ್ಪಿಸಿ, ರಾಷ್ಟ್ರಪತಿ ಪ್ರೋಟೋಕಾಲ್ ಅನುಸಾರ ವೇದಿಕೆ, ಕುಳಿತುಕೊಳ್ಳುವ ಆಸನ ಹಾಗೂ ಜಾಗದ ವ್ಯವಸ್ಥೆಯನ್ನು ಮಾಡಿ, ವೇದಿಕೆಯ ಬಳಿಯೇ ತುರ್ತು ವೈದ್ಯಕೀಯ ತಂಡ ಇರುವಂತೆ ಸಮರ್ಪಕವಾಗಿ ಸಿದ್ಧಗೊಳಿಸಿ, ರಾಷ್ಟ್ರಪತಿಗಳು ಹಾಗೂ ಭದ್ರತಾ ಸಿಬ್ಬಂದಿಗಳ ವಾಹನ ನಿಲುಗಡೆ ಪ್ರದೇಶವನ್ನು ಪರಿಶೀಲಿಸಿ, ಯಾವುದೇ ಸರ್ಕಾರಿ,ಖಾಸಗಿ ವಾಹನಗಳು ಸದರಿ ಪ್ರದೇಶದಲ್ಲಿ ನಿಲ್ಲದಂತೆ ಕ್ರಮ ಕೈಗೊಳ್ಳಿ ಎಂದು ಹೇಳಿದರು

ರಾಷ್ಟ್ರಪತಿಗಳು ಆಗಮಿಸುವ ಮಾರ್ಗ ಮತ್ತು ವಾಹನ ನಿಲುಗಡೆ ಜಾಗಗಳನ್ನು ಪರಿಶೀಲಿಸಿ, ಯಾವುದೇ ನಿಯಮಗಳು ಉಲ್ಲಂಘನೆಯಾಗದಂತೆ ಕ್ರಮ ವಹಿಸಿ, ಗಣ್ಯರಿಗೆ, ದೃಶ್ಯ ಹಾಗೂ ಪತ್ರಿಕಾ ಮಾಧ್ಯಮ ಪ್ರತಿನಿಧಿಗಳಿಗೆ ಮತ್ತು ಸಾರ್ವಜನಿಕರಿಗೆ ಸಿದ್ಧಪಡಿಸಿರುವ ಯೋಜನೆಯ ಪ್ರಕಾರ ಪ್ರತ್ಯೇಕವಾಗಿ ಆಸನ ವ್ಯವಸ್ಥೆ ಕಲ್ಪಿಸಿ, ವಸ್ತು ಪ್ರದರ್ಶನ ಮತ್ತು ಊಟ ವಿತರಣಾ ಸ್ಥಳಗಳನ್ನು ಪರಿಶೀಲಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳಿ ಎಂದು ಹೇಳಿದರು.

ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಸುಸಜ್ಜಿತವಾಗಿ ಸಾರ್ವಜನಿಕರು ಕುಳಿತುಕೊಳ್ಳುವ ಸ್ಥಳ ಹಾಗೂ ಇನ್ನಿತರೆ ಸೌಲಭ್ಯಗಳ ಸಿದ್ಧ ಪಡಿಸಿ, ರಾಷ್ಟ್ರಪತಿಗಳ ಭೇಟಿ ನೀಡಿದ ಸಂದರ್ಭದಲ್ಲಿ ಗೌರವ, ಭದ್ರತೆಯಿಂದ ಕೂಡಿರಬೇಕು ಮತ್ತು ಪ್ರೋಟೋಕಾಲ್ ಕಾಪಾಡುವ ದೃಷ್ಟಿಯಿಂದ ಎಲ್ಲಾ ಇಲಾಖೆ ಅಧಿಕಾರಿಗಳು ಸಮಯ ಪಾಲನೆ ಮಾಡಿ ದೋಷರಹಿತವಾಗಿ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ನೆರವೇರಿಸಬೇಕು ಎಂದು ಹೇಳಿದರು.

ಸದರಿ ಸ್ಥಳಕ್ಕೆ ಆಗಮಿಸಿದ ಧಾರ್ಮಿಕ ನಾಯಕರಿಗೆ ಜಿಲ್ಲಾಧಿಕಾರಿಗಳು ಕಾರ್ಯಕ್ರಮದ ರೂಪರೇಷೆ ಮತ್ತು ಕೈಗೊಂಡಿರುವ ವ್ಯವಸ್ಥೆ ಸಿದ್ಧತೆಗಳ ಕುರಿತು ವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಡಾ ಕೆ.ಅನ್ನದಾನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ,ಉಪ ವಿಭಾಗಾಧಿಕಾರಿ ಶಿವಮೂರ್ತಿ, ಡಿವೈಎಸ್ಪಿ ಯಶವಂತ್ ಕುಮಾರ್,ಪುರಸಭೆ ಮುಖ್ಯಾಧಿಕಾರಿ ನಾಗರತ್ನ,ಲೋಕೋಪಯೋಗಿ ಇಲಾಖೆಯ ಇಂಜಿನಿಯರ್ ಸೋಮಶೇಖರ್,ವೃತ್ತ ನಿರೀಕ್ಷಕರಾದ ಶ್ರೀಧರ್,ಬಸವರಾಜು,ಜಯಂತಿ ಮಹೋತ್ಸವದ ವಿವಿಧ ಸಮಿತಿಗಳ ಪದಾಧಿಕಾರಿಗಳು,ಜೆ.ಎಸ್.ಎಸ್.ವಿದ್ಯಾಪೀಠದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹುಟ್ಟಿನಿಂದಲೇ ಬರುವ ಖಾಯಿಲೆಗಳಿಗೆ ಸೂಕ್ತ ಚಿಕಿತ್ಸೆ ನೀಡಿ: ಜಿ.ಪಂ. ಸಿಇಓ

**ಮಂಡ್ಯ:** ಅನುವಂಶಿಕ ಅಥವಾ ಹುಟ್ಟಿನಿಂದಲೇ ಬರುವ ಕಾಯಿಲೆಗಳನ್ನು ಪ್ರಾಥಮಿಕ ಹಂತದಲ್ಲಿಯೇ ಗುರುತಿಸಿ ಚಿಕಿತ್ಸೆ ನೀಡಲು ಅಗತ್ಯ ಕ್ರಮವಹಿಸುವಂತೆ ಆರ್ ಬಿ ಎಸ್ ಕೆ ಕಾರ್ಯಕ್ರಮದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಮಂಡ್ಯ ಜಿ.ಪಂ. ಸಿಇಓ. ನಂದಿನಿ ಕೆ.ಆರ್. ಸೂಚಿಸಿದರು.

ಬುಧವಾರ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿದ ಅವರು, 0–5 ಮತ್ತು 6–18 ವಯೋಮಾನದ ಮಕ್ಕಳನ್ನು ಕಾಲ ಕಾಲಕ್ಕೆ ತಪಾಸಣೆಗೊಳಪಡಿಸಿ ಯಾವುದಾದರೂ ಕಾಯಿಲೆಗಳು ಇವೆಯೇ ಎಂಬ ಬಗ್ಗೆ ಖಚಿತಪಡಿಸಿಕೊಂಡು ಕಾಯಿಲೆಗೆ ಅನುಗುಣವಾಗಿ ಚಿಕಿತ್ಸೆ ನೀಡಬೇಕೆಂದು ಸೂಚಿಸಿದರು.

ಜಿಲ್ಲಾ ಇ ಐ ಸಿ ಕೇಂದ್ರಕ್ಕೆ ಭೇಟಿ ನೀಡಿರುವ ಮಕ್ಕಳ ಪೋಷಕರೊಂದಿಗೆ ಸಂವಾದ ನಡೆಸಿ, ಸೂಕ್ತ ಚಿಕಿತ್ಸೆ ನೀಡುತ್ತಿರುವ ಬಗ್ಗೆ ಹಾಗೂ ಕೇಂದ್ರದಲ್ಲಿ ದೊರೆಯುತ್ತಿರುವ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದರು.

ತೀವ್ರತರವಾದ ಖಾಯಿಲೆಗಳಿಂದ ಬಳಲುತ್ತಿರುವ ರೋಗಿಗಳನ್ನು ಒಳರೋಗಿಯಾಗಿ ದಾಖಲಿಸಿಕೊಂಡು ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ ಹಾಗೂ ಡಿಸ್ಚಾರ್ಜ್ ನಂತರವೂ ನಿರಂತರ ಅನುಸರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ನೇತ್ರ ಸಹಾಯಕರು ರಾಜೀನಾಮೆ ನೀಡಿದ್ದು, ನೋಟೀಸ್ ಅವಧಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಅವರ ನೋಟೀಸ್ ಅವಧಿ ಪೂರ್ಣಗೊಳ್ಳುವ ಮುನ್ನವೇ ಹೊಸ ನೇತ್ರ ಸಹಾಯಕರನ್ನು ನೇಮಕ ಮಾಡಿಕೊಳ್ಳಲು ಪ್ರಕಟಣೆ ಹೊರಡಿಸಲು ಸೂಚಿಸಿದರು.

ಪಿಸಿಯೋ ಥೆರಪಿ ವಿಭಾಗದಲ್ಲಿ ಅಧಿಕ ಕಾರ್ಯಭಾರ ಇರುವುದರಿಂದ ಕುಷ್ಠರೋಗ ನಿರ್ಮೂಲನಾ ವಿಭಾಗದಲ್ಲಿನ ಪಿಸಿಯೋ ಥೆರಪಿ ಸಹಾಯಕರನ್ನು ಹೆಚ್ಚುವರಿಯಾಗಿ ಡಿ ಇ ಐ ಸಿ ವಿಭಾಗಕ್ಕೆ ನಿಯೋಜಿಸುವಂತೆ ಸೂಚಿಸಿದರು.

ಶ್ರವಣ ದೋಷ ಪತ್ತೆ ಹಚ್ಚಲು ಬೆರಾ ತಂತ್ರಜ್ಞಾನ ಹೊಂದಿರುವ ಯಂತ್ರೋಪಕರಣವನ್ನು ಖರೀದಿಸುವ ಸಂಬಂಧ ಜಿಲ್ಲಾ ಅಂಗವಿಕಲ ಕಲ್ಯಾಣ ಇಲಾಖೆಯ ಅಧಿಕಾರಿಯವರೊಂದಿಗೆ ಚರ್ಚಿಸಿ ಸರಬರಾಜು ಮಾಡಿಸಿಕೊಳ್ಳಲು ತಿಳಿಸಿದರು. ಕಳೆದ ಸಾಲಿನಲ್ಲಿ ಸದರಿ ಯಂತ್ರೋಪಕರಣ ಖರೀದಿಗೆ ನಿಗಧಿಗೊಳಿಸಲಾಗಿದ್ದ ಅನುದಾನ ವ್ಯಪಗತವಾಗಿತ್ತು. ಪ್ರಸಕ್ತ ಸಾಲಿನಲ್ಲಿ ಈ ರೀತಿಯ ಘಟನೆಗಳು ಮರುಕಳಿಸದಂತೆ ಕ್ರಮವಹಿಸಲು ತಿಳಿಸಿದರು. ಡಿ ಇ ಐ ಸಿ ಯಲ್ಲಿ ಇರುವ ಸೌಲಭ್ಯಗಳು ಮತ್ತು ಕೇಂದ್ರದ ಕಾರ್ಯನಿರ್ವಹಣೆಯ ಬಗ್ಗೆ ಹಾಗೂ ಫಲಾನುಭವಿಗಳಿಂದ ಅಭಿಪ್ರಾಯ ಸಂಗ್ರಹದ ವಿಡಿಯೋ ಚಿತ್ರೀಕರಣ ಮಾಡಿ, ಪ್ರಚಾರ ಮಾಡಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದರು. ಈ ಸಂದರ್ಭದಲ್ಲಿ ಡಾ. ಮಂಜುಳಾ, ಆರ್. ಸಿ. ಹೆಚ್ ಡಾ. ಅಶ್ವತ್, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ಸೋಮಶೇಖರ್ ಹಾಗೂ ಸಿಬ್ಬಂದಿಗಳು ಹಾಜರಿದ್ದರು.



# ಯಶಿಕಗೆ ಮೈಸೂರು ರತ್ನ ಪ್ರಶಸ್ತಿ



**ಮೈಸೂರು:** ನಗರದ ಚೆಲುವಾಂಬ ಅಗ್ರಹಾರದ ಯಶು ಚಿಲ್ಡ್ರನ್ ಅಂಡ್ ಕಲ್ಚರಲ್ ಅಕಾಡೆಮಿ ಮತ್ತು ಅರೋರ ಎಜುಕೇಷನಲ್ ಟ್ರಸ್ಟ್ ನ ವಾರ್ಷಿಕೋತ್ಸವದ ಅಂಗವಾಗಿ ಟ್ರಸ್ಟ್ ಅಧ್ಯಕ್ಷೆ ಶ್ರೀಮತಿ ಯಶೋಧ ನಾರಾಯಣ್ ಅವರು ಕೊಡ ಮಾಡುವ ಮೈಸೂರು ರತ್ನ ಪ್ರಶಸ್ತಿಯು ಸಿದ್ಧಾರ್ಥ ನಗರದ ಜೆಎಸ್ಎಸ್ ಗೀತಾ ಭಾರತಿ ಶಾಲೆಯ 3ನೇ ತರಗತಿ ವಿದ್ಯಾರ್ಥಿನಿ ಯಶಿಕಾ.ಕೆ. ಅವರಿಗೆ ಲಭಿಸಿದೆ. ಪ್ರಶಸ್ತಿ ಪ್ರದಾನ ಕಾರ್ಯಕ್ರಮ ಡಿ.12(ಶುಕ್ರವಾರ)ರಂದು ಬೆಳಗ್ಗೆ 11 ಗಂಟೆಗೆ ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ನಂಜೇಗೌಡನದೊಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ನಡೆಯಲಿದೆ. ಯಶಿಕ ಸಿದ್ಧಾರ್ಥ ನಗರದ ನಿವಾಸಿ ಕೆ.ಆರ್.ರೂಪ– ಡಿ.ಕಿಶೋರ್ ದಂಪತಿ ಪುತ್ರಿ.

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ಮಂಡ್ಯ:** ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗಾಗಿ ಜನವರಿ 2026 ರಿಂದ ಡಿಸೆಂಬರ್ 2026 ರವರೆಗೆ ಪರಿಶಿಷ್ಟ ಜಾತಿಗೆ ಸೇರಿದ 01 ಅಭ್ಯರ್ಥಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ 01 ಅಭ್ಯರ್ಥಿಯನ್ನು ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಿದೆ.

ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯೋಮಿತಿ 35 ವರ್ಷದ ಒಳಗಿರಬೇಕು. ತರಬೇತಿಯ ಅವಧಿ ವೇಳೆ 15 ಸಾವಿರ ರೂಗಳ ಸ್ಟೇಫಂಡ್ ನೀಡಲಾಗುವುದು. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ. ಜಿಲ್ಲೆಯಲ್ಲಿ ಅರ್ಹ ಅಭ್ಯರ್ಥಿಗಳು ದೊರೆಯದೇ ಇದ್ದಲ್ಲಿ ನೆರೆಯ ಜಿಲ್ಲೆಗಳಿಂದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

ತರಬೇತಿಯು 12 ತಿಂಗಳ ಅವಧಿಯಾಗಿದ್ದು, ತಾತ್ಕಾಲಿಕವಾಗಿರುತ್ತದೆ ಅರ್ಜಿಗಳನ್ನು 2025 ರ ಡಿಸೆಂಬರ್ 26 ರೊಳಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ಹೆಚ್.ಕೆ.ವೀರಣ್ಣಗೌಡ ರಸ್ತೆ, ಮಂಡ್ಯ ಇಲ್ಲಿಗೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಮೊ. ಸಂ: 9916102412 ಅನ್ನು ಸಂಪರ್ಕಿಸಬಹುದಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.13ಕ್ಕೆ ಧರ್ಮಸ್ಥಳ ಪ್ರಕರಣ: ಒಂದು ಸಾಮಾಜಿಕ ಅವಲೋಕನ



**ಮೈಸೂರು:** ಸಮಾನ ಮನಸ್ಕರ ವೇದಿಕೆ ವತಿಯಿಂದ ಡಿ. 13 ರ ಬೆಳಗ್ಗೆ 10.30ಕ್ಕೆ ರಾಮಕೃಷ್ಣ ನಗರದ ರಮಾ ಗೋವಿಂದ ಸಭಾಂಗಣದಲ್ಲಿ ಧರ್ಮಸ್ಥಳ ಪ್ರಕರಣ– ಒಂದು ಸಾಮಾಜಿಕ ಅವಲೋಕನ, ಭೂಹಗರಣ ಮತ್ತು ದೌರ್ಜನ್ಯಗಳು ವಿಷಯ ಕುರಿತ ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಒಡನಾಡಿ ಸಂಸ್ಥೆಯ ಸ್ಟಾ ?ಯನ್ಲಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಬೆಳ್ತಂಗಡಿ ತಾಲೂಕಿನ ಸುತ್ತಮುತ್ತ ನಡೆದಿದೆ ಎನ್ನಲಾಗಿರುವ ಹಲವಾರು ಅತ್ಯಾಚಾರ ಹಾಗೂ ಹತ್ಯೆಗಳ ತನಿಖೆಗಾಗಿ ಕರ್ನಾಟಕ ಘನ ಸರ್ಕಾರವು ವಿಶೇಷ ತನಿಖಾ ದಳವನ್ನು ರಚಿಸಿದೆ. ಆದರೂ ಅನೇಕ ಅನುಮಾನದ ಹುತ್ತಗಳು ಜನರೊಳಗೆ ಬೆಳೆದಿದೆ ಎಂದರು.

ಕಾನೂನು ಸಮ್ಮತವಲ್ಲದ ಹಣಕಾಸಿನ ವ್ಯವಹಾರಗಳು ನಡೆದು ಅದೇ ರೀತಿಯಾಗಿ ಭೂ ಅಕ್ರಮಣಕಾರಿಗಳು ಎಲ್ಲಾ ಜನಾಂಗಗಳ ಹಾಗೂ ಸರ್ಕಾರದ ಭೂಮಿಯನ್ನು ನುಂಗುತ್ತಾ ಬಂದಿರುವುದರಿಂದ ಎಲ್ಲವನ್ನೂ ಕಳೆದುಕೊಳ್ಳುತ್ತಿರುವ ಜನಸಾಮಾನ್ಯರನ್ನು ಇದು ಆತಂಕಕ್ಕೆ ದೂಡಿದೆ. ಇಲ್ಲದವರ ಭೂ ಕಸಿಯುವಿಕೆಯಿಂದ ಒಂದು ಕಡೆ ಏನೂ ಇಲ್ಲದಂತಾಗಿರುವ ಜನ ಸಮುದಾಯ ಅದೇ ಸ್ಥಳಗಳಲ್ಲಿ ನಡೆಯುತ್ತಾ ಬಂದಿರುವ ಅಪಹರಣ, ಅತ್ಯಾಚಾರ, ಹತ್ಯೆಗಳು ಸರಣಿಯೋಪಾದಿಯಾಗಿ ನಡೆಯುತ್ತಾ ಬಂದಿದ್ದರೂ ನ್ಯಾಯ ಸಮ್ಮತವಾದ ಉತ್ತರಗಳು ದಕ್ಕುತ್ತಿಲ್ಲ ಎಂದು ಬೇಸರಿಸಿದರು.

ಹಾಗಾಗಿ ನೊಂದವರು ಜನಸಾಮಾನ್ಯರ ಒತ್ತಾಯಗಳನ್ನೂ ನಿರಂತರ ಪ್ರತಿಭಟನೆಗಳನ್ನೂ ಸಂವಾದಗಳನ್ನು ಏರ್ಪಡಿಸಿಕೊಂಡು ಬರುತ್ತಲೇ ಇದ್ದರೂ ಆದಾಗ್ಯೂ ಕಟು ಸತ್ಯಗಳಿದ್ದರೂ ಜನರ ಧ್ವನಿ ಅರಣ್ಯರೋದನವಾಗುತ್ತಿದೆ. ಆ ಸ್ಥಳದಲ್ಲಿ ವಶಪಡಿಸಿಕೊಂಡ ಭೂಮಿಗಳು ಯಾರೋ ಒಂದಿಷ್ಟು ಜನರ ಹೆಸರಿನಲ್ಲಿವೆ. ಬಹಳಷ್ಟು ಶೋಷಣೆಗಳು ನಡೆದಿದ್ದಾಗಿಯೂ ಕೂಡ ಭೂ ವಿವಾದಗಳು ಮತ್ತು ಶೋಷಣೆಗಳು ಒಂದಕ್ಕೊಂದು ಹೆಣೆದುಕೊಂಡಿವೆ. ಮತ್ತು ಈ ರೀತಿಯಾಗಿ ಅಹಿತಕರವಾಗಿ ಕಾನೂನನ್ನು ಮೀರುವವರನ್ನು ಓಲೈಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರವಿರುವುದು ಆಶ್ಚರ್ಯಕರವೆಂದರು. ಜನ ಸಾಮಾನ್ಯರಾದ ನಾವು ಆತ್ಮಸಾಕ್ಷಿಗೆ ಅನುಗುಣವಾಗಿ ನೂರೆಂಟು ಪ್ರಶ್ನೆಗಳನ್ನು ಇಟ್ಟುಕೊಂಡು ನೊಂದವರ್ಯಾರು? ಕೊಂದವರ್ಯಾರು? ಭೂ ಒಡೆತನ ಯಾರಿಂದ ಯಾರಿಗೆ ವರ್ಗಾವಣೆಯಾಗಿತ್ತು? ಎಂಬ ಮೂಲಭೂತ ಪ್ರಶ್ನೆಗಳನ್ನು ಇಟ್ಟುಕೊಂಡು ಈ ಸಂವಾದ ಕಾರ್ಯಕ್ರಮ ಏರ್ಪಡಿಸುತ್ತಿರುವುದಾಗಿ ಮಾಹಿತಿ ನೀಡಿದರು. ಈ ಸಂವಾದ ಕಾರ್ಯಕ್ರಮದಲ್ಲಿ ಗುರುವಾಯನ ಕೆರೆ ನಾಗರಿಕ ಸೇವಾ ಟ್ರಸ್ಟ್ ನ ಸೋಮನಾಥ್ ನಾಯಕ್, ರಂಜನ್ ರಾವ್, ಸಾಮಾಜಿಕ ಚಿಂತಕ ಡಾ.ಲಕ್ಷ್ಮೀಶ ತೋಳ್ವಾಡಿ, ಎಡ ಪಂಥೀಯ ಹೋರಾಟಗಾರ ವಿಷ್ಣುಮೂರ್ತಿ ಮೊದಲಾದವರು ಪಾಲ್ಗೊಳ್ಳಲಿದ್ದಾರೆಂದರು. ಕಮಲ್ ಗೋಪಿನಾಥ್, ಹೊಸಕೋಟೆ ಬಸವರಾಜು, ಸಬಿಹಾ ಭೂಮಿಗೌಡ, ಹರಿಹರಾನಂದಸ್ವಾಮಿ ಇದ್ದರು.

# ಜೈಲಿನ ಮೇಲೆ ದಾಳಿ; 60ಕ್ಕೂ ಹೆಚ್ಚು ಫೋನ್, ನಗದು ವಶ

**ಬೆಂಗಳೂರು:** ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಸಜಾಬಂದಿ ಹಾಗೂ ವಿಚಾರಣಾಧೀನ ಕೈದಿಗಳಿಗೆ ನೀಡಲಾಗಿದ್ದ ವಿಶೇಷ ಆತಿಥ್ಯಕ್ಕೆ ಸಂಬಂಧಿಸಿದ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ನಂತರ, ಬೆಂಗಳೂರು ಕೇಂದ್ರ ಕಾರಾಗೃಹದ ಅಧಿಕಾರಿಗಳು ಜೈಲು ಆವರಣದಲ್ಲಿ ಹಲವು ಬಾರಿ ಶೋಧ ನಡೆಸುತ್ತಿದ್ದಾರೆ. ಅಧಿಕಾರಿಗಳು ಮಂಗಳವಾರ ಜೈಲಿನ ಮೇಲೆ ದಾಳಿ ನಡೆಸಿ, ಹಲವಾರು ಬ್ಯಾರಕ್‌ಗಳಲ್ಲಿ 14 ಮೊಬೈಲ್ ಫೋನ್‌ಗಳು, ಒಂಬತ್ತು ಸಿಮ್ ಕಾರ್ಡ್‌ಗಳು, ಐದು ಚಾರ್ಜರ್‌ಗಳು, 10 ಚೂಪಾದ ವಸ್ತುಗಳು ಮತ್ತು ಎರಡು ಇಯರ್‌ಫೋನ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಇದರೊಂದಿಗೆ, ಕಳೆದ ಹದಿನೈದು ದಿನಗಳಲ್ಲಿ ಅಧಿಕಾರಿಗಳು 67 ಮೊಬೈಲ್ ಫೋನ್‌ಗಳು, 48 ಸಿಮ್ ಕಾರ್ಡ್‌ಗಳು ಮತ್ತು 64,880 ರೂ. ನಗದು ಹಾಗೂ ಇತರ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. 60 ಕ್ಕೂ ಹೆಚ್ಚು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಳ್ಳುವುದು ಜೈಲಿನಲ್ಲಿ ಗಂಭೀರ ಭದ್ರತಾ ಲೋಪದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಇತ್ತೀಚೆಗೆ, ಜೈಲಿಗೆ ಮಾದಕ ದ್ರವ್ಯ ಮತ್ತು ಮೊಬೈಲ್ ಫೋನ್‌ಗಳನ್ನು ಕಳ್ಳಸಾಗಣೆ ಮಾಡುತ್ತಿರುವ ಕೆಲವು ಘಟನೆಗಳು ಸಹ ಬೆಳಕಿಗೆ ಬಂದಿವೆ.

# ಗಾಂಧಿ–ಅಂಬೇಡ್ಕರ್ ಅವರ ಆದರ್ಶಗಳನ್ನು ಪಾಲಿಸಿ: ಪ್ರೊ.ಜೆ ಪಿ



**ಮಂಡ್ಯ:** ಮಹಾತ್ಮ ಗಾಂಧೀಜಿಯವರು ದೇಶದ ಸ್ವತಂತ್ರಕ್ಕಾಗಿ ಹೋರಾಡಿದರೆ ಡಾ. ಬಿ. ಆರ್ ಅಂಬೇಡ್ಕರ್ ದೇಶದ ಸಮಾನತೆಗಾಗಿ ಹೋರಾಡಿದ್ದಾರೆ. ಅವರ ಚಿಂತನೆ ನಿಲುವು, ಆದರ್ಶವನ್ನು ಇಂದಿನ ಯುವ ಪೀಳಿಗೆಗಳು ಪಾಲಿಸಬೇಕು ಎಂದು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಜಯಪ್ರಕಾಶಗೌಡ ಅವರು ಗುರುವಾರ ಹೇಳಿದರು.

ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ ಗಾಂಧಿ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ಗಣಕ ವಿಜ್ಞಾನ ವಿಭಾಗದ ವತಿಯಿಂದ ಮಂಡ್ಯ ವಿಶ್ವವಿದ್ಯಾಲಯದ ಆಡಳಿತ ಭವನದಲ್ಲಿ ಆಯೋಜಿಸಲಾಗಿದ್ದ ಗಾಂಧಿ ವಿಚಾರಧಾರೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗಾಂಧೀಜಿಯವರ ಆಶಯದಂತೆ ಇಂದು ಹೆಣ್ಣು ಮಕ್ಕಳು ಸ್ವತಂತ್ರ ಮತ್ತು ಸಮಾನತೆಯಿಂದ ಬದುಕುತ್ತಿದ್ದಾರೆ. ಗಂಡು ಮಕ್ಕಳನ್ನು ಮೀರಿ ಎಲ್ಲಾ ಕ್ಷೇತ್ರದಲ್ಲೂ ಮುಂದುವರೆಯುತ್ತಿದ್ದಾರೆ. ಪ್ರಸ್ತುತ ಮಹಿಳೆಯರು ಪ್ರವೇಶ ಮಾಡದೇಯಿರುವ ಕ್ಷೇತ್ರವಿಲ್ಲ, ಭಾರತದ ಯಶಸ್ಸಿಗೆ ಹಾಗೂ ಬದಲಾವಣೆಗಳಿಗೆ ಹೆಣ್ಣುಮಕ್ಕಳ ಸಮಾನತೆ ಕಾರಣವಾಗಿದೆ ಎಂದರೆ ತಪ್ಪಾಗುವುದಿಲ್ಲ ಎಂದರು.

ಗಾಂಧಿಯವರು ತಿಳಿಸದ ವಿಷಯವಿಲ್ಲ ಸ್ವಚ್ಛತೆ, ಶ್ರಮ, ಕೃಷಿ, ಆಹಾರ, ಆರೋಗ್ಯ ಹಾಗೂ ಜೀವನ ಮೌಲ್ಯಗಳ ಬಗ್ಗೆ ಅವರು ಮಾತನಾಡಿದ್ದಾರೆ. ಗಾಂಧೀಜಿಯವರು ಸರಳತೆಯ ಜೀವನಕ್ಕೆ ಪ್ರಮುಖವಾದ ಉದಾಹರಣೆಯಾಗಿದ್ದಾರೆ. ಸರಳತೆಯೇ ಜಗತ್ತಿನ ಸಾರ ಎಂದ ಅವರು ಶಸಸ್ತ್ರ ಹಿಡಿಯದೆ, ರಕ್ತ ಪಾತವಿಲ್ಲದೆ, ದೇಶಕ್ಕೆ ಸ್ವತಂತ್ರ ತಂದು ಕೊಟ್ಟಿದ್ದಾರೆ. ವಿಶ್ವದಲ್ಲಿಯೇ ಶಾಂತಿ, ಸೌಹಾರ್ದತೆಯಿಂದ ದೇಶಕ್ಕೆ ಸ್ವತಂತ್ರ ತಂದ ನಿದರ್ಶನ ಗಾಂಧಿಯವರದ್ದು ಮಾತ್ರ ಎಂದು ಬಣ್ಣಿಸಿದರು.

ಶಿಕ್ಷಣವೆಂಬುದು ಕೇವಲ ಉದ್ಯೋಗಕ್ಕಾಗಿ ಸೀಮಿತವಾಗಿರುವುದಲ್ಲ ಶಿಕ್ಷಣದಿಂದ ಅರಿವು, ಜ್ಞಾನ, ಜೀವನದ ಮೌಲ್ಯ ಎಲ್ಲವೂ ತಿಳಿಯಲು ಸಾಧ್ಯ. ವಿದ್ಯಾರ್ಥಿಗಳಾದ ನೀವು ಪ್ರಶ್ನಿಸುವ ಮನೋಭಾವನೆ ಬೆಳೆಸಿಕೊಳ್ಳಬೇಕು, ಪ್ರಶ್ನಿಸುವುದರ ಜತೆಗೆ ಕೇಳಿಸಿಕೊಳ್ಳುವ ಆಸಕ್ತಿಯನ್ನು ಸಹ ಮೈಗೂಡಿಸಿಕೊಳ್ಳಬೇಕು. ವಿಷಯಗಳನ್ನು ಸಂಪೂರ್ಣವಾಗಿ ಕೇಳಿಸಿಕೊಂಡಾಗ

ಮಾತ್ರ ವಿಷಯದ ಆಳವಾಗಿ ಮಾಹಿತಿ ಅರ್ಥೈಸಿಕೊಳ್ಳಲು ಸಾಧ್ಯ ಎಂದು ವಿದ್ಯಾರ್ಥಿಗಳನ್ನು ಕುರಿತು ಮಾತನಾಡಿದರು.

ಮಂಡ್ಯ ವಿಶ್ವವಿದ್ಯಾಲಯ ಕುಲಪತಿಗಳಾದ ಪ್ರೊ.ಕೆ.ಶಿವಚಿತ್ತಪ್ಪ ಅವರು ಮಾತನಾಡಿ ಗಾಂಧೀಜಿಯವರು ಅಂದಿಗೂ ಇಂದಿಗೂ ಎಂದೆದಿಗೂ ಎಲ್ಲರಿಗೂ ಅನ್ವಯವಾಗುವಂತವರು ಆಗಾಗಿ ಗಾಂಧಿಯವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು. ಆರ್ಥಿಕತೆಯ ಚಿಂತಕನಾಗಿ ದೇಶದಲ್ಲಿ ಬಡತನ ನಿವಾರಣೆಯಾಗಬೇಕು ಹಾಗೂ ದೇಶ ಸುಸ್ಥಿರತೆ ಕಾಣಬೇಕು ಎಂಬುದು ಅವರ ಆಶಯವಾಗಿತ್ತು ಎಂದರು.

ಮಹಿಳೆಯರು ಭೌತಿಕ, ಆರ್ಥಿಕ, ರಾಜಕೀಯ ಹಾಗೂ ಸಮಾಜಿಕವಾಗಿ ಸಬಲೀಕರ ಹೊಂದಬೇಕು ಎಂದು ಗಾಂಧಿಯವರು ಮೊದಲಿಗೆ ಹೇಳಿದ್ದರು. ಈ ನಿಟ್ಟಿನಲ್ಲಿ ಮಹಿಳೆಯರು ಪುರುಷರಿಗಿಂತಲೂ ಹೆಚ್ಚಾಗಿ ಆರ್ಥಿಕ, ರಾಜಕೀಯ ಹಾಗೂ ಸಮಾಜಿಕವಾಗಿ ಅಲ್ಲದೆ ತಂತ್ರಜ್ಞಾನದಲ್ಲೂ ಸಾಧನೆ ಮಾಡುತ್ತಿರುವುದು ದೇಶದ ಹೆಮ್ಮೆಯ ಸಂಗತಿ ಎಂದರು.

ಕಾರ್ಯಕ್ರಮದಲ್ಲಿ ಗಾಂಧೀಜಿ ಚಿಂತನೆಗಳ ಪ್ರಸ್ತುತತೆ ಕುರಿತು ಬೆಂಗಳೂರು ಕರ್ನಾಟಕ ಗಾಂಧಿ ಸ್ಮಾರಕ ನಿಧಿ ನಿರ್ದೇಶಕರಾದ ಜಿ.ಬಿ.ಶಿವರಾಜು ಹಾಗೂ ರಾಜ್ಯ ಸಂಪನ್ಮೂಲ ಕೇಂದ್ರ ನಿವೃತ್ತ ನಿರ್ದೇಶಕರಾದ ಎಸ್.ತುಕಾರಾಂ ಅವರು ಉಪನ್ಯಾಸ ಮಾಡಿದರು.

ಇದೇ ಸಂದರ್ಭದಲ್ಲಿ ಗಾಂಧಿ ಅಧ್ಯಯನ ಮತ್ತು ಸಂಶೋಧನ ಕೇಂದ್ರದ ಸಂಯೋಜಕರಾದ ಡಾ. ಸುಮಾರಾಣಿ ಶಂಭು, ಉಪ ಕುಲ ಸಚಿವರಾದ ಡಾ. ಎಂ. ವೈ ಶಿವರಾಮು, ಮೌಲ್ಯಮಾಪನ ಕುಲಸಚಿವರಾದ ಜಿ. ವಿ ವೆಂಕಟರಮಣ, ಗಣಕ ವಿಜ್ಞಾನ ವಿಭಾಗ ಮುಖ್ಯಸ್ಥರಾದ ಜಿ. ವಿ ಪ್ರೇಮ್ ಸಿಂಗ್ ಹಾಜರಿದ್ದರು.

# ಆರ್‌ಎಸ್‌ಎಸ್, ಬಿಜೆಪಿ ಕಟ್ಟಿಹಾಕಲು ದ್ವೇಷದ ಮಸೂದೆ ಜಾರಿ: ಮಹೇಶ್ ಟೀಕೆ

**ಮೈಸೂರು:** ಆರ್ ಎಸ್ ಎಸ್ ಮತ್ತು ಬಿಜೆಪಿ ಕಟ್ಟಿಹಾಕಲು ದ್ವೇಷದ ಮಸೂದೆಯನ್ನು ರಾಜ್ಯ ಸರ್ಕಾರ ತಂದಿದೆ ಎಂದು ಬಿಜೆಪಿ ರಾಜ್ಯ ವಕ್ತಾರ ಎಂ.ಜಿ ಮಹೇಶ್ ತಿಳಿಸಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಬಿಜೆಪಿಗರ ಮೇಲೆ ಪ್ರಕರಣ ಹಾಕಲು ದ್ವೇಷಭಾಷಣ ಮಸೂದೆ ಜಾರಿಗೊಳಿಸಿದ್ದಾರೆಯೇ ವಿನಃ ದ್ವೇಷದ ಪ್ರತಿಬಂಧಕ ಮಸೂದೆಯಲ್ಲ. 7 ವರ್ಷ ಶಿಕ್ಷೆ ನೀಡುವ ಮಸೂದೆ ಪಾಸ್ ಮಾಡಿದ್ದಾರೆ. ರಾಜಕೀಯ ದ್ವೇಷದ ಕಾರಣದಿಂದ ಹೀಗೆ ಮಾಡಿದ್ದಾರೆ. ಹಿಂದೂ ಸಂಘಟನೆಗಳು, ಆರ್ ಎಸ್ ಎಸ್ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು ಎಂಬ ಉದ್ದೇಶದಿಂದ ಈ ವಿಧೇಯಕ ತಂದಿದ್ದಾರೆ. ದ್ವೇಷ ಎಂಬುದು ಕಾಂಗ್ರೆಸ್ ಗುಣಧರ್ಮ. ನೆಹರೂ ಕಾಲದಿಂದಲೂ ಹಿಂದೂಗಳನ್ನು ದ್ವೇಷ ಮಾಡುತ್ತಾ ಬಂದಿದ್ದಾರೆ. ಹಿಂದೂಗಳ ಎಲ್ಲಾ ಚಟುವಟಿಕೆಯನ್ನು ವಿರೋಧ ಮಾಡುವುದೇ ಇವರ ಕಾರ್ಯವಾಗಿದೆ. ಯುನಿಸ್ಕೊ ದೀಪಾವಳಿಯಲ್ಲಿ ದೀಪ ಹಚ್ಚುವುದನ್ನು ತನ್ನ ಪರಂಪರ ಪಟ್ಟಿಯಲ್ಲಿ ಸೇರಿಸಿಕೊಂಡಿದೆ. ಜಗತ್ತಿನ ಪೂರ್ಣ ದೀಪ ಹಚ್ಚುವುದನ್ನು ನಾವು ಪ್ರೋತ್ಸಾಹಿಸುವುದಾಗಿ ಯುನಿಸ್ಕೊ ಹೇಳಿದೆ. ಆದರೆ, ತಮಿಳುನಾಡಿನ ತಿರುಪುರಂ ಬೆಟ್ಟದ ಮೇಲೆ ದೀಪ ಹಚ್ಚಿದ್ದರೆ ಅದಕ್ಕೆ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳು ವಿರೋಧ ಮಾಡುತ್ತವೆ. ಕಾರ್ತಿಕ ದೀಪಂ ಬಗ್ಗೆ ಮದ್ರಾಸ್ ಹೈ ಕೋರ್ಟ್ ಆದೇಶವನ್ನು ತಮಿಳುನಾಡಿನ ಸರ್ಕಾರ ಜಾರಿಗೆ ತರುವುದಿಲ್ಲ. ಈ ಆದೇಶ ಮಾಡಿದ ನ್ಯಾಯಾದೀಶರನ್ನೇ ತೆಗೆದುಹಾಕಬೇಕು ಎಂದು ಸಹಿ ಸಂಗ್ರಹ ಮಾಡುತ್ತಾರೆ. ಅದಕ್ಕೆ ನಮ್ಮ ರಾಜ್ಯದ ಕಾಂಗ್ರೆಸ್ ಸಂಸದರಾದ ಶ್ರೇಯಸ್ ಪಟೇಲ್, ಶ್ಯಾಮನೂರು ಶಿವಶಂಕರಪ್ಪನವರ ಸೊಸೆ ಹಾಗೂ ಕುಮಾರ್ ನಾಯಕ್ ಸಹಿ ಮಾಡುತ್ತಾರೆ. ಕಾಂಗ್ರೆಸ್ ಹಿಂದೂಗಳ ಮೇಲಿರುವ ದ್ವೇಷದಿಮದ ನ್ಯಾಯಾದಿಶರನ್ನೆ ತೆಗೆದುಹಾಕಬೇಕು ಎನ್ನುತ್ತಾರೆ ಇದು ಈ ದೇಶದ ದುರ್ದೈವ ಎಂದರು.

ಧರ್ಮಸ್ಥಳ ವಿಚಾರದಲ್ಲಿ ಬುರುಡೆ ಗ್ಯಾಂಗ್ ಬಗ್ಗೆ ಸಿದ್ದರಾಮಯ್ಯ ಮುತುವರ್ಜಿವಹಿಸಿದ್ದರು. ಈ ಗ್ಯಾಂಗ್ ನಲ್ಲಿದ್ದ ಒಡನಾಡಿ ಸ್ಟ್ಯಾನ್ಲಿ ಬಗ್ಗೆ ಕ್ರಮ ತೆಗೆದುಕೊಳ್ಳದೆ ಬಿಟ್ಟಿದ್ದು ಯಾಕೆ? ಅವನೇನು ನಿಮ್ಮ ನೆಂಟನಾ? ಈ ಧರ್ಮಸ್ಥಳ ಆದ ಮೇಲೆ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಕೈ ಹಾಕಿದ್ದಾರೆ. ಕೇವಲ ತುಷ್ಟೀಕರಣ, ಕೋಮುವಾದ, ಓಲೈಕೆ ರಾಜಕಾರಣ, ಭ್ರಷ್ಟಾಚಾರ ಬಿಟ್ಟು ಬೇರೆ ಏನನ್ನೂ ಸಿಎಂ ಸಿದ್ದರಾಮಯ್ಯ ಮಾಡಿಲ್ಲವೆಂದರು.

ಸುದಿಗೋಷ್ಠಿಯಲ್ಲಿ ಬಿಜೆಪಿ ಗ್ರಾಮಾಂತರ ಪ್ರಧಾನ ಕಾರ್ಯದರ್ಶಿ ಪರೀಕ್ಷಿತ್ ರಾಜೇ ಅರಸ್, ರಾಮಚಂದ್ರು, ವಿನಯ್, ನಗರ ಪ್ರಧಾನಕಾರ್ಯದರ್ಶಿ ರುದ್ರಮೂರ್ತಿ, ಗ್ರಾಮಾಂತರ ಕಾರ್ಯದರ್ಶಿ, ದಯಾನಂದ್ ಪಟೇಲ್, ನಗರ ಮಾಧ್ಯಮ ಸಂಚಾಲಕ ಮಹೇಶ್ ರಾಜೇ ಅರಸ್, ಮಾಧ್ಯಮ ಸಹ ಸಂಚಾಲಕ ಬಿ.ಎಂ.ಸಂತೋಷ್ ಕುಮಾರ್ ಉಪಸ್ಥಿತರಿದ್ದರು.




# ಮಾನವ ಹಕ್ಕುಗಳ ಬಲವರ್ಧನೆಗೆ ಒತ್ತಾಯಿಸಿ ಪ್ರತಿಭಟನೆ




**ಮೈಸೂರು:** ಅಂತಾರಾಷ್ಟ್ರೀಯ ಮಾನವ ಹಕ್ಕುಗಳ ದಿನದ ಪ್ರಯುಕ್ತ ಮಾನವ ಹಕ್ಕುಗಳನ್ನು ಬಲ ವರ್ಧನೆ ಮಾಡುವಂತೆ ಒತ್ತಾಯಿಸಿ ಜನ ಸಂಗ್ರಾಮ ಪರಿಷತ್ ವತಿಯಿಂದ ಸಾಂಕೇತಿಕ ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಗಾಂಧಿಚೌಕದ ಗಾಂಧಿ ಪ್ರತಿಮೆ ಮುಂದೆ ಕಪ್ಪುಪಟ್ಟಿ ಧರಿಸಿ ಸಮಾ ವೇಶಗೊಂಡ ಪ್ರತಿಭಟನಾಕಾರರು, ಮೊಂಬತ್ತಿ ಬೆಳಗಿದರಲ್ಲದೆ, ಮಾನವ ಹಕ್ಕುಗಳ ಉಳಿವಿಗೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆಗಳನ್ನು ತಡೆಯಲು ಸರ್ಕಾರ ಪರಿಣಾಮಕಾರಿಯಾಗಿ ಕಠಿಣ ಕಾನೂನು ತರಬೇಕು ಎಂದು ಒತ್ತಾಯಿಸಿದರು. ಸ್ವಾತಂತ್ರ್ಯ ಬಂದು 7 ದಶಕಗಳೇ ಕಳೆದಿವೆ. ಹೀಗಿದ್ದರೂ ಮಹಿಳೆಯರು, ದೀನ–ದಲಿತರು, ಬಡವರ ಮಾನವ ಹಕ್ಕುಗಳನ್ನು ಉಲ್ಲಂಘನೆ ಮಾಡುವಂತಹ ಪ್ರಕರಣ ಗಳು ಮರುಕಳಿಸುತ್ತಲೇ ಇವೆ. ಯಾವುದೇ ಸರ್ಕಾರಿ ಕಚೇರಿಗೆ ದುರ್ಬಲರೂ ಹೋದರೆ ಅವರ ನ್ಯಾಯಯುತ ಬೇಡಿಕೆಗಳಿಗೆ ಸ್ಪಂದಿ ಸದ ಎಷ್ಟೋ ಪ್ರಕರಣಗಳು ದೇಶದಲ್ಲಿ ಮೈಸೂರಿನ ಗಾಂಧಿಚೌಕದಲ್ಲಿ ಜನ ಸಂಗ್ರಾಮ ಪರಿಷತ್ ವತಿಯಿಂದ ಬುಧವಾರ ಸಾಂಕೇತಿಕ ಪ್ರತಿಭಟನೆ ನಡೆಸಲಾಯಿತು.

ದಿನ ನಿತ್ಯ ನಡೆಯುತ್ತಿವೆ. ವಿಶೇಷವಾಗಿ ಪೊಲೀಸ್ ಠಾಣೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ದೌರ್ಜನ್ಯ ಪ್ರಕರಣಗಳು ನಡೆಯುತ್ತಿವೆ ಎಂದು ಆರೋಪಿಸಿದರು. ದೇಶದ ಸಂವಿಧಾನದಲ್ಲಿ ಮಾನವ ಹಕ್ಕುಗಳ ರಕ್ಷಣೆಗೆ ಕಾನೂನು ಇದ್ದಾಗ್ಯೂ ಆಳುವ ಸರ್ಕಾರಗಳು ಸರಿಯಾದ ರೀತಿ ಯಲ್ಲಿ ಜಾರಿ ಮಾಡುವಲ್ಲಿ ವಿಫಲವಾಗಿರು ವುದೇ ಹೆಚ್ಚು ವ್ಯವಸ್ಥೆ ಬಲಾಢ್ಯರ ಪರವಾಗಿ ನಿಲ್ಲುವುದರಿಂದ ಮಾನವ ಹಕ್ಕುಗಳ ಉಲ್ಲಂಘನೆ ನಿತ್ಯ ವರದಿಯಾಗುತ್ತಿವೆ. ಇಂತಹ ದೌರ್ಜನ್ಯ ತಡೆಗಟ್ಟಲು ಮಾನವ ಹಕ್ಕುಗಳ ಆಯೋಗ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅಧೀನದಲ್ಲಿ ಇದ್ದರೂ ಅವುಗಳು ಮುಕ್ತವಾಗಿ ಕಾರ್ಯ ನಿರ್ವಹಿಸಲು ಅವಕಾಶ ನೀಡದಿರು ವುದೇ ಹೆಚ್ಚಿದೆ ಎಂದು ದೂರಿದರು.

ಆಯೋಗಗಳು ಅಧಿಕಾರವನ್ನು ಸಮರ್ಪಕವಾಗಿ ಚಲಾಯಿಸಿ ಮಾನವ ಹಕ್ಕುಗಳನ್ನು ರಕ್ಷಣೆಗಾಗಿ ಸೂಕ್ತ ರೀತಿಯಲ್ಲಿ ಕಾರ್ಯನಿರ್ವಹಿಸಲು ಆಳುವ ಸರ್ಕಾರ ಗಳು ಅವುಗಳಿಗೆ ಪೂರ್ಣ ಸ್ವಾತಂತ್ರ್ಯ ನೀಡ ಬೇಕು ಎಂದು ಒತ್ತಾಯಿಸಿದರು. ಜನ ಸಂಗ್ರಾಮ ಪರಿಷತ್ ರಾಜ್ಯ ಗೌರವಾಧ್ಯಕ್ಷ ನಗರ್ಲೆ ಎಂ.ವಿಜಯಕುಮಾರ್, ರಾಜ್ಯ ಉಪಾಧ್ಯಕ್ಷ ಪಾಲಹಳ್ಳಿ ಪ್ರಸನ್ನ, ರೈತ ಸಂಘದ ರಘು, ಕರ್ನಾಟಕ ಅಂಗವಿಕ ಲರ ವೇದಿಕೆ ಅಧ್ಯಕ್ಷ ಎಂ.ಪ್ರಭುಸ್ವಾಮಿ, ವಕೀಲ ಕೆಂಪೇಗೌಡ, ಸಾಮಾಜಿಕ ಹೋರಾಟಗಾರ ರಾಜೇಂದ್ರ, ವಿವಿಧ ಸಂಘಟನೆಗಳ ಮುಖಂಡರಾದ ಕುಮುದಾ, ತ್ಯಾಗರಾಜ್, ಎನ್.ಟಿ. ಜ್ಞಾನಪ್ರಕಾಶ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಈ–ಪೌತಿ ಆಂದೋಲನಕ್ಕೆ ಚಾಲನೆ





**ಮೈಸೂರು:** ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸ್ವಕ್ಷೇತ್ರ ವರುಣಾಕ್ಷೇತ್ರದಲ್ಲಿಯೂ ಕಂದಾಯ ಇಲಾಖೆಯಿಂದ ಈ ಪೌತಿ ಖಾತೆ ಆಂದೋಲನಕ್ಕೆ ಚಾಲನೆ ನೀಡಲಾಗಿದ್ದು, ಸ್ವತಃ ಅಪಾರ ಜಿಲ್ಲಾಧಿಕಾರಿಗಳೇ ಗ್ರಾಮಕ್ಕೆ ಭೇಟಿ ನೀಡಿ ಆಂದೋಲನಕ್ಕೆ ಚಾಲನೆ ನೀಡಿದರು.

ಮೈಸೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ರವರು ವರುಣಾ ಹೋಬಳಿಯ ಮೇಗಳಾಪುರ ಗ್ರಾಮಕ್ಕೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಕಾರ್ಯಕ್ರಮದ ಬಗ್ಗೆ ಮಾಹಿತಿ ಪಡೆದುಕೊಂಡರು. ಸಾರ್ವಜನಿಕರ ಕುಂದುಕೊರತೆಗಳನ್ನು ವಿಚಾರಿಸಿ ಗ್ರಾಮ ಆಡಳಿತಾಧಿಕಾರಿಗಳಿಗೆ ಕಂದಾಯ ಅಧಿಕಾರಿಗಳಿಗೆ ಅಗತ್ಯ ಮಾರ್ಗದರ್ಶನವನ್ನು ನೀಡಿ ರೈತರಿಗೆ ಸರ್ಕಾರದ ಸೇವೆಗಳನ್ನು ಕಡ್ಡಾಯವಾಗಿ ಹಾಗೂ ಶೀಘ್ರವಾಗಿ ಒದಗಿಸಬೇಕೆಂದು ನಿರ್ದೇಶನ ನೀಡಿದರು. ಸದರಿ ಆಂದೋಲನವನ್ನು ಮೈಸೂರು ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದು ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿಯೂ ಇಂದು ಆಂದೋಲನ ಯಶಸ್ವಿಯಾಗಿ ನಡೆದಿದೆ ಎಂದರು. ಕಾರ್ಯಕ್ರಮದಲ್ಲಿ ವರುಣಾ ಹೋಬಳಿಯ ಕಂದಾಯ ಅಧಿಕಾರಿಗಳು ಹಾಗೂ ಗ್ರಾಮ ಆಡಳಿತಾಧಿಕಾರಿ ಇತರರು ಇದ್ದರು.



ಸಿನಿಮಾ ವರದಿ: ಬಿ.ಜಿ.ರವಿಕುಮಾರ್



# ಗಿಲ್ಲಿ ನಟ ಅಭಿನಯದ "ಸರ್ಕಾರಿ ಶಾಲೆ-H 8" ಚಿತ್ರದ ಪೋಸ್ಟರ್ ಬಿಡುಗಡೆ

ತನ್ನ ಶೀರ್ಷಿಕೆಯಲ್ಲೇ ಕುತೂಹಲ ಹುಟ್ಟು ಹಾಕಿರುವ, ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ 'ಸರ್ಕಾರಿ ಶಾಲೆ– ಊ 8' ಎಂಬ ಚಿತ್ರವೀಗ ತೆರೆಗೆ ಬರಲು ಸಿದ್ಧವಾಗುತ್ತಿದೆ.

ಸದ್ಯ ಬಿಗ್ ಬಾಸ್ ಮನೆಯಲ್ಲಿರುವ ಗಿಲ್ಲಿ ನಟ ಪ್ರಮುಖ ಪಾತ್ರಲ್ಲಿ ನಟಿಸಿರುವ ಈ ಚಿತ್ರಕ್ಕೆ ಗುಣ ಹರಿಯಬ್ಬೆ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿದ್ದಾರೆ. ಗಿರಿಚಂದ್ರ ಪ್ರೊಡಕ್ಷನ್ಸ್ ಮೂಲಕ ತೇಜಸ್ವಿನಿ ಎಸ್. ಅವರು ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ.

ಇತ್ತೀಚೆಗೆ ಈ ಚಿತ್ರದ ನೂತನ ಪೋಸ್ಟರನ್ನು ಗಿಲ್ಲಿ ನಟನ ಊರಾದ ಮಳವಳ್ಳಿ ತಾಲೂಕಿನ ದಡದಪುರದಲ್ಲಿರುವ ಗಿಲ್ಲಿ ನಟ ಓದಿದ ಸರ್ಕಾರಿ ಶಾಲೆಯಲ್ಲಿ ಆತನ ತಂದೆ, ತಾಯಿ ಬಿಡುಗಡೆ ಮಾಡಿದರು.

ಆರಂಭದಲ್ಲಿ ಕುತೂಹಲ ಕೆರಳಿಸುತ್ತ ಸಾಗುವ ಈ ಚಿತ್ರದ ಕಥೆ ಒಂದು ವಿಗ್ರಹದ ಮೇಲೆ ನಿಂತಿರುತ್ತೆ . ಚಿತ್ರದ ಕಥೆ 4 ಕಡೆ ಸಾಗುತ್ತದೆ. ಈ ಚಿತ್ರಕ್ಕೆ ಬೆಂಗಳೂರು, ಚಿತ್ರದುರ್ಗ, ಶಿರಾ, ಶಿವಮೊಗ್ಗ ಸುತ್ತಮುತ್ತ. ಚಿತ್ರೀಕರಣ ನಡೆಸಲಾಗಿದೆ. ಈಗಾಗಲೇ ಚಿತ್ರದ ಚಿತ್ರೀಕರಣ, ಪೋಸ್ಟ್ ಪ್ರೊಡಕ್ಷನ್ ಹಾಗೂ ಸೆನ್ಸಾರ್ ಪ್ರಕ್ರಿಯೆ ಕೂಡ ಮುಗಿದಿದೆ. 2026ರ ಫೆಬ್ರವರಿಯಲ್ಲಿ ಚಿತ್ರವನ್ನು ಬಿಡುಗಡೆ ಮಾಡುವ ಯೋಜನೆ ಚಿತ್ರತಂಡಕ್ಕಿದೆ.

ವಿಜೇತ್ ಮಂಜಯ್ಯ ಅವರ ಸಂಗೀತ ಸಂಯೋಜನೆಯ ಈ ಚಿತ್ರದಲ್ಲಿ 3



ಹಾಡುಗಳಿದ್ದು, ಹಾಸ್ಯನಟ ಶರಣ್ ಹಾಗೂ ಮೆಹಬೂಬ್ ಸಾಬ್ ಒಂದೊಂದು ಹಾಡನ್ನು ಹಾಡಿದ್ದಾರೆ. ನಾಗೇಂದ್ರ ಪ್ರಸಾದ್ ಸಾಹಿತ್ಯ ರಚಿಸಿದ್ದಾರೆ. ರವಿ ರಾಮದುರ್ಗ ಹಾಗೂ ವೀನಸ್ ಮೂರ್ತಿ ಅವರ ಕ್ಯಾಮೆರಾ ವರ್ಕ್, ರವಿತೇಜ ಸಿ.ಹೆಚ್. ಅವರ ಸಂಕಲನ ಈ ಚಿತ್ರಕ್ಕಿದೆ.

ಈ ಚಿತ್ರದಲ್ಲಿ ಗಿಲ್ಲಿ ನಟ, ಗುಣ ಹರಿಯಬ್ಬೆ, ಮೇಘಶ್ರೀ ಪ್ರಮುಖ ಪಾತ್ರಗಳಲ್ಲಿದ್ದು, ಉಳಿದಂತೆ

ರಾಘವೇಂದ್ರ ರಾಜ್ ಕುಮಾರ್, ಸುಚೇಂದ್ರ ಪ್ರಸಾದ್ , ಜಗಪ್ಪ, ನವಾಜ್, ಸುಶ್ಮಿತ ಜಗಪ್ಪ, ಕಡ್ಡಿಪುಡಿ, ಜೋತಿರಾಜ್, ನಮ್ರತಾ ನಟಿಸಿದ್ದಾರೆ.

# ಖಾಕಿಯಲ್ಲಿ ಕಿಚ್ಚ ಖದರ್

ಕಿಚ್ಚ ಸುದೀಪ್ ನಟಿಸಿರುವ ಬಹು ನಿರೀಕ್ಷಿತ ಸಿನಿಮಾ ಮಾರ್ಕ್ ಟ್ರೇಲರ್ ರಿಲೀಸ್ ಆಗಿದೆ. ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ಈ ವೇಳೆ ಇಡೀ ತಂಡ ಭಾಗಿಯಾಗಿತ್ತು.

ಟ್ರೇಲರ್ ಬಿಡುಗಡೆ ಬಳಿಕ ನಟ ಕಿಚ್ಚ ಸುದೀಪ್ ಮಾತನಾಡಿ, ವಿಜಯ್ ಹಾಗೂ ಚಂದ್ರು ಮಲಗಿಕೊಳ್ಳದೇ ಈ ಚಿತ್ರಕ್ಕೆ ಕೆಲಸ ಮಾಡಿದ್ದಾರೆ. ನನ್ನ ಮಾತಿಗೆ ಧೃಡವಾಗಿ ನಿಂತಿದ್ದು ನನ್ನ ಇಡೀ ತಂಡ. ಟೆಕ್ನಿಕಲ್ ಟೀಂ ಹಾಗೂ ಇಡೀ ಕಲಾವಿದರು. ಡಿಸೆಂಬರ್ ನಲ್ಲಿ ಬರ್ತಿರುವ ಸೂಪರ್ ಸ್ಟಾರ್ಸ್ ಸಿನಿಮಾಗಳಿಗೆ ಉತ್ತರಿಸಿದ ಕಿಚ್ಚ, ದೀಪಾವಳಿ ಬಂದರೆ ಕರ್ನಾಟಕದಲ್ಲಿ ಎಲ್ಲರ ಮನೆಯಲ್ಲಿಯೂ ಹಬ್ಬ. ಯಾವತ್ತು ತರಕಾರಿ, ಅಡುಗೆ ಕಮ್ಮಿಯಾಗಿಲ್ಲ. ಇನ್ನೂ ಸೀಟ್ ಗಳು ಹೇಗೆ ಕಡಿಮೆಯಾಗುತ್ತವೆ. ಜನ ಬರದೇ ಇರ್ತಾರಾ..? ಶೂಟಿಂಗ್ ಜರ್ನಿ ಬಗ್ಗೆ ಮಾತನಾಡಿದ ಅವರು, ನಾಲ್ಕು ತಿಂಗಳು ಐದು ದಿನ ಶೂಟಿಂಗ್ ನಡೆಸಲಾಗಿದೆ. 80 ಲೋಕೇಷನ್, 15–20 ಸೆಟ್ ಹಾಕಿದ್ದೇವೆ ಎಂದು ಮಾಹಿತಿ ನೀಡಿದರು.

ನಿರ್ಮಾಪಕ ರಾಕ್ ಲೈನ್ ವೆಂಕಟೇಶ್ ಮಾತನಾಡಿ, ಇಡೀ ಚಿತ್ರರಂಗ ಇವತ್ತು ಇಲ್ಲಿದೆ. ಈ ರೀತಿ ಕಾರ್ಯಕ್ರಮ ತಿಂಗಳಲ್ಲಿ ಮೂರ್ನಾಲ್ಕು ನಡೆಯುತ್ತಿವೆ. ಮಾರ್ಕ್ ಟ್ರೇಲರ್, ಸಾಂಗ್ ನೋಡಿದಮೇಲೆ ಎದುಸಿರು ತೆಗೆದುಕೊಂಡೆ. ಸುದೀಪ್ ಅವರು ಸೆಟ್ ನಲ್ಲಿ ಎಲ್ಲರ ಗಮನಸೆಳೆದು, ಖುಷಿಯಾಗಿ ಇಡುತ್ತಾರೆ. ನಿರ್ದೇಶಕರದ್ದು ಎರಡನೇ ಚಿತ್ರ ಚೆನ್ನಾಗಿ ಮಾಡಿದ್ದಾರೆ. ಸತ್ಯ ಜ್ಯೋತಿ ತಮಿಳುನಾಡಿನಲ್ಲಿ ದೊಡ್ಡ ಬ್ಯಾನರ್. ಅವರು ಸುದೀಪ್ ಅವರ ಜೊತೆ ಚಿತ್ರ ಮಾಡಿರುವುದು ಖುಷಿ. ಚಿತ್ರದಲ್ಲಿ ಮಾಡಿದ ಎಲ್ಲಾ ಕಲಾವಿದರು ಚೆನ್ನಾಗಿ ನಟಿಸಿದ್ದಾರೆ ಎಂದರು. ವಿಜಯ್ ಕಾರ್ತಿಕೇಯನ್ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಮಾನವ ಕಳ್ಳ ಸಾಗಾಣಿಕೆ ಕಥೆ ಚಿತ್ರದಲ್ಲಿರೋದು ಟ್ರೈಲರ್ ನೋಡಿದರೆ ಅರ್ಥವಾಗುತ್ತಿದೆ. ಇದರ ಜೊತೆಗೆ ಪೊಲಿಟಿಕಲ್ ಅಂಶಗಳನ್ನು ಸೇರಿಸಿ ಟ್ರೇಲರ್ ಕಟ್ ಮಾಡಲಾಗಿದೆ.

ಪೊಲೀಸ್ ಅಜಯ್ ಮಾರ್ಕಂಡೇಯ ಅಲಿಯಾಸ್ 'ಮಾರ್ಕ್' ಆಗಿ ಕಿಚ್ಚ ಅಬ್ಬರಿಸಿದ್ದಾರೆ. ಯೋಗಿಬಾಬು, ನವೀನ್ ಚಂದ್ರ, ಗುರು ಸೋಮಸುಂದರಂ ಮತ್ತು ರೋಶಿನಿ ಪ್ರಕಾಶ್ ತಾರಾಗಣದಲ್ಲಿದ್ದಾರೆ.

ಅಜನೀಶ್ ಲೋಕನಾಥ್ ಸಂಗೀತ ಚಿತ್ರಕ್ಕಿದೆ.



ಸತ್ಯಜ್ಯೋತಿ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಸಿನಿಮಾ ನಿರ್ಮಾಣವಾಗಿದೆ. ಸುದೀಪ್ ಕೂಡ ಕೈ ಜೋಡಿಸಿದ್ದಾರೆ. ಶೇಖರ್ ಚಂದ್ರ ಛಾಯಾಗ್ರಹಣ ಚಿತ್ರಕ್ಕಿದೆ.

ಕೆಆರ್ ಜಿ ಜೊತೆಗೂಡಿ ಮಾರ್ಕ್ ವಿತರಣೆ ಮಾಡಲಿದ್ದಾರೆ ಪ್ರಿಯಾ ಸುದೀಪ್

ಮಾರ್ಕ್ ಸಿನಿಮಾ ಡಿಸೆಂಬರ್–25 ಕ್ಕೆ ಬರೋದು ಪಕ್ಕಾ ಆಗಿದೆ. ಹಾಗೆಯೇ ಇದರ ಜೊತೆಗೆ ಮತ್ತೊಂದು ವಿಶೇಷತೆ ಏನೆಂದರೆ ಮಾರ್ಕ್ ಚಿತ್ರವನ್ನು ಕಿಚ್ಚ ಸುದೀಪ್ ಅವರ ಪತ್ನಿ ಪ್ರಿಯಾ ಸುದೀಪ್ ವಿತರಣೆ ಮಾಡಲಿದ್ದಾರೆ. ಈ ಮೂಲಕ ನಿರ್ಮಾಣದ ಜೊತೆ ವಿತರಣೆಗೂ ಪ್ರಿಯಾ ಕಾಲಿಟ್ಟದ್ದಾರೆ. ಕೆಆರ್ ಜಿ ಜೊತೆಗೂಡಿ ಪ್ರಿಯಾ ಸುದೀಪ್ ಅವರು, ಸುಪ್ರಿಯಾನ್ವಿ ಸ್ಟುಡಿಯೋ ಮೂಲಕ ಮಾರ್ಕ್ ವಿತರಣೆ ಮಾಡಲಿದ್ದಾರೆ.

# ತೀರ್ಥರೂಪ ತಂದೆಯವರಿಗೆ ಟ್ರೇಲರ್ ರಿಲೀಸ್



ಹೊಂದಿಸಿ ಬರೆಯಿರಿ ಸಿನಿಮಾ ಮೂಲಕ ಬದುಕನ್ನು ಬಂದಂತೆ ಸ್ವೀಕರಿಸಿ ಎಂಬ ಸಂದೇಶ ಕೊಟ್ಟಿರುವ ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್. ಈಗ ಅವರು ಬದುಕಿನಲ್ಲಾದ ಒಂದು ಚಿಕ್ಕ ತಪ್ಪು ಕುಟುಂಬವನ್ನು ಎಷ್ಟು ದೂರು ಮಾಡುತ್ತದೆ. ಅದು ಒಂದಾಗಲು ಎಷ್ಟು ಸಮಯ ತೆಗೆದುಕೊಳ್ಳುತ್ತದೆ ಎಂಬ ಆಶಯದ ಜೊತೆಗೆ ತಂದೆ ತಾಯಿ ಮೌಲ್ಯಗಳನ್ನು ಸಾರುವ ಕಂಟೆಂಟ್ ನೊಂದಿಗೆ ಬಂದಿದ್ದಾರೆ. ಈ ಕಥೆಗೆ ಚಿತ್ರಕ್ಕೆ ತೀರ್ಥರೂಪ ತಂದೆಯವರಿಗೆ ಎಂಬ ಅಪ್ಪಟ ಟೈಟಲ್ ಇಟ್ಟಿದ್ದಾರೆ. ಈ ಸಿನಿಮಾದ ಟ್ರೇಲರ್ ಬಿಡುಗಡೆಯಾಗಿದೆ. ಬೆಂಗಳೂರಿನ ಎಂಎಂಬಿ ಲೆಗಸಿಯಲ್ಲಿ ನಿನ್ನೆ ಟ್ರೇಲರ್ ಲಾಂಚ್ ಕಾರ್ಯಕ್ರಮ ಜರುಗಿತು. ಹೊಂದಿಸಿ ಬರೆಯಿರಿ ಚಿತ್ರತಂಡ ತೀರ್ಥರೂಪ ತಂದೆಯವರಿಗೆ ಟ್ರೇಲರ್ ಬಿಡುಗಡೆ ಮಾಡಿ ಶುಭ ಹಾರೈಸಿದರು. ಟ್ರೇಲರ್ ಬಿಡುಗಡೆ ಬಳಿಕ ಹಿರಿಯ ನಟಿ ಸಿತಾರಾ ಮಾತನಾಡಿ, ನನಗೆ ಚಿತ್ರದಲ್ಲಿ ಒಂದೊಳ್ಳೆ ಪಾತ್ರ ಕೊಟ್ಟಿದ್ದಾರೆ. ನಿಮಗೆ ನನ್ನ ಪಾತ್ರ ಇಷ್ಟವಾಗುತ್ತದೆ. ಕಥೆ ಪ್ರೇಕ್ಷಕರ ಹೃದಯ ತಟ್ಟುತ್ತದೆ. ಕನ್ನಡದಲ್ಲಿ ತುಂಬಾ ದಿನಗಳ ಬಳಿಕ ಬಣ್ಣ ಹಚ್ಚಿದ್ದೇನೆ. ನಾನು ನನ್ನ ಕನಸು ಆದಮೇಲೆ ರಾಜೇಶ್ ನಟರಂಗ ಅವರ ಜೊತೆ ನಟಿಸಿದ್ದೇನೆ ಎಂದರು. ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ್ ಮಾತನಾಡಿ, ಇದು ಬೇರೆ ಕಥೆಗೆ ಇಟ್ಟ ಟೈಟಲ್. ನಾನು ನಿಹಾರ್ ಭೇಟಿಯಾದಾಗ ಕಥೆ ಬಗ್ಗೆ ಚರ್ಚೆ ಮಾಡಿದೆವು. ಥಿಯೇಟರ್ ಗೆ ಪ್ರೇಕ್ಷಕರನ್ನು ಆಕರ್ಷಿಸಲು ಟೈಟಲ್ ಬಹಳ ಮುಖ್ಯ. ಅಲ್ಲದೇ ಜನಕ್ಕೆ ಹತ್ತಿರವಾಗಿ ಇರಬೇಕು ಹಾಗೂ ಕಥೆಗೆ ಅದು ಸೂಟ್ ಆಗುವ ರೀತಿಯೂ ಇರಬೇಕು. ಹೀಗಾಗಿ ಈ ಚಿತ್ರಕ್ಕೆ ಇದೇ ಟೈಟಲ್ ಇಟ್ಟೇವು. ತೀರ್ಥರೂಪ ತಂದೆಯವರಿಗೆ ತುಂಬಾ ಒಳ್ಳೆ ಟೈಟಲ್ ಎಂದು ಎಲ್ಲರೂ ಹೇಳಿದರು. ಚಿತ್ರದ ಪ್ರಮುಖ ಪಾತ್ರಧಾರಿ ಹುಡುಕಾಟದಲ್ಲಿ ಕೊನೆಗೆ ಏನೂ ಸಿಗಲಿದೆ ಎನ್ನುವುದು ಚಿತ್ರದ ಆಶಯ.



# 'ಪೀಟರ್' ಚಿತ್ರದ ತಾಯೆ ತಾಯೇ ಎಮೋಷನ್ ಸಾಂಗ್ ಅನಾವರಣ

ದೂರದರ್ಶನ ಸಿನಿಮಾ ಖ್ಯಾತಿಯ ನಿರ್ದೇಶಕ ಸುಕೇಶ್ ಶೆಟ್ಟಿ ಅವರ ಎರಡನೇ ಪ್ರಯತ್ನ ಪೀಟರ್. ಟೈಟಲ್, ಹಾಡಿನ ಮೂಲಕ ಕುತೂಹಲ ಹೆಚ್ಚಿಸಿದ್ದ ಪೀಟರ್ ಸಿನಿಮಾದ ಟೀಸರ್ ಇತ್ತೀಚೆಗೆ ಬಿಡುಗಡೆಯಾಗಿ ಎಲ್ಲೆಡೆ ಅದ್ಭುತ ಪ್ರಶಂಸೆ ಕಂಡಿತ್ತು, ಸಿನಿಮಾ ಮತ್ತು ತಂಡದ ಮೇಲಿನ ಭರವಸೆ ಈಗ ಮತ್ತಷ್ಟು ಹೆಚ್ಚಾಗಿದೆ, . ಈಗಾಗಲೇ ಸುಂದರಿ ಸುಂದರಿ ಎಂಬ ಗೀತೆಗೆ ಒಳ್ಳೆ ಪ್ರತಿಕ್ರಿಯೆ ಸಿಕ್ಕಿದ್ದು, ಇದೀಗ ಥಿಂಕ್ ಮ್ಯೂಸಿಕ್ ಯೂಟ್ಯೂಬ್ ನಲ್ಲಿ ಎರಡೇ ಹಾಡು "ತಾಯೇ ತಾಯೇ" ರಿಲೀಸ್ ಆಗಿದೆ.

ತಾಯೇ ತಾಯೇ ಹಾಡು ಐದು ಭಾಷೆಯಲ್ಲಿ ಬಿಡುಗಡೆಯಾಗಿದೆ. ತಾಯಿ ಮಗನ ಬಾಂಧವ್ಯದ ಈ ಗೀತೆಗೆ ಕನ್ನಡದಲ್ಲಿ ಸುಕೀರ್ತ್ ಶೆಟ್ಟಿ ಸಾಹಿತ್ಯ ಒದಗಿಸಿದ್ದು, ಮಲಯಾಳಂ ಹೊರತುಪಡಿಸಿ ಕನ್ನಡ, ಹಿಂದಿ, ತೆಲುಗು ಹಾಗೂ ತಮಿಳು ಭಾಷೆಯಲ್ಲಿ ರಿತ್ವಿಕ್ ಮುರುಳಿಧರ್ ಸಂಗೀತ ನಿರ್ದೇಶನ ಮಾಡುವುದರ ಜೊತೆಗೆ ಧ್ವನಿಯಾಗಿದ್ದಾರೆ. ಹಿಂದಿ ಭಾಷೆಯಲ್ಲಿ ಕೂಡ ಈ ಹಾಡು ರಿಲೀಸ್ ಆಗಿರೋದು ವಿಶೇಷ, ಪ್ರತಿಷ್ಠಿತ ಇಷ್ವರ್ ಮ್ಯೂಸಿಕ್ ಹಿಂದಿ ಹಾಡಿನ ರೈಟ್ಸ್ ತನ್ನದಾಗಿಸಿಕೊಂಡಿದೆ.

ಮಲಯಾಳಂನಲ್ಲಿ ರಿಲೀಸ್ ಆಗಿರುವ "ಥಾಯೇ ಥಾಯೇ" ಹಾಡನ್ನು ತುಡುರಮ್ ಖ್ಯಾತಿಯ ಗಾಯಕ ಗೋಕುಲ್ ಗೋಪಕುಮಾರ್ ಅವರು ಹಾಡಿದ್ದಾರೆ. ಗೀತರಚನೆಕಾರ ಸಿಜು ತುರಾವೂರ್ ಸಾಹಿತ್ಯ ಬರೆದಿದ್ದಾರೆ.

ಯುರೋಪ್‌ನಲ್ಲಿ ಪೀಟರ್ ಪೀಟರ್ ಸಿನಿಮಾದ ತಾಯೇ ತಾಯೇ ಹಾಡಿನ ಸ್ಟ್ರಿಂಗ್ ಆರ್ಕೆಸ್ಟ್ರೇಶನ್ ಯುರೋಪಿನ ಬುಡಾಪೆಸ್ಟ್‌ನಲ್ಲಿ ರೆಕಾರ್ಡ್ ಮಾಡಲಾಗಿದೆ. ಕೆಡಿ ಸಿನಿಮಾದ ಹಾಡುಗಳು ಬಳಿಕ ಬುಡಾಪೆಸ್ಟ್ ನಲ್ಲಿ ಸ್ಟ್ರಿಂಗ್ ಆರ್ಕೆಸ್ಟ್ರೇಶನ್ ಮಾಡಿರುವುದು ಪೀಟರ್ ಚಿತ್ರಕ್ಕೆ ಅನ್ನೋದು ಮತ್ತೊಂದು ವಿಶೇಷ. ಪೀಟರ್ ಸಿನಿಮಾದಲ್ಲಿ ರಾಜೇಶ್ ಧ್ರುವ, ಜಾನ್ವಿ ರಾಯಲ, ರವೀಕ್ಷಾ ಶೆಟ್ಟಿ, ಪ್ರತಿಮಾ ನಾಯಕ್, ರಘು ಪಾಂಡೇಶ್ವರ್, ರಾಮ ನಾಡಗೌಡ, ವರುಣ್ ಪಟೇಲ್, ದೀನಾ ಪೂಜಾರಿ, ಭರತ್ ತಾರಾಬಳಗದಲ್ಲಿದ್ದಾರೆ. ಕನ್ನಡ ಚಿತ್ರರಂಗದ ಖ್ಯಾತ ಸೌಂಡ್ ಇಂಜಿನಿಯರ್ ರವಿ ಹೀರೆಮತ್ ಹಾಗೂ ರಾಕೇಶ್ ಹೆಗಡೆ ವೃದ್ಧಿ ಸ್ಟುಡಿಯೊಸ್ ಬ್ಯಾನರ್ ನಡಿ ಚಿತ್ರ ನಿರ್ಮಿಸಿದ್ದಾರೆ.

ಚಿತ್ರವು ಸೆನ್ಸಿಟಿವ್ ಸಸ್ಪೆನ್ಸ್ ಡ್ರಾಮಾ ಕಥಾಹಂದರ ಹೊಂದಿದ್ದು, ಅದರಲ್ಲಿಯೂ ಮುಖ್ಯವಾಗಿ ಚೆಂಡೆ ಮೇಳದ ಕಂಟೆಂಟ್ ಚಿತ್ರದಲ್ಲಿದೆ. ಕೇರಳದಲ್ಲಿ 300 ವರ್ಷಗಳಿಗೂ ಅಧಿಕ ಕಾಲದ ಇತಿಹಾಸ ಹೊಂದಿರುವ ಚೆಂಡೆ ಮೇಳವನ್ನು ಪೀಟರ್ ಸಿನಿಮಾದಲ್ಲಿ ಕಟ್ಟಿಕೊಡಲಾಗುತ್ತಿದೆ. ಗುರುಪ್ರಸಾದ್ ನರ್ನಾಡ್ ಛಾಯಾಗ್ರಹಣ, ನವೀನ್ ಶೆಟ್ಟಿ ಸಂಕಲನ, ದೇವರಾಜ್ ಕಲಾ ನಿರ್ದೇಶನ ಚಿತ್ರಕ್ಕಿದೆ.



# ರಿಷಿ–ರಿತನ್ಯಾ ನಟನೆಯ 'ಜವರ' ಸಿನಿಮಾಗೆ ಅದ್ದೂರಿ ಮುಹೂರ್ತ

ಜವರ...ಸ್ಯಾಂಡಲ್‌ವುಡ್‌ನಲ್ಲಿ ಸೆಟ್ಟೇರಿದ ಹೊಸ ಸಿನಿಮಾ... ಅಪರೇಷ್ ಅಲಮೇಲಮ್ಮ ಖ್ಯಾತಿಯ ನಟ ರಿಷಿ ಹಾಗೂ ದುನಿಯ ವಿಜಯ್ ಅವರ ಮೊದಲ ಪುತ್ರಿ ರಿತನ್ಯಾ ಪ್ರಮುಖ ಪಾತ್ರದಲ್ಲಿ ನಟಿಸುತ್ತಿರುವ ಸಿನಿಮಾ ಜವರ. ಯಲಾ ಕುನ್ನಿ ಸಿನಿಮಾ ಖ್ಯಾತಿಯ ನಿರ್ದೇಶಕ ಪ್ರದೀಪ್ ದಳವಾಯ್ ಸಾರಥ್ಯದಲ್ಲಿ ಮೂಡಿಬರುತ್ತಿದ್ದು, ಚಿದಾವೃಷಭ ಅವರು ನಿರ್ಮಾಣದ ಜವಾಬ್ದಾರಿ ವಹಿಸಿಕೊಂಡಿದ್ದಾರೆ.

ಜವರ ಸಿನಿಮಾದ ಮುಹೂರ್ತ ಬಂಡೆ ಮಹಾಕಾಳಿ ದೇವಸ್ಥಾನದಲ್ಲಿಅದ್ದೂರಿಯಾಗಿ ನೆರವೇರಿತು. ಜವರ ಟೈಟಲ್ ಕೇಳಿದ್ರೆ ಮೈ ಜುಮ್ ಎನ್ನುವಂತಿದೆ. ಮಾಸ್ ಟೈಟಲ್ ರಿವೀಲ್ ಮಾಡುವ ಜೊತೆಗೆ ಚಿತ್ರೀಕರಣಕ್ಕೆ ಚಾಲನೆ ಕೂಡ ಸಿಕ್ಕಿದೆ. ಸ್ಮಶಾನದಲ್ಲಿ ಶವಗಳನ್ನು ಹೂಳುವ ಕೆಲಸ ಮಾಡುತ್ತಿರುವ ನೀಲಮ್ಮ ಜವರ ಸಿನಿಮಾಗೆ ಕ್ಲಾಪ್ ಮಾಡಿದ್ದು ವಿಶೇಷವಾಗಿತ್ತು.

ಸಿನಿಮಾದ ವಿಶೇಷ ಪಾತ್ರಗಳಲ್ಲಿ ಹಿರಿಯ ನಟ ರಂಗಾಯಣ ರಘು ಮತ್ತು ನಟಿ ಶ್ರುತಿ ಕಾಣಿಸಿಕೊಳ್ಳುತ್ತಿರುವುದು ಸಿನಿಮಾದ ಮೇಲಿನ ನಿರೂಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ.

ನಟ ರಂಗಾಯಣ ರಘು ಈ ಸಿನಿಮಾದಲ್ಲಿ ಗೌರಿ ಎನ್ನುವ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಬಗ್ಗೆ ಮಾತನಾಡಿದ ರಂಗಾಯಣ ರಘು ಅವರು ಶ್ರುತಿ ಅವರ ಜೊತೆ ಮತ್ತೆ ನಟಿಸುತ್ತಿದ್ದೀನಿ. ಪಾತ್ರ ತುಂಬಾ ಅದ್ಭುತವಾಗಿದೆ. ಈ ಸಿನಿಮಾದಲ್ಲಿ ನಾನು ಇರುವ ಜಾಗ ತುಂಬಾ ಪ್ರಶಾಂತವಾಗಿರುತ್ತೆ, ಶಿವ ಇರುವ ಜಾಗವದು. ಅಂಥ ಅದ್ಭುತ ಪಾತ್ರದಲ್ಲಿ ನಟಿಸುತ್ತಿದ್ದೇನೆ ' ಎಂದು ಹೇಳಿದರು.

ಇನ್ನೂ ನಟಿ ಶ್ರುತಿ ರಾಯಲ್ ಮೀನಾಕ್ಷಿ ಎನ್ನುವ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ತನ್ನ ಪಾತ್ರದ ಬಗ್ಗೆ ತುಂಬಾ ಖುಷಿಯಾಗಿರುವ ಶ್ರುತಿ, 'ಕಥೆ ತುಂಬಾ ಚೆನ್ನಾಗಿದೆ. ಬದುಕೆಲ್ಲ ಮುಗಿದ ಮೇಲೆ ಹೊರಡುವ ಜಾಗದಲ್ಲಿ ಇರ್ತೀನಿ' ಎಂದು ಹೇಳಿದರು.

ಇನ್ನೂ ನಟಿ ರಿತನ್ಯಾ ಜವರ ಸಿನಿಮಾ ಮೂಲಕ ಅಧಿಕೃತವಾಗಿ ನಾಯಕಿಯಾಗಿ ಸ್ಯಾಂಡಲ್ ವುಡ್‌ಗೆ ಎಂಟ್ರಿ ಕೊಡುತ್ತಿದ್ದಾರೆ. ಈ ಮೊದಲು ಲ್ಯಾಂಡ್ ಲಾರ್ಡ್ ಸಿನಿಮಾದಲ್ಲಿ ನಟಿಸಿದ್ದರೂ ನಾಯಕಿಯಾಗಿ ಜವರ ಮೂಲಕ ಎಂಟ್ರಿ ಕೊಡುತ್ತಿದ್ದಾರೆ. ಈ ಸಿನಿಮಾದಲ್ಲಿ ರಿತನ್ಯಾ ಭೂಮಿ ಎನ್ನುವ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಮಾತನಾಡಿದ ರಿತನ್ಯಾ, 'ವೈದ್ಯಕೀಯ ವಿದ್ಯಾರ್ಥಿನಿಯಾಗಿ ಕಾಣಿಸಿಕೊಳ್ಳುತ್ತಿದ್ದೇನೆ. ದೊಡ್ಡ ದೊಡ್ಡ ಕಲಾವಿದರು ಈ ಸಿನಿಮಾದಲ್ಲಿದ್ದಾರೆ ಅವರ ಜೊತೆ ನಟಿಸುತ್ತಿರುವುದು ತುಂಬಾ ಖುಷಿ ಇದೆ. ನಾನು ತುಂಬಾ ಲಕ್ಕಿ ಎನಿಸುತ್ತೆ' ಎಂದು ಹೇಳಿದರು.

ನಟ ರಿಷಿ ರುದ್ರ ಎನ್ನುವ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಮಾತನಾಡಿ, ಕಥೆ ತುಂಬಾ ಇಷ್ಟವಾಯಿತು, ನಿರ್ದೇಶಕರು ಕಥೆ ಹೇಳುವಾಗಲೇ ಸ್ಕ್ರೀನ್ ಪ್ಲೇ ಕೂಡ ರೆಡಿಮಾಡಿಕೊಂಡಿದ್ದರು. ಅದು ತುಂಬಾ ಇಷ್ಟ ಆಯ್ತು. ನಿರ್ದೇಶಕರು ತುಂಬಾ ಯೋಚಿಸಿ ಮಾಡಿರುವ ಕಥೆ ಇದು.ನಿರ್ದೇಶಕ ಎನ್ನುವುದಕ್ಕಿಂತ ಕ್ರಿಯೇಟಿವ್ ಹೆಡ್ ಎನ್ನುಬಹುದು. ರಿತನ್ಯಾ ತುಂಬಾ ಚೆನ್ನಾಗಿ ನಟಿಸುತ್ತಾರೆ' ಎಂದು ಹೇಳಿದರು.

ನಿರ್ದೇಶಕ ಪ್ರದೀಪ್ ಈ ಸಿನಿಮಾದಲ್ಲಿ ನಿರ್ದೇಶನದ ಜೊತೆಗೆ ಸಂಭಾಷಣೆಯ ಜಾಬ್ದಾರಿಯನ್ನು ವಹಿಸಿಕೊಂಡಿದ್ದಾರೆ. ಈ ಬಗ್ಗೆ ಮಾತನಾಡಿ, 'ಸಿನಿಮಾದ ಕಥೆಗೆ ನಟಿ ಶ್ರುತಿ ಮತ್ತು ರಂಗಾಯಣ ರಘು ಅವರು ತುಂಬಾ ಅವಶ್ಯಕತೆ ಇತ್ತು. ಪಾತ್ರ ತುಂಬಾ ಚೆನ್ನಾಗಿದೆ. ರಿತನ್ಯಾ ಅವರು ತುಂಬಾ ಚೆನ್ನಾಗಿ ನಟಿಸುತ್ತಾರೆ. ಅದನ್ನ ನೋಡಿ ವಿಜಯ್ ಅವರಿಗೆ ಕಥೆ ಹೇಳಿದೆ ,ಅವರಿಗೆ ಇಷ್ಟ ಆಯ್ತು ಮಗಳಿಗೆ ಓಕೆ ಆಗಬೇಕು ಅಂತ ಹೇಳಿದರು. ಬಳಿಕ ರಿತನ್ಯಾ ಕೂಡ ಒಪ್ಪಿಕೊಂಡರು. ರಿಷಿ ತುಂಬಾ ಒಳ್ಳೆಯ ಕಲಾವಿದ' ಎಂದು ಹೇಳಿದರು. ಧರ್ಮ ವಿಶ್ ಸಂಗೀತ ನಿರ್ದೇಶನ ಮಾಡುತ್ತಿದ್ದಾರೆ. ಯಲಾ ಕುನ್ನಿ ಸಿನಿಮಾದಲ್ಲೂ ನಿರ್ದೇಶಕ ಪ್ರದೀಪ್ ಮತ್ತು ಧರ್ಮವಿಶ್ ಒಟ್ಟಿಗೆ ಕೆಲಸ ಮಾಡಿದ್ದರು ಇದೀಗ ಜವರ ಸಿನಿಮಾದಲ್ಲೂ ಇಬ್ಬರ ಕಾಂಬಿನೇಷನ್ ಮುಂದುವರೆದಿರುವುದು ವಿಶೇಷ. ಹಾಲೇಶ್ ಕ್ಯಾಮರಾ ವರ್ಕ್ ಸಿನಿಮಾಗಿರಲಿದೆ.



ಕನ್ನಡದ ಖ್ಯಾತ ನಿರ್ಮಾಪಕ, ನಿರ್ದೇಶಕ, ಸಾಹಿತಿ,ಕಲಾವಿದ ಟಿ.ಎನ್.ಸೀತಾರಾಮ್ ಅವರ ಹುಟ್ಟುಹಬ್ಬ ಸಂದರ್ಭದಲ್ಲಿ ಪತ್ನಿ ಗೀತಾ ಹಾಗೂ ಪುತ್ರಿ ಅಶ್ವಿನಿ ಹಾಗೂ ಭೂಮಿಕಾ ತಂಡದ ಸದಸ್ಯರು ಪಾಲ್ಗೊಂಡು ಸಂಭ್ರಮಿಸಿದರು.

# ಅಪ್ಪ -ಮಗನ ಗಟ್ಟಿ ಕಥೆ ನಾನು ಕರುಣಾಕರ



ಅಪ್ಪು ಅವರನ್ನ ಆರಾಧ್ಯ ದೈವ ಎಂದೇ ಕಾಣುವ ನಿರ್ದೇಶಕ ಕಮ್ ನಟ ಆರ್ಯನ್ ತೇಜಸ್, ಸದ್ಯ ನಾನು ಕರುಣಾಕರ ಎಂದು ಬರ್ತಾ ಇದ್ದಾರೆ. ಮೂಲತಃ ಹಾಸನದವರು. ರಂಗಭೂಮಿಯತ್ತ ಬಂದು ನಟನೆ, ನಿರ್ದೇಶನವನ್ನು ಕಲಿತರು. ಸಿಲ್ಲಿಲಲ್ಲಿ ಸೇರಿದಂತೆ ಹಲವು ಧಾರವಾಹಿಗಳಲ್ಲೂ ನಟಿಸಿದ್ದಾರೆ. ದಿನೇ ದಿನೇ ಕಳೆದ ಮೇಲೆ ಕ್ಯಾಮೆರಾ ಅಸಿಸ್ಟೆಂಟ್ ಹಾಗೂ ನಿರ್ದೇಶನದ ಟೀಂ ಜೊತೆಗೆ ಕೆಲಸ ಮಾಡಿರ್ತಾರೆ. ಆದರೂ ಅದ್ಯಾಕೋ ಇಂಡಸ್ಟ್ರಿ ಕೈಹಿಡಿಯಲಿಲ್ಲ ಅನ್ನಿಸಿ ಮತ್ತೆ ಹಾಸನದತ್ತ ಪ್ರಯಾಣ ಬೆಳೆಸುತ್ತಾರೆ. ಆದ್ರೆ ಮತ್ತೆ ಕನಸು ಸುಮ್ಮನೆ ಇರೋದಕ್ಕೆ ಬಿಡಬೇಕಲ್ಲ. ಮತ್ತೆ ಬೆಂಗಳೂರಿಗೆ ವಾಪಾಸ್ ಬಂದವರು ಇದೀಗ ನಾನು ಕರುಣಾಕರ ಎಂಬ ಸಿನಿಮಾ ಮಾಡಿದ್ದಾರೆ.

ಈ ಮೊದಲು ಪಾರ್ಕ್ ರೋಡ್ 100 ರೂಪಾಯಿ ಸಿನಿಮಾವನ್ನ ಮಾಡಿದ್ದರು. ಅದು ಶಿಕ್ಷಣದ ಮೇಲೆ ಇದ್ದಂತ ಸಿನಿಮಾ. ಪಾರ್ಕ್ ರೋಡ್ 100 ರೂಪಾಯಿ ಸಿನಿಮಾ ನೂರಾರು ಶಾಲೆಗಳಲ್ಲಿ ಪ್ರಸಾರ ಮಾಡಲಾಗಿತ್ತು. ಎಲ್ಲರೂ ನೀಡಿದ ಸ್ಫೂರ್ತಿಯಿಂದಾನೇ ಇಂದು ಮತ್ತೊಂದು ಸಿನಿಮಾ ಆಗಿದೆ. ಕೊರೊನಾಗೂ ಮೊದಲು ಕಥೆಯನ್ನ ಮಾಡಿಕೊಂಡಿದ್ದರು. ಸುನೀಲ್ ಅವರು ನಿರ್ಮಾಪಕರಾದ ಸಂತೋಷ ಅವರಿಗೆ ಕಥೆ ಹೇಳಿದಾಗ ಈ ಕಥೆನ ಸಿನಿಮಾ ಮಾಡಿದರೆ ಅದ್ಭುತವಾಗಿರುತ್ತದೆ ಎಂಬುದು ಅರ್ಥವಾದಾಗ ಸಿನಿಮಾಗೆ ತಕ್ಕಂತೆ ಕಥೆಯನ್ನು ಎಣೆದು ಸಿನಿಮಾ ಮಾಡಲಾಯ್ತು. ಕನ್ನಡಕ್ಕೆ ಒಂದು ಒಳ್ಳೆ ಸಿನಿಮಾ ಕೊಡಬೇಕು ಎಂಬ ನಿಟ್ಟಿನಲ್ಲಿ ನಮನ್ ನಾರಾಯಣ್ ಸಂತೋಷ್ ಮತ್ತು ವೈಭವ್ ಸುರೇಶ್ ,ಶ್ರೀಕಾಂತ ಬಿ ಬಿ, ರವರು ಚಿತ್ರದ ನಿರ್ಮಾಣ ಮಾಡಿದ್ದಾರೆ.

ನಾನು ಕರುಣಾಕರ ಸಿನಿಮಾ ಎಲ್ಲರ ಲೈಫ್ ಗೂ ತುಂಬಾನೇ ಕನೆಕ್ಟ್ ಆಗುತ್ತೆ ಎಂಬ ಭರವಸೆಯನ್ನ ಚಿತ್ರತಂಡ ನೀಡಿದೆ. ಇದೊಂದು ಅಪ್ಪ ಮಗನ ಹಾಗೂ ಗಂಡ ಹೆಂಡತಿಯ ಬಾಂಧವ್ಯವನ್ನು ಹೊತ್ತ ಕಥೆಯಾಗಿದೆ. ಇಡೀ ಫ್ಯಾಮಿಲಿ ಕೂತು ನೋಡಿದಾಗ ಆ ತುಂಟ ಒಬ್ಬೊಬ್ಬರ ಮನೆಯಲ್ಲೂ ಇರೋದು ನಿಮಗೆ ಅರಿವಾಗುತ್ತದೆ.

ಸದ್ಯ ಸಿನಿಮಾ ತನ್ನೆಲ್ಲಾ ಕೆಲಸ ಮುಗಿಸಿ ಫೆಬ್ರವರಿ 6ಕ್ಕೆ ಸಿನಿಮಾ ರಿಲೀಸ್ ಆಗುತ್ತಾ ಇದೆ.

ನಮ್ಮ ಪಾಪ್ ಕಾರ್ನ್ ಸಿನಿಮಾ ಪ್ರೊಡಕ್ಷನ್ ಮೂಲಕ ನಿರ್ಮಾಣವಾಗಿರುವ ನಾನು ಕರುಣಾಕರ ಸಿನಿಮಾಗೆ ನಿರ್ದೇಶನ ಮತ್ತು ಹೀರೋ ಆಗಿ ಆರ್ಯನ್ ತೇಜಸ್ ಕಾಣಿಸಿಕೊಂಡಿದ್ದಾರೆ. ಜೋಡಿಯಾಗಿ ಭಾರ್ಗವಿ ಎಲ್ ಎಲ್ ಬಿ ಖ್ಯಾತಿಯ ರಾಧಾ ಭಗವತಿ ಮಾ" ಭವೀಶ್ ಇದ್ದಾರೆ. ಉಳಿದಂತೆ ಕರಿಸುಬ್ಬು,

ಎಂಕೆ ಮಠ,

ಬಿ ಎಂ ವೆಂಕಟೇಶ ಅಪೂರ್ವ, ಸೇರಿದಂತೆ ಹಲವರು ತೆರೆ ಹಂಚಿಕೊಂಡಿದ್ದಾರೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,